ಸಂಪುಟ: 04 ಸಂಚಿಕೆ: 303 ಪುಟಗಳು: 08 ಬುಧವಾರ 15 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮೋಡ ಕವಿದ ಹಿನ್ನಲೆ: ಗವಿ ಗಂಗಾಧರನಿಗೆ ಸ್ಪರ್ಶಿಸದ ಸೂರ್ಯ

• **ಉದಯವಾಹಿನಿ, ಬೆಂಗಳೂರು**

ವರ್ಷದ ಮೊದಲ ಸುಗ್ಗಿ ಹಬ್ಬವಾದ ಮಕರ ಸಂಕ್ರಾಂತಿ ನಾಳಿನಲ್ಲಿಡೆ ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಇದೇ ಸಂದರ್ಭದಲ್ಲಿ ಬೆಂಗಳೂರಿನ ಬಸವನಗುಡಿಯಲ್ಲಿರುವಂತ ಗವಿ ಗಂಗಾಧರೇಶ್ವರ ದೇವಸ್ಥಾನದಲ್ಲಿ ಸೂರ್ಯರಶ್ಮಿಯ ಚಮತ್ಕಾರವೇ ನಡೆಯಬೇಕಿತ್ತು. ಆದರೇ ಮೋಡಕವಿತ ವಾತಾವರಣದ ಹಿನ್ನಲೆಯಲ್ಲಿ ಇತಿಹಾಸದಲ್ಲಿ ಮೂರನೇ ಬಾರಿಗೆ ಎನ್ನುವಂತೆ ಗವಿಗಂಗಾಧರೇಶ್ವರನನ್ನು ಸೂರ್ಯ ರಶ್ಮಿ ಇಂದು ಸ್ಪರ್ಶಿಸಲು ಸಾಧ್ಯವಾಗಲಿಲ್ಲ. ಸಿನಿಮಾ ಸಂಕ್ರಾಂತಿ ಹಬ್ಬದ ದಿನದಂದು ಸೂರ್ಯನು ದಕ್ಷಿಣ ಪಥದಿಂದ ಉತ್ತರಪದಕತನ ದಿಕ್ಕನ್ನು ಬದಲಿಸುವ ವೇಳೆ ಬೆಂಗಳೂರಿನ ಬಸವನಗುಡಿಯಲ್ಲಿರುವಂತ ಗವಿಗಂಗಾಧರೇಶ್ವರ ದೇವಸ್ಥಾನದಲ್ಲಿರುವ ಶಿವನ ಮೂರ್ತಿಗೆ ಸೂರ್ಯನ ಕಿರಣಗಳು ಸ್ಪರ್ಶಿಸಬೇಕಿತ್ತು. ಇದು ಪ್ರತಿವರ್ಷ ಸಂಕ್ರಾಂತಿ ಹಬ್ಬದ ದಿನದಂದೇ ವಿಸ್ಮಯ ಹಾಗೂ ಕೌತುಕ ಘಟನೆ ಕೂಡ ಆಗಿತ್ತು. ಇಂದು ಸಂಜೆ 5.114 ರಿಂದ 5.17 ನಿಮಿಷದ ವರೆಗೆ ಸೂರ್ಯರಶ್ಮಿ ಶಿವನಿಗೆ ನಮಿಸಬೇಕಿತ್ತು. ಸುಮಾರು ಮೂರು ನಿಮಿಷಗಳ ಕಾಲ ಸೂರ್ಯನ ಕಿರಣಗಳು ಗಂವಿ ಗಂಗಾಧರೇಶ್ವರ ಮೂರ್ತಿಯನ್ನು ಸ್ಪರ್ಶಿಸುವ ನಿರೀಕ್ಷೆಯಿತ್ತು. ಈ ಸೂರ್ಯ ರಶ್ಮಿಯ ಚಮತ್ಕಾರವನ್ನು ನೆರೆದಿದ್ದಂತ ನೂರಾರು ಭಕ್ತರು ಕಣ್ ತುಂಬಿಕೊಳ್ಳಲು ಕಾತುರದಿಂದ ಕಾಯುತ್ತಿದ್ದರು. ಆದರೇ ಮೋಡ ಕವಿದ ವಾತಾವರಣದಿಂದಾಗಿ ಗವಿಗಂಗಾಧರೇಶ್ವರನನ್ನು ಸೂರ್ಯ ಸ್ಪರ್ಶಿಸಲಿಲ್ಲ. ಈ ಮೂಲಕ ಇತಿಹಾಸದಲ್ಲಿ 3ನೇ ಬಾರಿಗೆ ಬಸವನಗುಡಿಯಲ್ಲಿನ ಗವಿಗಂಗಾಧರೇಶ್ವರನನ್ನು ಸೂರ್ಯ ರಶ್ಮಿ ಸ್ಪರ್ಶಿಸಲಿಲ್ಲ ಎಂಬುದಾಗಿ ಪುರೋಹಿತರು ತಿಳಿಸಿದರು.

## ಡಾಟ್ ಡಾಟ್ ಡಾಟ್ ಪಾಕ್‌ಗೆ 'ರಕ್ಷಣಾ ಸಚಿವರ' ಎಚ್ಚರಿಕೆ

• **ಉದಯವಾಹಿನಿ, ನವದೆಹಲಿ**

ಕಾಶ್ಮೀರ ಜಮ್ಮು ಮತ್ತು ಕಾಶ್ಮೀರದ ಅಖರ್‌ನಿಂದ ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಭಯೋತ್ಪಾದಕರ ಲಾಂಚ್ ಪ್ಯಾಡ್ ನಿರ್ಮಿಸಿರುವ ಬಗ್ಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪಾಕಿಸ್ತಾನದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಪಾಕಿಸ್ತಾನದ ಹೆಸರನ್ನ ಕಟುವಾದ ಸ್ವರದಲ್ಲಿ ತೆಗೆದುಕೊಂಡ ಅವರು, ತಕ್ಷಣ ಲಾಂಚಿಂಗ್ ಪ್ಯಾಡ್ ನಾಶಪಡಿಸಿ, ಇಲ್ಲದಿದ್ದರೆ ಡಾಟ್ ಡಾಟ್ ಡಾಟ್ ಎಂದು ಹೇಳಿದರು. 9ನೇ ಸಶಸ್ತ್ರ ಪಡೆಗಳ ಯೋಧರ ದಿನಾಚರಣೆ ಕಾರ್ಯಕ್ರಮದಲ್ಲಿ ರಾಜನಾಥ್ ಸಿಂಗ್ ಮಾತನಾಡುತ್ತಿದ್ದರು. ಪಿಒಕೆ ಇಲ್ಲದೆ ಜಮ್ಮು ಮತ್ತು ಕಾಶ್ಮೀರ ಅಪೂರ್ಣವಾಗಿದೆ ಎಂದು ಅವರು ಹೇಳಿದರು. ಪಿಒಕೆ ಪಾಕಿಸ್ತಾನಕ್ಕೆ ವಿದೇಶಿ ಪ್ರದೇಶವಲ್ಲದೆ ಬೇರೇನೂ ಅಲ್ಲ ಎಂದರು. ಪಿಒಕೆ ಭೂಮಿಯನ್ನ ಭಯೋತ್ಪಾದಕರಿಗಾಗಿ ಬಳಸಲಾಗು ತ್ತಿದೆ. ಪಿಒಕೆಯಲ್ಲಿ ಭಯೋತ್ಪಾದನೆ ವ್ಯವಹಾರ ನಡೆಯುತ್ತಿದೆ. ಪಾಕಿಸ್ತಾನ ಅದನ್ನ ನಾಶಪಡಿಸಬೇಕು, ಇಲ್ಲದಿದ್ದರೆ ಡಾಟ್ ಡಾಟ್ ಡಾಟ್ ಎಂದರು. 1965ರಲ್ಲಿ ಅನ್ನೂರ್‌ನಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧ ನಡೆದಿತ್ತು ಎಂದು ರಾಜನಾಥ್ ಸಿಂಗ್ ಹೇಳಿದ್ದಾರೆ. ಪಾಕಿಸ್ತಾನ ಸೇನೆಯ ಪ್ರಯತ್ನವನ್ನ ವಿಫಲಗೊಳಿಸುವಲ್ಲಿ ಭಾರತ ಯಶಸ್ವಿಯಾಗಿತ್ತು. ಇತಿಹಾಸದ ಎಲ್ಲಾ ಯುದ್ಧಗಳಲ್ಲಿ ಭಾರತ ಯಾವಾಗಲೂ ಪಾಕಿಸ್ತಾನವನ್ನ ಸೋಲಿಸಿದೆ. ಪಾಕಿಸ್ತಾನವು 1965 ರಿಂದ ಅಕ್ರಮ ಒಳನುಸುಳುವಿಕೆ ಮತ್ತು ಭಯೋತ್ಪಾದನೆಯನ್ನು ಉತ್ತೇಜಿಸುತ್ತಿದೆ ಎಂದರು.

## ವೆಂಡರ್‌ಗಳು ಆತ್ಮಹತ್ಯೆ ಮಾಡಿ ಕೊಂಡರೆ ಪ್ರಿಯಾಂಕ್ ಹೊಣೆ

• **ಉದಯವಾಹಿನಿ, ಬೆಂಗಳೂರು**

ಈಗಾಗಲೇ ಬೀದರ್‌ನ ಗುತ್ತಿಗೆದಾರ ಸಚಿನ್ ಪಂಚಾಳ್ ಆತ್ಮಹತ್ಯೆ ಕೇಸ್ ನಲ್ಲಿ ಗಂಭೀರವಾದ ಆರೋಪ ಎದುರಿಸುತ್ತಿರುವ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಇದೀಗ ಮತ್ತೊಂದು ಆರೋಪ ಕೇಳಿ ಬರುತ್ತಿದ್ದು, ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಶರತ್ ಬಚ್ಚೇಗೌಡ ವಿರುದ್ಧ ಆರೋಪ ಕೇಳಿ ಬಂದಿದೆ. ಈ ಕುರಿತು ದಯಾಮರಣ ಕೋರಿ ವೆಂಡರ್ಸ್‌ಗಳು ಇದೀಗ ಪತ್ರ ಬರೆದಿದ್ದಾರೆ. ಸಿನಿಮಾ ಹೌದು ಕಿಯೋನಿಕ್ಸ್ ವೆಂಡರ್ಸ್ ಅಸೋಸಿಯೇಷನ್ ಈ ಕುರಿತು ಪತ್ರ ಬರೆದಿದ್ದು ವೆಂಡರ್ಸ್‌ಗಳು ಆತ್ಮಹತ್ಯೆ ಮಾಡಿ ಕೊಂಡರೆ ನಾಲ್ವರು ಹೊಣೆ. ಪ್ರಿಯಾಂಕ್ ಖರ್ಗೆ ಸೇರಿ ನಾಲ್ವರು ಹೊಣೆ ಎಂದು ಪತ್ರ ಬರೆದಿದ್ದಾರೆ. ವೆಂಡರ್ಸ್‌ಗಳ ಬಾಕಿ ಬಿಲ್ ಪಾವತಿ ಮಾಡುತ್ತಿಲ್ಲ ಒಂದು ವರ್ಷದಿಂದ ತನಿಖೆಯ ನೆಪದಲ್ಲಿ ಕಿರುಕುಳ ನೀಡಲಾಗುತ್ತಿದೆ.

400 ರಿಂದ 500 ವಂಡರ್ಸ್‌ಗಳಿಗೆ ಬಿಲ್ ಪಾವತಿ ಬಾಕಿ ಇದೆ. ಪ್ರಿಯಾಂಕ್ ಖರ್ಗೆ, ಶರತ್ ಬಚ್ಚೇಗೌಡ ಕಷ್ಟವನ್ನು ಆಲಿಸುತ್ತಿಲ್ಲ. ಯಾರಾದರೂ ವೆಂಡರ್ಸ್ ಆತ್ಮಹತ್ಯೆ ಮಾಡಿಕೊಂಡರೆ ಅದಕ್ಕೆ ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಕಿಯೋನಿಕ್ಸ್ ಅಧ್ಯಕ್ಷ ಶರತ್ ಸಿಇಒ ಪವನ್ ಕುಮಾರ್ ಕಿಯೋನಿಕ್ಸ್ ಹಣಕಾಸು ವಿಭಾಗದ ನಿಶ್ಚಿತ್ ಅವರೇ ಕಾರಣ ಇಲ್ಲದಿದ್ದರೆ ವೆಂಡರ್ಸ್‌ಗಳಿಗೆ ದಯಾಮರಣ ನೀಡುವಂತೆ ಇದೀಗ ಪತ್ರ ಬರೆದಿದ್ದಾರೆ. ಹಾಗಾಗಿ ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಇದೀಗ ಮತ್ತೊಂದು ಸಂಕಷ್ಟ ಎದುರಾಗಿದೆ.

# ನೀಲಿಮಲೆಯ ಜೀವದೊಡೆಯ

**ಪಂದಳ ರಾಜಮನೆತನದಿಂದ ಆಭರಣಗಳನ್ನು ತಂದು ಅಯ್ಯಪ್ಪ ಸ್ವಾಮಿಗೆ ವಿಶೇಷ ಅಲಂಕಾರ**

**ಭೇದ-ಭಾವವಿಲ್ಲದೇ ಜ್ಯೋತಿಯ ಬೆಳಕನ್ನು ನೋಡಿ ಕಣ್ತುಂಬಿಕೊಂಡ ಲಕ್ಷಾಂತರ ಭಕ್ತರು**

• **ಉದಯವಾಹಿನಿ, ಶಬರಿಮಲೆ**

ಸಂಕ್ರಾಂತಿಯಂದು ಜ್ಯೋತಿ ರೂಪದಲ್ಲಿ ಅಯ್ಯಪ್ಪ ಭಕ್ತರಿಗೆ ದರ್ಶನ ನೀಡಿದ್ದಾನೆ. ಸಂಜೆ 6:44ಕ್ಕೆ ಅಯ್ಯಪ್ಪ ದೇಗುಲದ ಎದುರಿನ ಪೊನ್ನಂಬಲಮೇಡುವಿನಲ್ಲಿ ಜ್ಯೋತಿ ದರ್ಶನವಾಯಿತು. ಈ ವೇಳೆ ಅಯ್ಯಪ್ಪನ ಭಕ್ತಿ ಗೀತೆ ಗುಣಗಾನ ಮಾಡುತ್ತಾ ಲಕ್ಷಾಂತರ ಭಕ್ತರು ಮಕರ ಜ್ಯೋತಿ ದರ್ಶನ ಪಡೆದರು. ಶಬರಿಮಲೆ ಅಯ್ಯಪ್ಪ ದೇಗುಲದಲ್ಲಿ ಮಕರ ಸಂಕ್ರಾಂತಿ ಪ್ರಯುಕ್ತ ವಿಶೇಷ ಪೂಜೆಗಳು ನಡೆದವು. ಪಂದಳ ರಾಜಮನೆತನದಿಂದ ಆಭರಣಗಳನ್ನು ತಂದು ಅಯ್ಯಪ್ಪ ಸ್ವಾಮಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ಮಹಾಮಂಗಳಾರತಿ ವೇಳೆಗೆ ಜ್ಯೋತಿರೂಪದಲ್ಲಿ ಅಯ್ಯಪ್ಪ ಭಕ್ತರಿಗೆ ದರ್ಶನಕೊಟ್ಟಿದ್ದಾನೆ. ಭಕ್ತ ಸಮೂಹದ ನಿರ್ವಹಣೆ ಮತ್ತು ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ದೇವಾಲಯ ಮತ್ತು ಅದರ ಸುತ್ತಮುತ್ತಪೊಲೀಸ್ ಭದ್ರತೆ ಕಲ್ಪಿಸಲಾಗಿತ್ತು. ಶಬರಿಮಲೆಯಿಂದ 4 ಕಿಲೋ ಮೀಟರ್ ದೂರದಲ್ಲಿರುವ ಪೊನ್ನಂ ಬಲಮೇಡುವಿನಲ್ಲಿ ಮಕರ ಜ್ಯೋತಿಯ ಅಮೃತ ಘಳಿಗೆಗಾಗಿ ಕಾದಿದ್ದ ಲಕ್ಷಾಂತರ ಭಕ್ತರು ಶ್ರೀಮಂತರು ಮತ್ತು ಬಡವರು ಎಂಬ ಭೇದ-ಭಾವವಿಲ್ಲದೇ ಜ್ಯೋತಿಯ ಬೆಳಕನ್ನು ನೋಡಿ ಕಣ್ತುಂಬಿಕೊಂಡರು. ದೇವರನಾಡು'' ಎಂದು ಕರೆಯಲ್ಪಡುವ ಕೇರಳದ ಪವಿತ್ರ ಸ್ಥಳವಾದ ಅಯ್ಯಪ್ಪ ದೇಗುಲದಲ್ಲಿ ಮಂಗಳವಾರ ಮಕರ ಸಂಕ್ರಾಂತಿ ಪ್ರಯುಕ್ತ ವಿಶೇಷ ಪೂಜೆ-ಪುನಸ್ಕಾರಗಳು ಆಯೋಜನೆಗೊಂಡಿದ್ದವು.

ಅಯ್ಯಪ್ಪನಿಗೆ ವಿಶೇಷ ಪೂಜೆ: ಜನವರಿ 19ರವರೆಗೆ ಶಬರಿ ಮಲೆಯಲ್ಲಿ ಭಕ್ತರಿಗೆ ಅಯ್ಯಪ್ಪ ಸ್ವಾಮಿಯ ರಾಜ ರೂಪದ ದರ್ಶನಕ್ಕೆ ಅವಕಾಶವಿರುತ್ತದೆ. ಇನ್ನು ಜನವರಿ 20 ರಂದು, ಪಂದಳ ರಾಜ ವಿಶೇಷ ಪೂಜೆ ಸಲ್ಲಿಸುವುದರೊಂದಿಗೆ ದೇವಾಲಯವನ್ನು ಮುಚ್ಚಲಾಗುತ್ತದೆ. ನಂತರ, ಶಬರಿಮಲೆ ದೇವಾಲಯದ ಕೀಲಿಗಳನ್ನು ಪಂಡಲ ಮಹಾರಾಜರ ಕುಟುಂಬಕ್ಕೆ ಹಸ್ತಾಂತರಿಸಲಾಗುವುದರೊಂದಿಗೆ ಮಂಡಲ ಮತ್ತು ಮಕರವಿಳಕ್ಕು ಪೂಜಾ ಉತ್ಸವವು ಮುಕ್ತಾಯಗೊಳ್ಳುತ್ತದೆ.

ಮಕರ ಜ್ಯೋತಿ ವೀಕ್ಷಣೆಗೆ ಅವಕಾಶ : ಶಬರಿಮಲೆ ಕ್ಷೇತ್ರ ವ್ಯಾಪ್ತಿಯ ತಿರುಮುಟ್ಟಂ, ಮಲಿಕಪ್ಪುರಂ ದೇವಸ್ಥಾನ, ಅನ್ನದಾನ ಮಂಟಪ, ಪಂಡಿತವಲಂ, ದಾನಿಗಳ ಮನೆಯ ಮುಂಭಾಗದ ಅಂಗಳ, ದಹನ ಮಾಡುವ ಪ್ರದೇಶ, ಪಂಡಿತಾವಲಂನಲ್ಲಿರುವ ನೀರಿನ ಟ್ಯಾಂಕ್, ಹೋಟೆಲ್ ಹಿಂಭಾಗದ ವಿಸ್ತಾರವಾದ ಮೈದಾನ, ಬಿಎಸ್‌ಎನ್ ಎಲ್ ಕಚೇರಿ ಮುಂಭಾಗ, ಕೊಪ್ಪಕ್ಕಲಂ (ಕೊದ್ರಾ ಕ್ಷೇತ್ರ), ಜ್ಯೋತಿ ನಗರ, ಅರಣ್ಯ ಕಚೇರಿ ಆವರಣ ಮತ್ತು ಜಲ ಪ್ರಾಧಿಕಾರ ಕಚೇರಿ ಆವರಣದಲ್ಲಿ ಮಕರ ಜ್ಯೋತಿ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿತ್ತು.

**1** ಮಕರ ಜ್ಯೋತಿ ದರ್ಶನ: ಶಬರಿಮಲೆಗೆ ಹರಿದುಬಂದ ಭಕ್ತಸಾಗರ

**2** ಭಕ್ತಿಯ ಪರಾಕಾಷ್ಠೆಯಲ್ಲಿ ಮಿಂದೆದ್ದ ಅಯ್ಯಪ್ಪ ವ್ರತಾಧಾರಿಗಳು

**3** ಸಂಕ್ರಾಂತಿ ದಿನದಂದೇ ಬೆಳಕು ಕಂಡು ಪುಳಕಿತಗೊಂಡ ಭಕ್ತಗಣ

**4** ಪೊನ್ನಂಬಲ ಬೆಟ್ಟದಲ್ಲಿ ಪ್ರಜ್ವಲಿಸಿದ ಮಕರ ಜ್ಯೋತಿ


### ಮಕರವಿಳಕ್ಕು ಎಂದರೇನು?

ಶಬರಿ ಮಲೆ ಬೆಟ್ಟದಲ್ಲಿ ಸಂಕ್ರಾಂತಿಯಂದು ಪ್ರತಿ ವರ್ಷ ನಡೆಯುವ ವಿಶೇಷ ಪೂಜೆಗೆ ಶಬರಿಮಲೆ ಮಕರವಿಳಕ್ಕು ಎನ್ನುವ ಹೆಸರಿನಿಂದ ಕರೆಯಲಾಗುತ್ತದೆ. ಮಕರ ಸಂಕ್ರಮಣದ ಕಾಲದಲ್ಲಿಯೇ ಶಬರಿಮಲೆ ಮಕರ ವಿಳಕ್ಕು ಪೂಜೆಗಳು ನಡೆಯುವುದರಿಂದ ಇದರಿಂದ ಮಕರ ಜ್ಯೋತಿ ಎಂಬ ಹೆಸರಿನಿಂದಲೂ ಗುರುತಿಸಲಾಗುತ್ತದೆ. ಇನ್ನು ಮಕರ ಸಂಕ್ರಮಣದಲ್ಲಿ ಸೂರ್ಯನು ಧನು ರಾಶಿಯಿಂದ ಮಕರ ರಾಶಿಗೆ ಬರುವಾಗ ಪೊನ್ನಂಬಲಮೇಡಿನಲ್ಲಿ ಮಾಡುವ ಕರ್ಪೂರ ಪೂಜೆಯೇ ಮಕರ ದೀಪ. ಇದರ ಹಿಂದೆಯೂ ಕೆಲವು ಐತಿಹ್ಯಗಳಿವೆ. ಪೊನ್ನಂಬಲಮೇಡಿನಲ್ಲಿ ದೇವತೆಗಳು ಮತ್ತು ನಂತರದ ಋಷಿಮುನಿಗಳು ಕರ್ಪೂರ ಪೂಜೆಯನ್ನು ಮಾಡುತ್ತಿದ್ದರು. ನಂತರ ಇದನ್ನು ಆರ್ಯರು ಸ್ವಾಧೀನಪಡಿಸಿಕೊಂಡರು ಎಂದು ನಂಬಲಾಗಿದೆ.

### ಮಕರ ಜ್ಯೋತಿ ಅಂದರೇನು...?

ಸೂರ್ಯನು ಧನು ರಾಶಿಯಿಂದ ಮಕರ ರಾಶಿಯನ್ನು ಪ್ರವೇಶಿಸುವ ವಿಶೇಷ ಶುಭ ಮುಹೂರ್ತದಲ್ಲಿ ಆಕಾಶದಲ್ಲಿ ಬೆಳಗುವ ನಕ್ಷತ್ರವೇ ಮಕರ ಜ್ಯೋತಿ. ಅಂದರೆ ಮಕರ ಜ್ಯೋತಿಯು ಆಕಾಶದಲ್ಲಿ ಕಾಣಿಸಿಕೊಳ್ಳುವ ನಕ್ಷತ್ರ ಎನ್ನಲಾಗಿದ್ದು, ಮಕರ ಮಾಸದ ಮೊದಲ ದಿನದಂದು ಉದಯಿಸುವ ನಕ್ಷತ್ರವನ್ನು ಮಕರಜ್ಯೋತಿ ಎಂದು ಕರೆಯಲಾಗುತ್ತದೆ. ನಕ್ಷತ್ರವು ಸೂರ್ಯಾಸ್ತದ ನಂತರ ಹೆಚ್ಚು ಗೋಚರಿಸುತ್ತದೆ ಮತ್ತು ಸ್ವಲ್ಪ ಸಮಯದೊಳಗೆ ಕಣ್ಮರೆಯಾಗುತ್ತದೆ.

## ಜ್ಯೋತಿ ರೂಪದಲ್ಲಿ ಭಕ್ತರಿಗೆ ದರ್ಶನ ಕೊಟ್ಟ ಅಯ್ಯಪ್ಪ



### ಹೆಚ್ಚಿದ ಭಕ್ತರ ಸಂಖ್ಯೆ


ಕೇರಳದ ಶಬರಿಮಲೆಯ ಬೆಟ್ಟವನ್ನು ಏರಲು ಕೇರಳ, ಕರ್ನಾಟಕ. ತಮಿಳುನಾಡು, ಆಂಧ್ರಪ್ರದೇಶ, ಮಹಾರಾಷ್ಟ್ರ, ತೆಲಂಗಾಣ ಸಹಿತ ಭಾರತದ ನಾನಾ ಭಾಗಗಳಿಂದಲೂ ಭಕ್ತರು ಆಗಮಿಸಿದ್ದಾರೆ. ಅದರಲ್ಲೂ ಕೊನೆಯ ದಿನದ ವಿಶೇಷ ಸಂದರ್ಭದಲ್ಲಿ ಅಯ್ಯಪ್ಪ ಸ್ವಾಮಿಯನ್ನು ಪೂಜಿಸಲು ಅಪಾರ ಸಂಖ್ಯೆಯ ಭಕ್ತರು ಶಬರಿಮಲೆಯಲ್ಲಿ ಸೇರಿದ್ದಾರೆ. ಮಕರವಿಳಕ್ಕು ಉತ್ಸವದ ವೇಳೆ ಸಂಜೆ ಮಕರ ಜ್ಯೋತಿ ದರ್ಶನ ಮಾಡಲು ಭಕ್ತರು ಕಾದುಕೊಂಡಿರುತ್ತಾರೆ. ಈ ಸಮಯದಲ್ಲಿ ಬೆಟ್ಟದಲ್ಲಿಯೇ ಇದ್ದು ಮಕರಜ್ಯೋತಿ ವೀಕ್ಷಣೆ ಮಾಡಿ ಬಂದರೆ ಒಳಿತಾಗಬಹುದು ಎನ್ನುವ ನಂಬಿಕೆ ಹಲವರಲ್ಲಿದೆ.

### ಎರಡು ಬಾರಿ ಪ್ರಜ್ವಲಿಸಿದ ಜ್ಯೋತಿ

ಮಣಿಕಂಠನ ವಿಗ್ರಹಕ್ಕೆ ಚಿನ್ನದ ಆಭರಣ ತೊಡಿಸಿ ಸಂಜೆ 6.45ಕ್ಕೆ ದೀಪಾರಾಧನೆ ನಡೆಸಿದ ಅಲ್ಪ ಹೊತ್ತಿನಲ್ಲಿ ಮಕರಜ್ಯೋತಿ ಕಾಣಿಸಿಕೊಂಡಿದೆ. 6.47ರ ಹೊತ್ತಿಗೆ ಮೊದಲ ಜ್ಯೋತಿ ಕಾಣಿಸಿಕೊಂಡಿದ್ದು, ಸೆಕೆಂಡುಗಳ ನಂತರ ಮತ್ತೆ ಎರಡು ಬಾರಿ ಪ್ರಜ್ವಲಿಸಿತು. ಲಕ್ಷಾಂತರ ಭಕ್ತರು ಮಕರಜ್ಯೋತಿ ವೀಕ್ಷಿಸಿದರು. ಈ ಮಧ್ಯೆ ಪವಿತ್ರ ಆಭರಣದ ಘೋಷಯಾತ್ರೆ ಸಾಗುವ ನಿಟ್ಟಿನಲ್ಲಿ ಅಲ್ಪ ಹೊತ್ತು ಪಂಪೆಯಲ್ಲಿ ಭಕ್ತರಿಗೆ ನಿಯಂತ್ರಣ ಹೇರಲಾಗಿದ್ದು, ಮಕರಜ್ಯೋತಿ ವೀಕ್ಷಣೆ ನಂತರ ಸನ್ನಿಧಾನಕ್ಕೆ ಬಿಡಲಾಯಿತು.

**ಮಕರ ಮಾಸದ ಮೊದಲ ದಿನದಂದು ಉದಯಿಸುವ ನಕ್ಷತ್ರ ಮಕರಜ್ಯೋತಿ**

**ಮಕರ ಜ್ಯೋತಿ ನೋಡಿದ ಭಕ್ತರ ಮೊಗದಲ್ಲಿ ಸಂತಸ**




## ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಾರು ಅಪಘಾತ ಕೇಸ್: ಚಾಲಕನ ವಿರುದ್ಧ ದೂರು!

• **ಉದಯವಾಹಿನಿ, ಬೆಳಗಾವಿ**

ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಾರು ಅಪಘಾತ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇದೀಗ ಕಾರು ಚಾಲಕನ ವಿರುದ್ಧ ಕಿತ್ತೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಬೆಳಿಗ್ಗೆ ನಸುಕಿನ ಜಾವ 6 ಗಂಟೆಯ ವೇಳೆ ಬೈಲಹೊಂಗಲದ ಬಳಿ ಕಾರು ಅಪಘಾತವಾಗಿದ್ದು, ಈ ಒಂದು ಅಪಘಾತದಲ್ಲಿ ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ಗಂಭೀರವಾದ ಗಾಯಗಳಾಗಿದ್ದು ಬೆನ್ನು ಮೂಳೆ ಮುರಿತವಾಗಿದೆ ಎಂದು ಬೆಳಗಾವಿಯ ಡಾ. ರವಿ ಪಾಟೀಲ್ ತಿಳಿಸಿದ್ದಾರೆ. ಘಟನೆಯಲ್ಲಿ ಸಹೋದರ ಜನರಾಜ ಹಟ್ಟಿಹಳಿ ಕಾರು ಚಾಲಕ ಹಾಗೂ ಗನ್ ಮ್ಯಾನ್ ಗೆ ಗಾಯಗಳಾಗಿವೆ. ಈ ಹಿನ್ನೆಲೆಯಲ್ಲಿ ಇದೀಗ ಕಾರು ಚಾಲಕನ ವಿರುದ್ಧ ಕಿತ್ತೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಜೀವಕ್ಕೆ ಕುತ್ತು ತರುವ ನಿಷ್ಕಾಳಜಿ ವಾಹನ ಚಾಲನೆ ಹಾಗೂ ಆ ಜಾಗರೂಕತೆಯಿಂದ



ವಾಹನ ಚಲಾಯಿಸಿದರ ಅಡಿ ಇದೀಗ ಪ್ರಕರಣ ದಾಖಲಾಗಿದೆ ಎಂದು ತಿಳಿದುಬಂದಿದೆ.

**ಕರೆ ಮಾಡಿದ ಸಿಎಂ, ಡಿಸಿಎಂ, ಗೃಹ ಸಚಿವರು**

ಲಕ್ಷ್ಮೀ ಹೆಬ್ಬಾಳ್ಕರ್ ಅಪಘಾತದಿಂದ ಆಸ್ಪತ್ರೆಗೆ ದಾಖಲಾಗಿರುವ ಹಿನ್ನೆಲೆಯಲ್ಲಿ ಬಿಜೆಪಿ ನಾಯಕರು ಕೂಡ ಪಕ್ಷ ಬೇಧ ಮರೆತು ಆಸ್ಪತ್ರೆಗೆ ದೌಡಾಯಿಸಿ ಆರೋಗ್ಯ ವಿಚಾರಿಸಿದ್ದಾರೆ. ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ದೂರವಾಣಿ ಕರೆ ಮಾಡಿ ಸಚಿವರ ಆರೋಗ್ಯ ವಿಚಾರಿಸಿದ್ದಾರೆ.

ಸಂಪುಟ ಸಹೋದ್ಯೋಗಿಯಾದ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹಾಗೂ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ ಅವರು ಪ್ರಯಾಣಿಸುತ್ತಿದ್ದ ಕಾರು ಅಪಘಾತಕ್ಕೀಡಾದ ವಿಚಾರ ತಿಳಿಯಿತು. ಘಟನೆಯಲ್ಲಿ ಗಾಯಗೊಂಡು ಚಿಕಿತ್ಸೆ ಪಡೆಯುತ್ತಿರುವ ಇಬ್ಬರೂ ಶೀಘ್ರ ಗುಣಮುಖರಾಗಲಿ ಎಂದು ಹಾರೈಸುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣಗಳಲ್ಲಿಯೂ ಬರೆದುಕೊಂಡಿದ್ದಾರೆ. ಇನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಗೃಹ ಸಚಿವ ಪರಮೇಶ್ವರ್ ಕೂಡ ದೂರವಾಣಿ ಕರೆ ಮಾಡಿ ಸಚಿವರ ಹಾಗೂ ಪರಿಷತ್ ಸದಸ್ಯರ ಆರೋಗ್ಯ ವಿಚಾರಿಸಿದ್ದಾರೆ. ಬೇಗನೇ ಗುಣಮುಖರಾಗುವಂತೆ ಹಾರೈಸಿದ್ದಾರೆ.

### ಬೇಗ ಗುಣಮುಖರಾಗಲಿ



ಇದೀಗ ಎಂಎಲ್ಸಿ ಸಿಟಿ ರವಿ ಅವರು ಸಚಿವ ಲಕ್ಷ್ಮಿ ಹೆಬ್ಬಾಳ್ಕರ್, ಅವರ ಸಹೋದರ ಚನ್ನರಾಜ್ ಹಟ್ಟಿಹೋಳಿ ಬೇಗ ಗುಣಮುಖರಾಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದು ಟ್ವಿಟ್ ಮಾಡಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಸಿ.ಟಿ ರವಿ ಬರೆದುಕೊಂಡಿದ್ದಾರೆ.

# ಹಸುವಿನ ಕೆಚ್ಚಲು ಕೊಯ್ದ ಘಟನೆ ಖಂಡಿಸಿ ರಾಜ್ಯದಾದ್ಯಂತ ಪ್ರತಿಭಟನೆ

**● ರಕ್ತ ಸುರಿಯುವುದನ್ನು ನಾನು ಕಣ್ಣಾರೆ ಕಂಡಿದ್ದೇನೆ. ಆದರೆ ಇದು ಒಬ್ಬರೇ ಮಾಡಿದ ಕೃತ್ಯವಲ್ಲ, ಇದರಲ್ಲಿ ಹಲವರು ಭಾಗಿಯಾಗಿದ್ದಾರೆ.**

• **ಉದಯವಾಹಿನಿ, ಬೆಂಗಳೂರು**

ಚಾಡಿಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲು ಕತ್ತರಿಸಿದ ಪ್ರಕರಣದ ಸೂಕ್ತ ತನಿಖೆಗಾಗಿ ಆಗ್ರಹಿಸಿ ಬಿಜೆಪಿ ರಾಜ್ಯದಾದ್ಯಂತ ಪ್ರತಿಭಟನೆ ಮಾಡಲಿದೆ. ಈ ಘಟನೆಯಿಂದ ಹಿಂದೂಗಳನ್ನು ಬೆದರಿಸಲು ಸಾಧ್ಯವಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಾಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲು ಕತ್ತರಿಸಿದ್ದು, ರಕ್ತ ಸುರಿಯುವುದನ್ನು ನಾನು ಕಣ್ಣಾರೆ ಕಂಡಿದ್ದೇನೆ. ಆದರೆ ಇದು ಒಬ್ಬರೇ ಮಾಡಿದ ಕೃತ್ಯವಲ್ಲ, ಇದರಲ್ಲಿ ಹಲವರು ಭಾಗಿಯಾಗಿದ್ದಾರೆ.


ಈ ಕುರಿತು ಪೊಲೀಸರು ಸರಿಯಾಗಿ ತನಿಖೆ ಮಾಡಬೇಕಿತ್ತು. ಈಗ ಸಂಕ್ರಾಂತಿ ಹಬ್ಬ ನಡೆಯುತ್ತಿದೆ. ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭಮೇಳ ನಡೆಯುತ್ತಿದೆ. ಇಂತಹ ಸಮಯದಲ್ಲೇ ಈ ಕೃತ್ಯ ಮಾಡುವುದರ ಜೊತೆಗೆ ಹಸು ಮಾಲೀಕ ಕರ್ಣ ಅವರಿಗೆ ಕಾಂಗ್ರೆಸ್ ಕಾರ್ಯಕರ್ತರು ಹಸುವನ್ನು ಪಡೆಯುವಂತೆ ಒತ್ತಡ ಹೇರಿದ್ದಾರೆ ಎಂದು ದೂರಿದರು.

1 ಲಕ್ಷ ರೂ. ಪರಿಹಾರವನ್ನು ಹಸು ಮಾಲೀಕ ಕರ್ಣ ಅವರಿಗೆ ಬಿಜೆಪಿ ವತಿಯಿಂದ ನೀಡಲಾಗಿದೆ. ಹಿಂದೂಗಳು ಬೇಡುವ ಸ್ಥಿತಿಯಲ್ಲಿಲ್ಲ. ಕಾಂಗ್ರೆಸ್‌ನವರು ಒಂದು ಕೈಯಲ್ಲಿ ಹಸುವನ್ನು ನೀಡುತ್ತಾರೆ, ಮತ್ತೊಂದು ಕಡೆ ಅವರ ಕಡೆಯವರೇ ನೀಡುವ ಹಸುವನ್ನು ಕತ್ತರಿಸುತ್ತಾರೆ.

ನನಗೀಗ ಪೊಲೀಸರು ಹಾಗೂ ಸರ್ಕಾರದ ಮೇಲೆಯೇ ಅನುಮಾನ ಬಂದಿದೆ. ಆರೋಪಿ ಜೇಬಿನಲ್ಲಿ ಬ್ಲಡ್ ಇಟ್ಟುಕೊಂಡು ಓಡಾಡುತ್ತಿದ್ದ, ಆತನಿಗೆ ಮತಿಭ್ರಮಣೆಯಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಇಂತಹ ವ್ಯಕ್ತಿ 10 ವರ್ಷ ಫ್ಯಾಕ್ಟರಿಯಲ್ಲಿ ಕೆಲಸ ಮಾಡಲು ಹೇಗೆ ಸಾಧ್ಯ? ಮುಂಜಾನೆ 3-4 ಗಂಟೆಗೆ ಆತ ಇಲ್ಲಿಗೆ ಬರಲು ಹೇಗೆ ಸಾಧ್ಯ? ಪ್ರತಿಭಟನೆಯಲ್ಲಿ ಪಾಲ್ಗೊಂಡ ಕರ್ಣ ಅವರ ಹಸುವಿನ ಕೆಚ್ಚಲನ್ನೇ ಕೊಯ್ದಿದ್ದೇಕೆ? ಎಂದು ಪ್ರಶ್ನೆ ಮಾಡಿದರು.

ಇಲ್ಲಿ ಪಶು ಆಸ್ಪತ್ರೆ ಬಹಳ ಕಡಿಮೆ ಸಂಖ್ಯೆಯಲ್ಲಿದೆ. ಅದರ ಜಾಗ ಲೂಟಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಖಾತೆ ತಿದ್ದುಪಡಿ ಮಾಡಿ ವಕ್ಸ್ ಮಂಡಳಿಗೆ ನೀಡಿದ್ದಾರೆ. ಹಸು ಮಾಲೀಕ ಕರ್ಣನ ಮೇಲೆ ದಾಳಿ ಮಾಡಲು ಸಾಧ್ಯವಾಗಿಲ್ಲ. ಆದರೆ ಹಸುವಿನ ಮೇಲೆ ದಾಳಿ ಮಾಡಿ ಕರ್ಣನಿಗೆ ಎಚ್ಚರಿಕೆ ನೀಡಿದ್ದಾರೆ. ಆದರೂ ಸಿಎಂ ಸಿದ್ದರಾಮಯ್ಯನವರ ಬಾಯಲ್ಲಿ ಯಾವುದೇ ವಿರೋಧದ ಮಾತು ಬಂದಿಲ್ಲ. ಮುಸಲ್ಮಾನರಿಗೆ ಏನಾದರೂ ಆಗಿದ್ದರೆ ಅವರೇ ಮುಂದೆ ಬಂದು ಮಾತಾಡುತ್ತಿದ್ದರು. ಆದರೆ ಈ ಮತಬ್ಯಾಂಕ್ ರಾಜಕಾರಣಕ್ಕೆ ನಾವ್ಯಾರೂ ಹೆದರುವುದಿಲ್ಲ. ಇದು ಧರ್ಮಯುದ್ಧವಾಗಿದ್ದು, ಬಿಜೆಪಿ ರಾಜ್ಯದಾದ್ಯಂತ ಹೋರಾಟ ಮಾಡಲಿದೆ. ಗೋವುಗಳ ಹತ್ಯೆ ಹಿಂದೂಗಳ ಮೇಲಿನ ದಾಳಿ ಖಂಡಿಸಿ ಹೋರಾಡುತ್ತೇವೆ ಎಂದರು.

**ಹಸುವಿನ ಕೆಚ್ಚಲನ್ನೇ ಕೊಯ್ದಿದ್ದೇಕೆ?**



### ಹಾಲು ನೀಡುವ ಹಸುವಿಗೆ ನ್ಯಾಯ ನೀಡುವ ಕೆಲಸ ಮಾಡಲಿ

ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರನ್ನು ಬಂಧಿಸಿ ಕಬ್ಬಿನ ಗದ್ದೆಯಲ್ಲಿ ಇರಿಸಲಾಗಿತ್ತು. ಆದರೆ ಈ ಪ್ರಕರಣದ ಆರೋಪಿಯನ್ನು ನೇರವಾಗಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ. ಪೊಲೀಸರು ತನಿಖೆ ಮಾಡಲು ಆರೋಪಿಯನ್ನು ಕಸ್ಟಡಿಗೆ ಪಡೆಯಬೇಕಿತ್ತು. ಅದನ್ನು ಮಾಡದೆ ತನಿಖೆ ಸ್ಥಗಿತಗೊಳಿಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಿಎಂ ಸಿದ್ದರಾಮಯ್ಯನವರು ಔಟ್ ಗೋಯಿಂಗ್ ಸಿಎಂ. ಇಂತಹ ಸಮಯದಲ್ಲಿ ಹಾಲು ನೀಡುವ ಹಸುವಿಗೆ ನ್ಯಾಯ ನೀಡುವ ಕೆಲಸ ಮಾಡಲಿ, ಗೋಮಾತೆಗೆ ಮೋಸ ಮಾಡಬೇಡಿ ಎಂದರು. ಕಾಂಗ್ರೆಸ್ ಒಡೆದ ಮನೆಯಾಗಿದ್ದು, ಇನ್ನು ಈ ಪಕ್ಷ ರಾಜ್ಯದಲ್ಲಿ ಅಧಿಕಾರಕ್ಕೆ ಬರಲ್ಲ. ಸಿಎಂ ಕುರ್ಚಿಗಾಗಿ ಜಗಳ ನಡೆಯುತ್ತಿದೆ ಎಂದು.ಕೆಂಡಕಾರಿದ್ದಾರೆ. ಕೆಲವು ಶಾಸಕರು ಮುಂದಿನ ಸಿಎಂ ಶಿವಕುಮಾರ್ ಎನ್ನುತ್ತಿದ್ದಾರೆ. ಜನರು ಬೆಲೆ ಏರಿಕೆಯಿಂದ ಕಂಗಾಲಾಗಿದ್ದಾರೆ. ಇಂತಹ ಪಾಪಿ ಸರ್ಕಾರ ಯಾಕಾದರೂ ಬಂತೋ ಎಂದು ಜನರು ಶಾಪ ಹಾಕುತ್ತಿದ್ದಾರೆ ಎಂದರು. ಕಾಂಗ್ರೇಸ್ ಉಸ್ತುವಾರಿ ಸುರ್ಜೇವಾಲ ಬಂದು ಹೋದ ಬಳಿಕವೂ ಈ ಸಮಸ್ಯೆ ನಿವಾರಣೆಯಾಗಲ್ಲ ಎಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹7,996 /Gram24ct ₹7,330/Gram22ct | ಬೆಳ್ಳಿ: ₹92.50/Gram

# ವಿಕಲಚೇತನ ಉದ್ಯೋಗಿಗಳ ಜತೆ ಸಂಕ್ರಾಂತಿ ಆಚರಿಸಿಕೊಂಡ ಹೆಚ್‌ಡಿಕೆ

## ನಿಮ್ಮ ಹಾರೈಕೆ ಪ್ರೀತಿಯೇ ನನಗೆ ಶ್ರೀರಕ್ಷೆ ಎಂದು ಭಾವುಕರಾದರು, ಅವಕಾಶ ಸಿಕ್ಕಿದಾಗ ನನ್ನ ಕೈಲಾದಷ್ಟು ಸಹಾಯ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರಕಾರದ ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೂರಾರು ವಿಕಲಚೇತನ ಉದ್ಯೋಗಿಗಳು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರೊಂದಿಗೆ 6ನೇ ವರ್ಷದ ಸಂಕ್ರಾಂತಿ ಹಬ್ಬ ಆಚರಿಸಿದರು. 2019ರಿಂದಲೂ 600ಕ್ಕೂ ಹೆಚ್ಚು ವಿಕಲಚೇತನ ಉದ್ಯೋಗಿಗಳು ಕುಮಾರಸ್ವಾಮಿ ಅವರೊಂದಿಗೆ ಪ್ರತೀ ವರ್ಷ ತಪ್ಪದೇ ಸಂಕ್ರಾಂತಿ ಹಬ್ಬ ಆಚರಿಸಿಕೊಂಡು ಬರುತ್ತಿದ್ದಾರೆ. ತಮ್ಮ ಕುಟುಂಬ ಸಮೇತವಾಗಿ ಕುಮಾರಸ್ವಾಮಿ ಅವರೊಂದಿಗೆ ಸಂಕ್ರಾಂತಿ ಹಬ್ಬ ಆಚರಿಸಿಕೊಳ್ಳಲು ಈ ಸಿಬ್ಬಂದಿ, ರಾಜ್ಯದ ಎಲ್ಲಾ ಭಾಗಗಳಿಂದ ಬಂದಿದ್ದರು ಹಾಗೂ ಹಬ್ಬದ ದಿನ ಕುಮಾರಸ್ವಾಮಿ ಅವರು ಎಲ್ಲಿರುತ್ತಾರೋ ಅಲ್ಲಿಗೆ ಬಂದು ತಮ್ಮ ಮಕ್ಕಳ ಜತೆ ಸೇರಿಕೊಂಡು ಹಬ್ಬ ಆಚರಿಸುತ್ತಾರೆ. ಕಳೆದ ಆರು ವರ್ಷಗಳಿಂದ ಅವರು ಇದನ್ನು ನಿರಂತರವಾಗಿ ಮುಂದುವರಿಸಿಕೊಂಡು ಬಂದಿದ್ದಾರೆ.

ಈ ಹಬ್ಬಕ್ಕೆ ಉದ್ಯೋಗಿಗಳೆಲ್ಲ ಮಂಗಳವಾರ ಸಚಿವರ ಬೆಂಗಳೂರಿನ ಜೆ.ಪಿ.ನಗರದ ನಿವಾಸಕ್ಕೆ ಬಂದು ಹಬ್ಬ ಆಚರಿಸಿದರು. ನಿಮ್ಮ ಹಾರೈಕೆ ಪ್ರೀತಿಯೇ ನನಗೆ ಶ್ರೀರಕ್ಷೆ ಎಂದು ಭಾವುಕರಾದ ಸಚಿವರು: ಈ ಸಂದರ್ಭದಲ್ಲಿ ಎಲ್ಲರಿಗೂ ಶುಭ ಕೋರಿದ ಸಚಿವ ಕುಮಾರಸ್ವಾಮಿ ಅವರು ನಿಮ್ಮ ಪ್ರೀತಿ ವಿಶ್ವಾಸಕ್ಕೆ ನಾನು ಋಣಿ


ಉದಯವಾಹಿನಿ ಚಿತ್ರ

**ಆರೋಗ್ಯ ವಿಮೆ ಯೋಜನೆಯನ್ನು ಜಾರಿ**

ಆಗಿದ್ದೇನೆ. ನಿಮ್ಮ ಹೃದಯದಲಿ ಸ್ಥಾನ ಕೊಟ್ಟಿದ್ದಕ್ಕೆ ನಾನು ಆಭಾರಿ. ನಿಮ್ಮ ಹಾರೈಕೆ ಪ್ರೀತಿಯೇ ನನಗೆ ಶ್ರೀರಕ್ಷೆ ಎಂದು ಭಾವುಕರಾದರು.

ನಿಮ್ಮ ಹಾರೈಕೆ ಪ್ರೀತಿಯೇ ನನಗೆ ಶ್ರೀರಕ್ಷೆ ಎಂದು ಭಾವುಕರಾದ ಸಚಿವರು: ಈ ಸಂದರ್ಭದಲ್ಲಿ ಎಲ್ಲರಿಗೂ ಶುಭ ಕೋರಿದ ಸಚಿವ ಕುಮಾರಸ್ವಾಮಿ ಅವರು ನಿಮ್ಮ ಪ್ರೀತಿ ವಿಶ್ವಾಸಕ್ಕೆ ನಾನು ಋಣಿ ಆಗಿದ್ದೇನೆ. ನಿಮ್ಮ ಹೃದಯದಲಿ ಸ್ಥಾನ ಕೊಟ್ಟಿದ್ದಕ್ಕೆ ನಾನು ಆಭಾರಿ. ನಿಮ್ಮ ಹಾರೈಕೆ ಪ್ರೀತಿಯೇ ನನಗೆ ಶ್ರೀರಕ್ಷೆ ಎಂದು ಭಾವುಕರಾದರು. ಅವಕಾಶ ಸಿಕ್ಕಿದಾಗ ನನ್ನ ಕೈಲಾದಷ್ಟು ಸಹಾಯ ಮಾಡಿದ್ದೇನೆ.

ವಿಕಲಚೇತನರಿಗೆ ಸಾಧ್ಯವಾದಷ್ಟು ನೆರವು ಕೊಟ್ಟಿದ್ದೇನೆ.

> **ಸಮಾಜದಲ್ಲಿ ಕೆಟ್ಟ ವಾತಾವರಣ ಸೃಷ್ಟಿ ಆಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದ ಸಚಿವರು, ಬೆಂಗಳೂರಿನಲ್ಲಿ ಹಸುಗಳ ಕೆಚ್ಚಲು ಕೊಯ್ದ ಘಟನೆ ನಡೆದಿದೆ. ಆ ದೃಶ್ಯವನ್ನು ನಾನು ವಿದ್ಯುನ್ಮಾನ ಮಾಧ್ಯಮಗಳಲ್ಲಿ ನೋಡಿ ತೀವ್ರ ಆಘಾತಕ್ಕೆ ಒಳಗಾದೆ. ಮನಸ್ಸಿಗೆ ಬಹಳ ನೋವಾಯಿತು. ಸಿನಿಮಾ ಇಂಥ ಪರಿಸಿತಿಯಿಂದ ಸಮಾಜವನ್ನು ಹೊರಕ್ಕೆ ತರಬೇಕಿದೆ.**

ಮುಂದೆಯೂ ದೈಹಿಕವಾಗಿ ಶಕ್ತಿ ಇಲ್ಲದ ಯಾರೇ ಇದ್ದರೂ ಅವರಿಗಾಗಿ ನನ್ನ ಹೃದಯ ಮಿಡಿಯುತ್ತದೆ. ಪ್ರಾಮಾಣಿಕವಾಗಿ ಅಂತಹವರ ಒಳಿತಿಗಾಗಿ ಪ್ರಯತ್ನ ಮಾಡುತ್ತೇನೆ ಎಂದರು ಅವರು. ವಿಕಲಚೇತನರು, ದೈಹಿಕವಾಗಿ ಅಶಕ್ತರ ಬಗ್ಗೆ ನಮಗೆ ಅನುಕಂಪಕ್ಕಿಂತ ಮಿಗಿಲಾಗಿ ಅವರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ಕೆಲಸ ಆಗಬೇಕಿದೆ. ನನಗೆ ಅವಕಾಶ ಸಿಕ್ಕಿದಾಗ ನಾನು ಇಂಥವರ ಪರವಾಗಿ ಕೆಲಸ ಮಾಡುತ್ತೇನೆ.

ನನ್ನ ಪಾಲಿಗೆ ಇವರು ದೇವರ ಸಮಾನರು ಎಂದು ಸಚಿವರು ಹೇಳಿದರು. ಸಮಾಜದಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ವಿಕಲಚೇತನರು ಕಷ್ಟದಲ್ಲಿ ಇದ್ದಾರೆ. ದೊಡ್ಡ ಪ್ರಮಾಣದಲ್ಲಿ ಅವರಿಗೆ ಶಕ್ತಿ ತುಂಬುವ ಕೆಲಸ ಮಾಡಬೇಕಿದೆ. ಮುಂದಿನ ಜನರು, ದೇವರು ಅವಕಾಶ ಕೊಡಬಹುದು ಎಂದು ನಂಬಿದ್ದೇನೆ. ನಿಮ್ಮ ಮಕ್ಕಳಿಗೆ ಶುಭವಾಗಲಿ, ಅವರನ್ನು ಚೆನ್ನಾಗಿ ಓದಿಸಿ ಎಂದು ಕಿವಿಮಾತು ಹೇಳಿದರು. ವಿಕಲಚೇತನರು, ದೈಹಿಕವಾಗಿ ಶಕ್ತಿ ಇಲ್ಲದವರು ಧೃತಿಗೆ ಡಬೇಡಿ. ಅಂಗವೈಕಲ್ಯ ಬಂತು ಎಂದು ಹೆದರಬೇಡಿ.. ದೇವರಿದ್ದಾನೆ, ನಿಮಗೂ ಅವಕಾಶ ಬಂದೆ ಬರುತ್ತದೆ, ನಾನು ಸದಾ ನಿಮ್ಮೊಂದಿಗೆ ಇದ್ದೇನೆ. ಇವತ್ತು ಭಾರತ ಯಾರೂ ಊಹೆ ಮಾಡದ ರೀತಿಯಲ್ಲಿ ಪ್ರಗತಿ ಹೊಂದುತ್ತಿದೆ. ಅವಕಾಶಗಳು ಹೆಚ್ಚುತ್ತಿವೆ, ಯಾರು ಧೃತಿಗೆಡಬಾರದು. ಕಷ್ಟಗಳು ಬಂದರೆ ಧೈರ್ಯವಾಗಿ ಎದುರಿಸಿ, ಯಾವುದೇ ಸಮಸ್ಯೆ ಬಂದರೂ ಕೆಚ್ಚೆದೆಯಿಂದ ಎದುರಿಸಿ. ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಳ್ಳಿ ಕೌಟುಂಬಿಕವಾಗಿ ಒಳ್ಳೆಯ ಬಾಂಧವ್ಯ ರೂಢಿಸಿಕೊಳ್ಳಿ ಎಂದು ಸಚಿವರು ಹೇಳಿದರು.

> **ಪ್ರಧಾನಿ ನರೇಂದ್ರ ಮೋದಿ ಅವರು 2015ರಲ್ಲಿ ವಿಕಲಚೇತನರಿಗಾಗಿಯೇ ಸ್ವಾವಲಂಬನ ಆರೋಗ್ಯ ವಿಮೆ ಯೋಜನೆಯನ್ನು ಜಾರಿಗೆ ತಂದಿದ್ದರು. ಆ ಯೋಜನೆ ಈಗ ನಿಂತು ಹೋಗಿದೆ. ರೂ.300 ಕೊಟ್ಟರೆ ನಮಗೆ ಅತ್ಯುತ್ತಮವಾದ ಆರೋಗ್ಯ ಸೌಲಭ್ಯ ದೊರೆಯುತ್ತಿತ್ತು. ಈ ಯೋಜನೆಯನ್ನು ಮತ್ತೆ ಆರಂಭ ಮಾಡಿಸಬೇಕು ಎಂದು ಅವರು ಮನವಿ ಮಾಡಿದರು.**

# ಡಿಫೈನ್ಸ್ ಪಿಂಚಣಿಗೆ ಅರ್ಜಿ ಸಲ್ಲಿಸಲು ಈ ದಾಖಲೆಗಳು ಕಡ್ಡಾಯ!

• ಉದಯವಾಹಿನಿ, ಬೆಂಗಳೂರು

01.04.2006 ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಸ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು ರಾಜ್ಯ ಸರ್ಕಾರವು ಆದೇಶ ಹೊರಡಿಸಿದೆ. ಡಿಫೈನ್ಸ್ ಪಿಂಚಣಿಗೆ ಅರ್ಜಿ ಸಲ್ಲಿಸುವುದು ಹೇಗೆರೂ. ಇಲ್ಲಿದೆ ಮಾಹಿತಿ ಇಲಾಖೆಯಲ್ಲಿ ರ್ಯನಿರ್ವಹಿಸುತ್ತಿರುವ ಶ್ರೀ/ಶ್ರೀಮತಿ......ದಿನಾಂಕ.... ಪ್ರಪ್ರಥಮವಾಗಿ ಹುದ್ದೆಗೆ ಇಲಾಖೆಯಲ್ಲಿ ರಂದು ಸರ್ಕಾರಿ ಸೇವೆಯಲ್ಲಿ ವರದಿ ಮಾಡಿಕೊಂಡಿರುವ. ಈ ಹುದ್ದೆಗೆ ನೇಮಕಾತಿ ಅಧಿಸೂಚನೆಯ ಪ್ರಕಟಣೆಯನ್ನು ದಿನಾಂಕ: ರಂದು ಹೊರಡಿಸಲಾಗಿರುತ್ತದೆ. ಉಲ್ಲೇಖಿತ ಆದೇಶದನ್ವಯ ಹಿಂದಿನ ಡಿಫೈನ್ಸ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಲು ಅರ್ಹವಿರುವುದರಿಂದ ಹಿಂದಿನ ಡಿಫೈನ್ಸ್ ಪಿಂಚಣಿ ಯೋಜನೆಗೊಳಪಡಿಸಲು ಅರ್ಜಿ ಸಲ್ಲಿಸಬಹುದು.

ಡಿಫೈನ್ಸ್ ಪಿಂಚಣಿಗೆ ಅರ್ಜಿ ಸಲ್ಲಿಸಲು ಈ ದಾಖಲೆಗಳು ಕಡ್ಡಾಯ

1. ಹುದ್ದೆಗಳ ಭರ್ತಿಗಾಗಿ ಪ್ರಕಟಿಸಲಾದ ನೇಮಕಾತಿ ಅಧಿಸೂಚನೆ ದಿನಾಂಕ ಪ್ರತಿ
2. ಸಂಬಂಧಪಟ್ಟ ಆಯ್ಕೆ ಪಟ್ಟಿ ದಿನಾಂಕ ಪ್ರತಿ
3. ನೇಮಕಾತಿ ಆದೇಶ ದಿನಾಂಕ ಪ್ರತಿ
4. ನೇಮಕಾತಿಯ ನಂತರ ಇಲಾಖೆ ಬದಲಾವಣೆಯಾಗಿದೆಯೇರೂ. ವಿವರಗಳನ್ನು ನೀಡುವುದು
5. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಛೇರಿ/ಇಲಾಖೆಯ ವಿಳಾಸ:
6. ಕೆಜಿಐಡಿ ಸಂಖ್ಯೆ
7. pan number
8. ಪ್ರಸ್ತುತ ವೇತನ ಚೀಟಿ

# ಎಸಿಪಿ ಭರತ್ ರೆಡ್ಡಿ ವರ್ಗಾವಣೆ ರದ್ದು

• ಉದಯವಾಹಿನಿ, ಬೆಂಗಳೂರು

ಮಾಜಿ ಸಂಸದ ಡಿ.ಕೆ. ಸುರೇಶ್ ಸಹೋದರಿ ಎಂದು ಹೇಳಿಕೊಂಡು ಚಿನ್ನಾಭರಣ ವ್ಯಾಪಾರಿಗಳಿಗೆ ವಂಚನೆ ಪ್ರಕರಣದ ತನಿಖಾ ಉಸ್ತುವಾರಿ ಎಸಿಪಿ ಭರತ್ ರೆಡ್ಡಿ ವರ್ಗಾವಣೆ ಆದೇಶವನ್ನು ಸೋಮವಾರ ಸರ್ಕಾರ ರದ್ದುಗೊಳಿಸಿದೆ. ಆರೋಪಿಗಳಾದ ಐಶ್ವರ್ಯ ಗೌಡ ದಂಪತಿ ವಿರುದ್ಧ ತನಿಖೆ ನಡೆಯುತ್ತಿರುವ ತನಿಖಾ ಉಸ್ತುವಾರಿ ಬ್ಯಾಟರಾಯನಪುರ ಉಪ ವಿಭಾಗದ ಎಸಿಪಿ ಭರತ್ ರೆಡ್ಡಿಯನ್ನು ದಿಢೀರ್ ಸ್ಥಳ ತೋರಿಸದೆ ವರ್ಗಾವಣೆ ಮಾಡಲಾಗಿತ್ತು. ಈ ಬಗ್ಗೆ ಸಾರ್ವಜನಿಕ ವಲಯದಲ್ಲಿ ಆಕ್ಷೇಪಗಳು ವ್ಯಕ್ತವಾಗಿದ್ದವು. ಕೊನೆಗೆ ಭರತ್ ರೆಡ್ಡಿ ವರ್ಗಾವಣೆ ರದ್ದುಗೊಳಿಸಿ ಅದೇ ಸ್ಥಾನದಲ್ಲೇ ಮುಂದುವರಿಸಿ ಆದೇಶಿಸಿದೆ.

# ಕರ್ನಾಟಕದಲ್ಲಿ ಮತ್ತೊಂದು ಸೈಕ್ಲೋನ್: ಯಾವ ದಿನ ಮಳೆ ಇಲ್ಲಿದೆ ವಿವರ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಈ ಹೊಸ ವರ್ಷದ ಮೊದಲ ಮಳೆಯಾಗುವ ಸೂನಚೆಯನ್ನು ಹವಾಮಾನ ಇಲಾಖೆ ನೀಡಿದೆ. ಮತ್ತೊಂದು ಸೈಕ್ಲೋನ್ ಇಫೆಕ್ಟ್ ನಿಂದ ಮಳೆಯಾಗಲಿದೆ. ಡಿಸೆಂಬರ್ ತಿಂಗಳಲ್ಲಿ ಬಂಗಾಳ ಕೊಲ್ಲಿಯಲ್ಲಿ ವಾಯು ಭಾರ ಕುಸಿತದಿಂದ ರಾಜ್ಯದ ನಾನಾ ಭಾಗಗಳಲ್ಲಿ ಮಳೆಯಾಗಿತ್ತು. ಈಗ ಮತ್ತೊಮ್ಮೆ ಹವಾಮಾನ ಇಲಾಖೆ ಮಳೆಯ ಮುನ್ಸೂಚನೆ ನೀಡಿದೆ. ಕರ್ನಾಟಕದಲ್ಲಿ ಮಾತ್ರವಲ್ಲ ದೇಶದಾದ್ಯಂತ ಮಳೆಯಾಗುವ ಸೂಚನೆ ದೊರೆತಿದೆ. ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ನಿನ್ನೆಯಿಂದ ಮೋಡ ಕವಿದ ವಾತಾವಾರಣವಿದೆ. ಮಳೆಯಾಗುವ ನಿರೀಕ್ಷೆಯಿದೆ. ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ ಜನವರಿ 16 ರವರೆಗೆ ಮಳೆಯಾಗುವ ಸಾಧ್ಯತೆಯಿದೆ ಎನ್ನಲಾಗಿದೆ. ಬಂಗಾಳ ಕೊಲ್ಲಿಯಲ್ಲಿ ಮೇಲೆ ಚಂಡಮಾರುತದಿಂದಾಗಿ ಮಳೆಯಾಗುವ ಸಾಧ್ಯತೆಯಿದೆ ಎನ್ನಲಾಗಿದೆ. ಕೇವಲ ಕರ್ನಾಟಕದಲ್ಲಿ ಮಾತ್ರವಲ್ಲದೆ ವಾಯವ್ಯ ಭಾರತ, ಮಧ್ಯ ಭಾರತದ ಬಯಲು ಪ್ರದೇಶಗಳಲ್ಲಿ ಮಳೆಯಾಗುವ ಸಾಧ್ಯತೆಯಿದೆ. ಕರಾವಳಿ ಕರ್ನಾಟಕಕ್ಕೆ ಅಷ್ಟಾಗಿ ಮಳೆಯಾಗುವ ಸಾಧ್ಯತೆಯಿಲ್ಲ. ಆದರೆ ಬೆಂಗಳೂರು ಮತ್ತು ಆಸುಪಾಸಿನ ಜಿಲ್ಲೆಗಳಲ್ಲಿ ಮಳೆಯ ಮುನ್ಸೂಚನೆಯಿದೆ.

# ರಾಜ್ಯದಲ್ಲಿ ಸಿಎಂ ಬದಲಾವಣೆ ಬಗ್ಗೆ ಸಚಿವ ಎಂ.ಬಿ. ಪಾಟೀಲ್ ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ವಿಚಾರದ ಬಗ್ಗೆ ಬೃಹತ್ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ಪ್ರತಿಕ್ರಿಯೆ ನೀಡಿದ್ದು, ಈಗ ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲವೆಂದು ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿ ಒಳ್ಳೆಯ ಕೆಲಸ ಮಾಡುತ್ತಿದ್ದಾರೆ. ನಮ್ಮಲ್ಲಿ ಯಾವುದೇ ಗೊಂದಲವಿಲ್ಲ ಎಂದು ಹೇಳಿದ್ದಾರೆ. ನಾನು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಆಕಾಂಕ್ಷಿ ಅಲ್ಲ, ಬೃಹತ್ ಕೈಗಾರಿಕೆ ಸಚಿವನಾಗಿ ಕೆಲಸ ಮಾಡುತ್ತಿದ್ದೇನೆ. ಹೈಕಮಾಂಡ್ ಏನು ಹೇಳುತ್ತದೆಯೋ ಅದನ್ನು ಕೇಳಬೇಕಾಗುತ್ತದೆ ಎಂದು ಸಿಎಂ ಭೇಟಿ ಬಳಿಕ ಎಂ.ಬಿ. ಪಾಟೀಲ್ ಹೇಳಿದ್ದಾರೆ.

# ದಾಸರ ಪದಗಳ ಗಾಯನ

• ಉದಯವಾಹಿನಿ, ಬೆಂಗಳೂರು



ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ವಿಚಾರಣಾ ಕರ್ತರಾದ ಶ್ರೀ ಗಿರಿರಾಜಾಚಾರ್ಯರ ನೇತೃತ್ವದಲ್ಲಿ ಜನವರಿ 16, ಗುರುವಾರ ಸಂಜೆ 7-00ಕ್ಕೆ ವಿದುಷಿ ಶ್ರೀಮತಿ ಸೀತಾಲಕ್ಷ್ಮಿ ಅವರ ನಿರ್ದೇಶನದಲ್ಲಿ ಶ್ರೀ ಶಾರದಾ ಸಂಗೀತ ವಿದ್ಯಾಲಯದ ವಿದ್ಯಾರ್ಥಿಗಳಿಂದ ದಾಸರ ಪದಗಳ ಗಾಯನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ಗೊಗ್ಗಿ ಕೃಷ್ಣಾಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಒಂದನೇ ಮುಖ್ಯರಸ್ತೆ, ಪವಮಾನಪುರ, ಬೆಂಗಳೂರು

# ರಾಗಿಣಿಗೆ ಬಿಗ್ ರಿಲೀಫ್: ಡ್ರಗ್ಸ್ ಸರಬರಾಜು ಪ್ರಕರಣ ರದ್ದುಗೊಳಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಮಾದಕವಸ್ತು ಸರಬರಾಜು ಮಾಡಿ ಅಕ್ರಮವಾಗಿ ಹಣ ಗಳಿಕೆ ಮಾಡಿದ ಆರೋಪದಲ್ಲಿ ಬೆಂಗಳೂರಿನ ಕಾಟನ್ ಪೇಟೆ ಠಾಣೆಯಲ್ಲಿ ನಟಿ ರಾಗಿಣಿ ದ್ವಿವೇದಿ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿದೆ. ರಾಗಿಣಿ ದ್ವಿವೇದಿ ಹಾಗೂ ಪ್ರಶಾಂತ್ ರಂಕ ವಿರುದ್ಧ ಬೆಂಗಳೂರಿನ ಕಾಟನ್ ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಈ ಪ್ರಕರಣ ರದ್ದು ಕೋರಿ ರಾಗಿಣಿ ದ್ವಿವೇದಿ ಹಾಗೂ ಪ್ರಶಾಂತ್ ರಂಕ್ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಮೂರ್ತಿ ಚಂದನಗೌಡರ ಅವರಿದ್ದ ಪೀಠ, ಪ್ರಕರಾ ರದ್ದು ಮಾಡಿ ಆದೇಶ ಹೊರಡಿಸಿದೆ. ಆರೋಪಪಟ್ಟಿಯಲ್ಲಿ ಸಾಕ್ಷಾಧಾರಗಳು ಹಾಗೂ ಇತರೆ ಆರೋಪಿಗಳ ಹೇಳಿಕೆಗಳನ್ನು ಹೊರತುಪಡಿಸಿದರೆ ಅರ್ಜಿದಾರರು ಪಾರ್ಟಿಗಳನ್ನು ಆಯೋಜನೆ ಮಾಡುವುದು ಅಥವಾ ಮಾದಕ ವಸ್ತುಗಳನ್ನು ಮಾರಾಟ ಮಾಡುವುದಕ್ಕೆ ಸಂಬಂಧಿಸಿದಂತೆ ತನಿಖಾಧಿಕರಿಗಳು ಯಾವುದೇ ಸಾಕ್ಷಾಧಾರಗಳನ್ನು ಒದಗಿಸಿಲ್ಲ. ಹೀಗಾಗಿ ಅರ್ಜಿದಾರರ ವಿರುದ್ಧ ಕ್ರಿಮಿನಲ್ ವಿಚಾರಣೆ ಮುಂದುವರೆಸುವುದು ಕಾನೂನು ದುರ್ಬಳಕೆಯಾಗುತ್ತದೆ ಎಂದು ಅಭಿಪ್ರಾಯಪಟ್ಟಿದೆ.

# ರಾಜ್ಯ ಸರ್ಕಾರಿ ನೌಕರರಿಗೆ ಮುಖ್ಯ ಮಾಹಿತಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಅನೇಕ ಸರ್ಕಾರಿ ನೌಕರರಿಗೆ ತಮ್ಮ ವಿರುದ್ಧ ಸಾಬೀತಾದಂತ ಆರೋಪಗಳಿಗೆ ಯಾವೆಲ್ಲ ಶಿಕ್ಷೆ ಆಗಲಿವೆ ಅಂತ ಗೊತ್ತಿಲ್ಲ. ಇಂತಹ ರಾಜ್ಯ ಸರ್ಕಾರಿ ನೌಕರರಿಗೆ ನೌಕರನ ವಿರುದ್ಧ ಸಾಬೀತಾದ ಆರೋಪಗಳಿಗೆ ಅನುಗುಣವಾಗಿ ಯಾವೆಲ್ಲ ದಂಡನೆಗಳನ್ನು ವಿಧಿಸಬಹುದಾಗಿದೆ ಅಂತ ಮುಂದೆ ಓದಿ.



ಈ ಬಗ್ಗೆ 2001ರಲ್ಲಿ ರಾಜ್ಯ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿಯವರು ಮಾಹಿತಿ ನೀಡಿದ್ದು, ಅದರಲ್ಲಿ ರಾಜ್ಯ ಸರ್ಕಾರಿ ನೌಕರನು ಸೇವೆಯಲ್ಲಿ ಎಸಗುವ ಅಪರಾಧಗಳ ಕುರಿತು ವಿಚಾರಣೆ ನಡೆಸಿ, ಸಾಬೀತಾದ ಪ್ರಕರಣಗಳಲ್ಲಿ ಆರೋಪಿ ನೌಕರನಿಗೆ ವಿಧಿಸಬಹುದಾದಂತಹ ದಂಡನೆಗಳ ಬಗ್ಗೆ ಕರ್ನಾಟಕ ಸಿವಿಲ್ ಸೇವಾ ನಿಯಮದಲ್ಲಿ ನಿರ್ದಿಷ್ಟಪಡಿಸಲಾಗಿದೆ ಅಂತ ತಿಳಿಸಿದ್ದಾರೆ.

ಇನ್ನೂ ಸದರಿ ನಿಯಮದಲ್ಲಿ ಯಾವ ಆರೋಪಕ್ಕೆ ಯಾವ ಶಿಕ್ಷೆಯನ್ನು ವಿಧಿಸಬಹುದು ಎಂಬುದನ್ನು ನಿಗದಿಪಡಿಸಿರುವುದಿಲ್ಲ.

ಇದರಿಂದಾಗಿ ಕೆಲವು ಸಂದರ್ಭಗಳಲ್ಲಿ ಆರೋಪದ ತೀವ್ರತೆಗಿಂತ ವಿಧಿಸಲಾದ ದಂಡನೆಗಳು ಕಡಿಮೆ ಅಥವಾ ಹೆಚ್ಚಿನದಾಗುವ ಹೊಂದಿದ ಆರೋಪಗಳ ಶಿಸ್ತು ಪ್ರಾಧಿಕಾರಿಗಳು, ಹೋಲಿಸ ಬಹುದಾದಂತಹ ತೀವ್ರತೆಯನ್ನು ಹೊಂದಿದ ಆರೋಪಗಳ ಪ್ರಕರಣಗಳಲ್ಲಿ ಬೇರೆ ಬೇರೆ ದಂಡನೆಗಳನ್ನು ವಿಧಿಸುವ ಸಾಧ್ಯತೆಯೂ ಇರುತ್ತದೆ ಎಂದಿದ್ದಾರೆ. ಆದುದರಿಂದ ಸರ್ಕಾರವು ಇದನ್ನು ಕೂಲಂಕುಷವಾಗಿ ಪರಿಶೀಲಿಸಿ, ಸಾಬೀತಾದಂತಹ ಆರೋಪಗಳಿಗೆ ಅನುಗುಣವಾಗಿ ವಿಧಿಸಬಹುದಾದಂತಹ ದಂಡನೆಗಳು ಉದಾಹರಣೆಗಳನ್ನು ಈ ಕೆಳಗೆ ನಮೂದಿಸಿದೆ ಅಂತ ಮಾಹಿತಿ ನೀಡಿದ್ದಾರೆ.

# ಬಿಬಿಎಂಪಿ ಅತಿಥಿ ಶಿಕ್ಷಕರಿಗಿಲ್ಲ ವೇತನ ಹೆಚ್ಚಳ ಭಾಗ್ಯ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ಶಾಲಾ - ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗೌರವ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ 7 ವರ್ಷದಿಂದ ವೇತನ ಹೆಚ್ಚಳ ಮಾಡದ ಕಾರಣ ಅವರೆಲ್ಲರೂ ಕಡಿಮೆ ಮೊತ್ತದ ಗೌರವಧನದಲ್ಲೇ ಬದುಕು ಸವೆಸುತ್ತಿದ್ದಾರೆ. ದಶಕಗಳಿಂದ ವೇತನ ಬಡ್ತಿ ಕಾಣದ 800ಕ್ಕೂ ಹೆಚ್ಚು ಶಿಕ್ಷಕ/ಉಪನ್ಯಾಸಕರ ನೆರವಿಗೆ ಸರ್ಕಾರ ಕೂಡ ಧಾವಿಸದಿರುವುದು ಅಚ್ಚರಿ ಮೂಡಿಸಿದೆ.

ರಾಜಧಾನಿ ಬೆಂಗಳೂರು ಶೈಕ್ಷಣಿಕ ನಗರವಾಗಿ ಪ್ರಸಿದ್ಧಿ ಪಡೆದಿದೆ. ಆದರೆ, ಪಾಲಿಕೆಯ ಹಲವು ಶಾಲಾ ಕಾಲೇಜುಗಳು ಶಿಥಿಲಾವಸ್ಥೆಯಲ್ಲಿವೆ. ಇಂತಹ ಸ್ಥಿತಿಯಲ್ಲೇ ಶಿಕ್ಷಕರು ವಿದ್ಯಾರ್ಥಿಗಳಿಗೆ ಪಾಠ-ಪ್ರವಚನ ಮಾಡುತ್ತಾ ಉತ್ತಮ ಲಿತಾಂಶ ದಾಖಲಿಸುತ್ತಿದ್ದರೂ ವೇತನ ಹೆಚ್ಚಿಸುವ ಗೋಜಿಗೆ ಹೋಗಿಲ್ಲ. ಪ್ರತಿ ಬಾರಿಯೂ ಪ್ರಸ್ತಾವನೆ ನೀಡುವ ವೇಳೆ ಭರವಸೆ ನೀಡಿ ಸಾಗಹಾಕುವ ಅಧಿಕಾರಿಗಳ



ಕಾರ್ಯವೈಖರಿಯಿಂದ ಶಿಕ್ಷಕ ವೃಂದ ಸಾಲ ಮಾಡಿ ಜೀವನೋಪಾಯ ಮಾಡುತ್ತಿದ್ದಾರೆ.

ಕಳೆದ ವರ್ಷದ ಸೆಪ್ಟೆಂಬರ್‌ನಲ್ಲಿ ವೇತನ ಹೆಚ್ಚಳ ಸಂಬಂಧ ಮುಷ್ಕರದ ಹಾದಿ ಹಿಡಿದಾಗ ಮಧ್ಯಪ್ರವೇಶಿಸಿದ್ದ ಪಾಲಿಕೆಯ ಮುಖ್ಯ ಆಯುಕ್ತರು, ವೇತನ ಹೆಚ್ಚಳದ ಜತೆಗೆ ಇನ್ನಿತರ ಸೌಲಭ್ಯಗಳನ್ನು ಶೀಘ್ರವೇ ಜಾರಿ ಮಾಡುವ ಭರವಸೆ ನೀಡಿದ್ದರು. ಆದರೀಗ ಆ ವಾಗ್ದಾನದಂತೆ ಪಾಲಿಕೆ ನಡೆದುಕೊಳ್ಳುತ್ತಿಲ್ಲ. ಸೌಲಭ್ಯಗಳನ್ನು ನೀಡುತ್ತಿಲ್ಲ ಎಂದು ಅತಿಥಿ ಶಿಕ್ಷಕ- ಉಪನ್ಯಾಸಕರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

> **ಬಿಬಿಎಂಪಿಯ ಶಾಲಾ-ಕಾಲೇಜುಗಳಲ್ಲಿನ ಶೇ.80 ಮಂದಿ ಶಿಕ್ಷಕ ಉಪನ್ಯಾಸಕರು ಕಾಯಂ ಸಿಬ್ಬಂದಿ ಅಲ್ಲ. ಇವರ ಪೈಕಿ ಹೆಚ್ಚಿನವರು 2 ದಶಕದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಮೊದಲು ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿದ್ದು ಕಳೆದ ಸೆಪ್ಟೆಂಬರ್‌ನಲ್ಲಿ ಅತಿಥಿ ಶಿಕ್ಷಕ/ ಉಪನ್ಯಾಸಕರಾಗಿ ಪದನಾಮ ಬದಲಿಸಲಾಗಿದೆ. ಆದರೂ, ವೇತನ ಹೆಚ್ಚಳ ಮಾಡಿಲ್ಲ. ಹೊರಗುತ್ತಿಗೆ ಅಡಿಯಲ್ಲಿದ್ದಾಗ ಪಿಎಫ್, ಇಎಸ್‌ಐ ಸೌಲಭ್ಯ ಸಿಗುತ್ತಿತ್ತು. ಈಗ ಆ ಸೌಲಭ್ಯಕ್ಕೆ ಕೊಕ್ ನೀಡಲಾಗಿದೆ.**

# ಬಿಜೆಪಿ ಸಂಸದರು ಹೋರಾಡ್ತಾರಾ ಅಂತ ನೋಡ್ತಿದ್ದೆ ಎಂದಿದ್ದ ಸಿಎಂ ನೆಟ್ಟಿಗರ ಟಾಂಗ್

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರದಿಂದ ತೆರಿಗೆ ಹಂಚಿಕೆ ವಿಚಾರದಲ್ಲಿ ಅನ್ಯಾಯವಾಗಿದೆ ಎಂದು ಸರಣಿ ಟ್ವೀಟ್ ಮೂಲಕ ಟೀಕೆ ಮಾಡಿರುವ ಸಿಎಂ ಸಿದ್ದರಾಮಯ್ಯಗೆ ನೆಟ್ಟಿಗರು ಟಾಂಗ್ ಕೊಟ್ಟಿದ್ದಾರೆ. ಕೇಂದ್ರದಿಂದ ರಾಜ್ಯಗಳಿಗೆ ಕೊಡುವ ತೆರಿಗೆ ಪಾಲಿನಲ್ಲಿ ಕರ್ನಾಟಕಕ್ಕೆ ಈ ಬಾರಿ 6,310 ಕೋಟಿ ರೂ. ಮಾತ್ರ ಸಿಕ್ಕಿದೆ. ಇದರ



ಬಗ್ಗೆ, ಸಿಎಂ ಸಿದ್ದರಾಮಯ್ಯ ತಕ್ಷಣವೇ ಪ್ರತಿಕ್ರಿಯಿಸಿರಲಿಲ್ಲ.

ಆದರೆ ಈಗ ಎರಡು ದಿನಗಳ ನಂತರ ಸರಣಿ ಟ್ವೀಟ್ ಮಾಡಿ ಕೇಂದ್ರ ಮತ್ತು ರಾಜ್ಯದ ಬಿಜೆಪಿ ನಾಯಕರಿಗೆ ಟಾಂಗ್ ಕೊಟ್ಟಿದ್ದಾರೆ. ನಾನು ಇಷ್ಟು ದಿನವೂ ತೆರಿಗೆ ಪಾಲಿನಲ್ಲಿ ಕರ್ನಾಟಕಕ್ಕೆ ಅನ್ಯಾಯವಾಗಿರುವ ಬಗ್ಗೆ ಸುಮ್ಮನಿದ್ದಿದ್ದು ಯಾಕೆ ಎಂದರೆ ಕರ್ನಾಟಕದ ಬಿಜೆಪಿ ಸಂಸದರು ಮಾತನಾಡುತ್ತಾರೆಯೇ ಎಂದು ನೋಡಲು.

ಆದರೆ ಯಾವೊಬ್ಬ ಬಿಜೆಪಿ ಸಂಸದರೂ ಕೇಂದ್ರದ ಬಳಿ ನಮ್ಮ ರಾಜ್ಯಕ್ಕೆ ಆಗಿರುವ ಅನ್ಯಾಯದ ಬಗ್ಗೆ ಚಕಾರವೆತ್ತಿಲ್ಲ. ಹೀಗಾಗಿಯೇ ಜನರ ಮುಂದೆ ಕೇಂದ್ರದ ಅನ್ಯಾಯದ ಬಗ್ಗೆ ತೆರೆದಿಡಲು ಹೊರಟಿದ್ದೇನೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.


> **ಇದಕ್ಕೆ ಪ್ರತಿಕ್ರಿಯಿಸಿರುವ ನೆಟ್ಟಿಗರಲ್ಲಿ ಕೆಲವರು ಅಂಕಿ ಅಂಶ ಸಮೇತ ತಿರುಗೇಟು ಕೊಟ್ಟರೆ ಮತ್ತೆ ಕೆಲವರು ನೀವು ಹೀಗೆ ಬಂದ ಹಣವನ್ನು ನಿಮ್ಮ ಫ್ರೀ ಯೋಜನೆಗಳಿಗೆ ಖರ್ಚು ಮಾಡಿ ಖಾಲಿ ಮಾಡ್ತೀರಿ ಮಧ್ಯಮ ವರ್ಗದ ಜನರಿಗೆ ದರ ಹೆಚ್ಚಳದ ಬರೆ ಎಳೆಯುತ್ತೀರಿ ಎಂದು ಟಾಂಗ್ ಕೊಟ್ಟಿದ್ದಾರೆ. ಕೆಲವರು ಸಿದ್ದರಾಮಯ್ಯ ವಾದವನ್ನು ಸಮರ್ಥಿಸಿಕೊಂಡಿದ್ದು ಕೇಂದ್ರದ ಅನ್ಯಾಯದ ವಿರುದ್ಧ ಧ್ವನಿಯೆತ್ತಬೇಕು ಎಂದಿದ್ದಾರೆ.**

# ಕೆಪಿಸಿಸಿ ಓಬಿಸಿ ಘಟಕದ ಅಧ್ಯಕ್ಷರ ನೇಮಕಕ್ಕೆ ತಡೆ

• ಉದಯವಾಹಿನಿ, ಬೆಂಗಳೂರು

ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಹೈಕಮಾಂಡ್ ಅನ್ನು ಕಡೆಗಣಿಸಿ ಪಕ್ಷದ ಹಿಂದುಳಿದ ವರ್ಗಗಳ ಘಟಕಕ್ಕೆ ಅಧ್ಯಕ್ಷರನ್ನು ನೇಮಿಸಲು ಮುಂದಾಗಿದ್ದಾರೆ ಎಂಬ ದೂರು ಹೈಕ ಮಾಂಡ್ಯ ತಲುಪಿದ್ದು, ತಕ್ಷಣವೇ ನೇಮ ಕಾತಿ ಆದೇಶಕ್ಕೆ ತಡೆ ನೀಡಲಾಗಿದೆ. ಹೈಕಮಾಂಡ್ಯ ಕಾಂಗ್ರೆಸ್ನ ಕೆಲ ಶಾಸಕರು ದೂರು ನೀಡಿದ್ದು, ಅದನ್ನು ಮಾನ್ಯ ಮಾಡಲಾಗಿದೆ. ಕಾಂಗ್ರೆಸ್ ಶಾಸಕ ಆಕ್ಷೇಪವನ್ನು ಪರಿಗಣಿಸಿ ಎಐಸಿಸಿಯ ಹಿಂದುಳಿದ ವರ್ಗಗಳ ಘಟಕದ ಅಧ್ಯಕ್ಷ ಕ್ಯಾಪ್ಟನ್ ಅಜಂಗ್ ಯಾದವ್ ಅವರು ಡಿ.ಕೆ. ಶಿವಕುಮಾರ್ ಅವರಿಗೆ ಜ.12 ರಂದು ಪತ್ರ ಬರೆದಿದ್ದಾರೆ. ಜ.9 ರಂದು ವಿಧಾನಪರಿಷತ್ ಸದಸ್ಯ ಶ್ರೀನಿವಾಸ್ ಅವರನ್ನು ಕೆಪಿಸಿಸಿಯ ಹಿಂದುಳಿದ ವರ್ಗಗಳ ಘಟಕದ ಪ್ರಭಾರಿ ಅಧ್ಯಕ್ಷರನ್ನಾಗಿ ನೇಮಿಸಿರುವ ಆದೇಶಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಪೂರ್ವಾನುಮತಿ ಪಡೆದಿಲ್ಲ. ಹೀಗಾಗಿ ನೇಮಕಾತಿ ಆದೇಶಕ್ಕೆ ತಡೆ ನೀಡಲಾಗಿದೆ. ಹಿಂದುಳಿದ ವರ್ಗಗಳ ಘಟಕದ ಅಧ್ಯಕ್ಷರ ನೇಮಕಾತಿಗೆ ರಾಷ್ಟ್ರೀಯ ಅಧ್ಯಕ್ಷರ ಅನುಮತಿ ಪಡೆಯಲು ಸೂಕ್ತ ಪ್ರಸ್ತಾವನೆಯನ್ನು ರವಾನಿಸುವಂತೆ ಪತ್ರದಲ್ಲಿ ಸೂಚಿಸಿದ್ದಾರೆ.

ಈ ಮೊದಲು ಓಬಿಸಿ ಘಟಕಕ್ಕೆ ಮಧು ಬಂಗಾರಪ್ಪ ಅಧ್ಯಕ್ಷರಾಗಿ ಕೆಲಸ ಮಾಡುತ್ತಿದ್ದರು. ಪ್ರಸ್ತುತ ಅವರು ಸಚಿವರಾದ ಹಿನ್ನೆಲೆಯಲ್ಲಿ ಬದಲಿ ಅಧ್ಯಕ್ಷರ ನೇಮಕಾತಿವರೆಗೂ



ಉದಯವಾಹಿನಿ ಚಿತ್ರ

> **ವಲಸೆ ಬಂದ ನಾಯಕರಿಗೆ ಹೆಚ್ಚಿನ ಮಣೆ ಹಾಕಲಾಗುತ್ತಿದೆ ಎಂದು ಕಾಂಗ್ರೆಸ್ ಒಳವಲಯದಲ್ಲಿ ಆಕ್ಷೇಪಗಳು ತೀವ್ರವಾಗಿವೆ. ಈ ಹಿನ್ನೆಲೆಯಲ್ಲಿ ಕೆಲವರು ಹೈಕಮಾಂಡ್ಯ ನೇರವಾಗಿ ದೂರು ಸಲ್ಲಿಸಿದ್ದು, ಶ್ರೀನಿವಾಸ್ ನೇಮಕಾತಿಯನ್ನು ವಿರೋಧಿಸಿದ್ದರು. ಅದು ಫಲ ನೀಡಿದ್ದು, ಕೆಪಿಸಿಸಿ ಅಧ್ಯಕ್ಷರಿಗೆ ಹಿನ್ನಡೆಯಾದಂತಾಗಿದೆ.**

ಪ್ರಭಾರಿಯಾಗಿ ಟಿ.ಡಿ.ಶ್ರೀನಿವಾಸ್ ಅವರನ್ನು ಕೆಪಿಸಿಸಿ ಅಧ್ಯಕ್ಷರು ನೇಮಿಸಿದ್ದರು. ಬಿಜೆಪಿಯಿಂದ ಕಳೆದ ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ವಲಸೆ ಬಂದ ಮಾಜಿ ಶಾಸಕರಾದ ಪೂರ್ಣಿಮಾ ಅವರ ಪತಿಯಾದ ಟಿ.ಡಿ.ಶ್ರೀನಿವಾಸನ್ನು ವಿಧಾನಪರಿಷತ್ ಸದಸ್ಯರಾಗಿ ಆಯ್ಕೆ ಮಾಡಲಾಗಿದೆ.

# 6 ವರ್ಷದ ಬಾಲಕಿ ಮೇಲೆ ಅತ್ಯಾಚಾರವೆಸಗಿ ಕೊಲೆ ಮಾಡಿ ಬಿಹಾರಿಯ ಅಟ್ಟಹಾಸ

• ಉದಯವಾಹಿನಿ, ಬೆಂಗಳೂರು

ಆರು ವರ್ಷದ ಬಾಲಕಿ ಮೇಲೆ ಬಿಹಾರದ ಕಾಮುಕ ಯುವಕನೊಬ್ಬ ಅತ್ಯಾಚಾರವೆಸಗಿ ಕೊಲೆ ಮಾಡಿರುವ ಹೃದಯವಿದ್ರಾವಕ ಘಟನೆ ರಾಮಮೂರ್ತಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಹೊಯ್ಸಳ ನಗರದಲ್ಲಿ ಕಟ್ಟಡ ನಿರ್ಮಾಣವಾಗುತ್ತಿದ್ದು ಸೆಕ್ಯೂರಿಟಿ ಗಾರ್ಡ್ ಕೆಲಸ ಮಾಡಿಕೊಂಡು ನೇಪಾಳಿ ಕುಟುಂಬ ಇಲ್ಲೇ ನೆಲೆಸಿದೆ.ಸೆಕ್ಯೂರಿಟಿ ಗಾರ್ಡ್ ದಂಪತಿಗೆ 6 ವರ್ಷದ ಮಗಳಿದ್ದಳು.

ಆಕೆ ಕಟ್ಟಡದ ಸಮೀಪದಲ್ಲೇ ಆಟವಾಡಿಕೊಂಡಿದ್ದಳು. ನಿನ್ನೆ ಸಂಜೆ ಪೋಷಕರು ಹೊರಗೆ ಹೋಗಿದ್ದರು. ಹಾಗಾಗಿ ಬಾಲಕಿ ಮನೆಯಲ್ಲಿ ಒಬ್ಬಳೇ ಇದ್ದಳು. ಈ ಸಮಯವನ್ನು ನೋಡಿಕೊಂಡಿದ್ದ ಆರೋಪಿ ಮನೆಗೆ ನುಗ್ಗಿ ಬಾಲಕಿಯನ್ನು ಪುಸಲಾಯಿಸಿ ನಿರ್ಮಾಣ ಹಂತದ ಕಟ್ಟಡಕ್ಕೆ ಕರೆದೊಯ್ದು ಅತ್ಯಾಚಾರವೆಸಗಿದ್ದಾನೆ.

ಕಿರುಚದಂತೆ ಬಾಲಕಿಯ ಬಾಯಿಯನ್ನು ಮುಚ್ಚಿದ್ದರಿಂದ ಆಕೆ ಉಸಿರುಗಟ್ಟಿ ನರಳಿ ನರಳಿ ಪ್ರಾಣಬಿಟ್ಟಿದ್ದಾಳ.

ಹೊರಗೆ ಹೋಗಿದ್ದ ಪೋಷಕರು ಮನೆಗೆ ಬಂದಾಗ ಮಗಳು ಇಲ್ಲದಿರುವುದನ್ನು ಗಮನಿಸಿ ಕಟ್ಟಡದಲ್ಲಿ ಹುಡುಕಾಡಿದಾಗ ಬಾಲಕಿಯ ಶವ ಪತ್ತೆಯಾಗಿದೆ. ಸುದ್ದಿ ತಿಳಿಯುತ್ತಿದ್ದಂತೆ ಸ್ಥಳೀಯ ನಿವಾಸಿಗಳು ದೌಡಾಯಿಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಿಷಯ ತಿಳಿದು ರಾಮಮೂರ್ತಿನಗರ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಬಾಲಕಿಯ ತಂದೆಯಿಂದ ಮಾಹಿತಿ ಪಡೆದು ಮೃತದೇಹವನ್ನು ಅಂಬೇಡ್ಕರ್ ಆಸ್ಪತ್ರೆಗೆ ರವಾನಿಸಿ, ಕಾಮುಕನಿಗಾಗಿ ಶೋಧ ಕೈಗೊಂಡು ಕೃತ್ಯ ನಡೆದ ಕೆಲವೇ ಗಂಟೆಗಳಲ್ಲಿ ಆರೋಪಿ ಗಾರಕೆಲಸಗಾರನನ್ನು ಬಂಧಿಸಿದ್ದಾರೆ.

# ಗಣರಾಜ್ಯೋತ್ಸವದಂದು ಬೆಂಗಳೂರಿನ ವಿವಿಧೆಡೆ ಬಾಂಬ್ ಬೆದರಿಕೆ

• ಉದಯವಾಹಿನಿ, ಬೆಂಗಳೂರು

ಇದೇ ಜನವರಿ 26ರಂದು ಗಣರಾಜ್ಯೋತ್ಸವದಂದು ಬೆಂಗಳೂರಿನ ವಿವಿಧ ಪ್ರದೇಶಗಳಲ್ಲಿ ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಬ್ಲಾಸ್ಟ್ ಮಾಡಿದಂತೆ ಬೆಂಗಳೂರಿನ ವಿವಿಧೆಡೆ ಬಾಂಬ್ ಸ್ಫೋಟಿಸುವುದಾಗಿ ಬೆದರಿಕೆ ಹಾಕಿದ್ದ ಆರೋಪಿಯನ್ನು ವಿಧಾನಸೌಧ ಠಾಣೆ ಪೊಲೀಸರು ಇದೀಗ ಅರೆಸ್ಟ್ ಮಾಡಿದ್ದಾರೆ.

ಹೌದು ಬಂಧಿತ ಆರೋಪಿಯನ್ನು ಶಿವಾಜಿನಗರದ ಮನ್ಸೂರ್ (40) ಎಂದು ತಿಳಿದುಬಂದಿದೆ. ಜನವರಿ 9ರಂದು ರಿಯಾಜ್ ಎಂದು ನಗರ ಪೊಲೀಸ್ ಆಯುಕ್ತರ ಕಚೇರಿಯ ಕಂಟ್ರೋಲ್ ರೂಮ್ ಗೆ ಕರೆ ಮಾಡಿದ್ದ. ಬಳಿಕ ಈತ 6 ವ್ಯಕ್ತಿಗಳ ಹೆಸರು, ಅವರ ಮೊಬೈಲ್ ಸಂಖ್ಯೆಗಳ ಮಾಹಿತಿ ನೀಡಿ, ಈ ವ್ಯಕ್ತಿಗಳು ಗಣರಾಜ್ಯೋತ್ಸವದ ದಿನ ನಗರದಲ್ಲಿ ವಿವಿಧೆಡೆ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟದ ರೀತಿ ಬಾಂಬ್ ಸ್ಫೋಟಿಸಲು ಸಂಚು ರೂಪಿಸಿದ್ದಾರೆ ಎಂದು ಹೇಳಿದ್ದ. ವಿಷಯ ತಿಳಿದು ಕಂಟ್ರೋಲ್ ರೂಂ ಪಿಎಸ್‌ಐ ಬೆಂಗಳೂರಿನ ವಿಧಾನಸೌಧ ಠಾಣೆಗೆ ದೂರು ನೀಡಿದ್ದಾರೆ. ಮೊಬೈಲ್ ಸಂಖ್ಯೆಯ ಸುಳಿವು ಆಧರಿಸಿ ವಿಧಾನಸೌಧ ಠಾಣೆ ಪೊಲೀಸರು ಇದೀಗ ಆರೋಪಿಯನ್ನು ಅರೆಸ್ಟ್ ಮಾಡಿದ್ದು, ಇದೊಂದು ಹೊಸ ಕರೆ ಎಂದು ಸ್ಪಷ್ಟಪಡಿಸಿದ್ದಾರೆ. ಸದ್ಯ ಆರೋಪಿಯನ್ನು ವಶಕ್ಕೆ ಪಡೆದುಕೊಂಡ ಪೊಲೀಸರು ವಿಚಾರಣೆ ನಡೆಸಿ ತನಿಖೆ ಕೈಗೊಂಡಿದ್ದಾರೆ.

# ದನದ ಕೆಚ್ಚಲು ಕೊಯ್ದ ಪ್ರಕರಣಕ್ಕೆ ಕಾಂಗ್ರೆಸ್ ಸರಕಾರದ ಧೋರಣೆಯೇ ಕಾರಣ

## ದನದ ಕೆಚ್ಚಲು ಕೊಯ್ದವನು ಯಾರೋ ಆರೋಪಿ ಅಂತಿರೋನು ಯಾವನೋ ಬಡಪಾಯಿ: ಬಿವೈ ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ದನದ ಕೆಚ್ಚಲು ಕೊಯ್ದ ಪ್ರಕರಣಕ್ಕೆ ರಾಜ್ಯದ ಕಾಂಗ್ರೆಸ್ ಸರಕಾರದ ಧೋರಣೆಯೇ ಕಾರಣ ಎಂದು ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ.

ಕೆಚ್ಚಲು ಕೊಯ್ದ ವಿಚಾರಕ್ಕೆ ಸಂಬಂಧಿಸಿದಂತೆ ಬಿಜೆಪಿ ರಾಜ್ಯ ತಂಡವು ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ಕಾಟನ್ ಪೇಟೆಯ ದುಂಡು ಮಾರಿ ಯಮ್ಮ ದೇವಸ್ಥಾನದ ಬಳಿ ಇರುವ ಮಾಲೀಕನ ಮನೆಗೆ ಭೇಟಿ ನೀಡಿತು.

ಅಲ್ಲದೇ ಗೋಪೂಜೆಯನ್ನೂ ನೆರವೇರಿಸಿ ದನದ ಮಾಲೀಕನಿಗೆ ಧೈರ್ಯ ತುಂಬಿತು.

ಗೋಪೂಜೆ ಮಾಡುವ ಈ ನಾಡಿನಲ್ಲಿ, ದೇಶದಲ್ಲಿ ಈ ದುರ್ಘಟನೆ ನಡೆದಿರುವುದು ಅಕ್ಷಮ್ಯ ಅಪರಾಧ ಎಂದು ವಿಜಯೇಂದ್ರ ಅವರು ಖಂಡಿಸಿದರು.


ಉದಯವಾಹಿನಿ ಚಿತ್ರ

ಈ ದುರ್ಘಟನೆ ಸಿದ್ದರಾಮಯ್ಯನವರಿಗೆ ಮತ್ತು ಕಾಂಗ್ರೆಸ್ ಸರಕಾರಕ್ಕೆ ಒಳ್ಳೆಯದು ಮಾಡುವುದಿಲ್ಲ ಎಂದು ಅವರು ಎಚ್ಚರಿಸಿದರು.

ಇವರ ಪಾಪದ ಕೊಡ ತುಂಬಿದೆ. ಆದ್ದರಿಂದ ಇಂಥ ದುರ್ಘಟನೆ ಆಗುತ್ತಿದೆ ಎಂದು ಅವರು ತಿಳಿಸಿದರು. ಯಾರೋ ಬಡಪಾಯಿಯನ್ನು ತಂದು ಅವನೇ ಮಾಡಿದ್ದಾಗಿ ಬಿಂಬಿಸುವ ಪ್ರಯತ್ನ ಆಗುತ್ತಿದೆ ಎಂದು ಚರ್ಚೆ ನಡೆದಿದೆ. ಬಡ ಕುಟುಂಬದಿಂದ ಬಂದ ಹಸುವಿನ ಮಾಲೀಕರು ಎಲ್ಲವನ್ನೂ ಧೈರ್ಯದಿಂದ ಎದುರಿಸುತ್ತಿದ್ದಾರೆ. ಆದ್ದರಿಂದ ಅವರನ್ನು ಭೇಟಿ ಮಾಡಿ, ಗೋಪೂಜೆ ಮಾಡಿದ್ದೇವೆ ಎಂದು ತಿಳಿಸಿದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಮಾತನಾಡಿ, ಕಾಂಗ್ರೆಸ್ ಸರಕಾರವು

> **ಸುಮಾರು 500 ಕೋಟಿಗೂ ಹೆಚ್ಚು ಮೌಲ್ಯದ ಜಾಗದ ದನದ ಆಸ್ಪತ್ರೆ ಇಲ್ಲಿದೆ. ಈ ಜಾಗವನ್ನು ಸರಕಾರವು ವಕ್ಫ್ ಬೋರ್ಡಿಗೆ ನೀಡಿದೆ. ಅದರ ವಿರುದ್ಧ ಹೋರಾಟ ಮಾಡಿದವರಲ್ಲಿ ಮುಂಚೂಣಿಯಲ್ಲಿ ಕರ್ಣ ಇದ್ದು, ಕರ್ಣನ ಹಸುಗಳ ಕೆಚ್ಚಲು ಕತ್ತರಿಸುವ ಮೂಲಕ ಕರ್ಣನಿಗೂ ಎಚ್ಚರಿಕೆ ನೀಡಿದ್ದಾರೆ ಎಂದು ಆತಂಕ**

**ಸುಮಾರು 500 ಕೋಟಿಗೂ ಹೆಚ್ಚು**

ಹಿಂದೂಗಳ ವಿಚಾರದಲ್ಲಿ ತಾರತಮ್ಯ ನೀತಿ ಅನುಸರಿಸುತ್ತಿದೆ ಎಂದು ಟೀಕಿಸಿದರು. ಹಿಂದೂ-ಮುಸ್ಲಿಂ ಸಮುದಾಯಕ್ಕೆ ಬೇರೆ ಬೇರೆ ನೀತಿ ಅನುಸರಿಸಿ ಒಡೆಯುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

**ಇದು ಗೂಂಡಾಗಿರಿ ಸರಕಾರ;** ತಾಲಿಬಾನ್ ಸರಕಾರ ಇಲ್ಲಿದೆ. ಮುಸಲ್ಮಾನರಿಗೆ ಏನಾದರೂ ಆಗಿದ್ದರೆ ಸಿದ್ದರಾಮಯ್ಯನವರು ಪಂಚೆ ಎತ್ತಿಕೊಂಡು ಬರುತ್ತಿದ್ದರು ಎಂದು ತಿಳಿಸಿದರು.

ಆರೋಪಿ ಮತಿಭ್ರಮಣೆಗೆ ಒಳಗಾದವ ಎಂದು ಕಾಂಗ್ರೆಸ್ಸಿಗರು ಕಥೆ ಹೆಣೆದಿದ್ದಾರೆ. ಆತ 10 ವರ್ಷಗಳಿಂದ ಅವರ ಅಣ್ಣನ ಫ್ಯಾಕ್ಟರಿಯಲ್ಲಿ ಕೆಲಸ ಮಾಡುತ್ತಿದ್ದ ಮಾಹಿತಿ ಇದೆ.

ಆತ ಮದ್ಯಪಾನ ಮಾಡಿದ್ದರೆ ಅಷ್ಟು ಹೊತ್ತು ಬಾರ್ ತೆರೆದಿರಲು ಹೇಗೆ ಸಾಧ್ಯ, ಮುಂಜಾನೆ 3 ಅಥವಾ 4ರ ಹೊತ್ತಿಗೆ ಇಂಥ ದುಷ್ಕೃತ್ಯ ಮಾಡಲು ಹೇಗೆ ಸಾಧ್ಯ, ಎಂದು ಪ್ರಶ್ನಿಸಿದರು.

> **ಒಬ್ಬರೇ ಮಾಡಿದ ಕೃತ್ಯ ಇದಲ್ಲ**
>
> ಇದರ ಹಿಂದಿರುವ ಎಲ್ಲರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಅವರು ಆಗ್ರಹಿಸಿದರು. ಇದೊಂದು ಧರ್ಮಯುದ್ಧ, ಹಿಂದೂಪರ ಸಂಘಟನೆಗಳ ಹೋರಾಟಕ್ಕೆ ಬಿಜೆಪಿ ಬೆಂಬಲ ಕೊಡಲಿದೆ ಎಂದು ಅವರು ಪ್ರಕಟಿಸಿದರು.

ಅಂತರಾಳದಿಂದ... EDITORIAL

# ನಕಲಿ ಔಷಧಿಗಳ ಹಾವಳಿ

ನಮ್ಮ ವ್ಯವಸ್ಥೆ ಎಷ್ಟು ಹದಗೆಟ್ಟಿದೆಯೆಂದರೆ ಮನುಷ್ಯನ ಜೀವ ಉಳಿಸಲು ತಯಾರಿಸಲ್ಪಡುವ ಔಷಧಿಗಳು ಜೀವವನ್ನು ರಕ್ಷಿಸುವ ಬದಲಾಗಿ ಜೀವವನ್ನು ತೆಗೆಯುವ ಪಾಷಾಣವಾಗಿ ಮಾರುಕಟ್ಟೆಯಲ್ಲಿ ಮಾರಾಟವಾಗುತ್ತಿವೆ. ಈ ಅಕ್ರಮಗಳನ್ನು ತಡೆಯಬೇಕಾದ ಸರಕಾರಗಳ ಹೆದರಿಕೆಯೂ ಲಾಭಕೋರ ಔಷಧಿ ಮಾರಾಟಗಾರರಿಗೆ ಇಲ್ಲದಂತಾಗಿದೆ. ಅದರಲ್ಲೂ ಖಾಸಗಿ ಔಷಧಿ ಮಳಿಗೆಗಳಲ್ಲಿ ಇಂಥ ಕಾನೂನು ಬಾಹಿರವಾದ ಔಷಧಿಗಳ ಮಾರಾಟ ವ್ಯಾಪಕವಾಗಿ ನಡೆದಿವೆ. ಇತ್ತೀಚೆಗೆ ರಾಜ್ಯದ ಕೆಲವೆಡೆ ಔಷಧಿ ನಿಯಂತ್ರಣ ಇಲಾಖೆ ನಡೆಸಿರುವ ತಪಾಸಣೆಯಿಂದ ಇದು ಬೆಳಕಿಗೆ ಬಂದಿದೆ. ಇಂಥ ಒಂದು ಸಾವಿರಕ್ಕೂ ಅಧಿಕ ಖಾಸಗಿ ಔಷಧಿ ಮಳಿಗೆಗಳ ಪರವಾನಿಗೆಯನ್ನು ಅಮಾನತಿನಲ್ಲಿ ಇಡಲಾಗಿದೆ.

ರಾಜ್ಯದಲ್ಲಿ ಸುಮಾರು 37 ಸಾವಿರಕ್ಕೂ ಅಧಿಕ ಔಷಧಿ ಮಳಿಗೆಗಳಿವೆ. 23 ಜನ ಸಂಜೀವಿನಿ ಕೇಂದ್ರಗಳಿವೆ. 278 ಜನೌಷಧಿ ಕೇಂದ್ರಗಳಿವೆ. ಇವುಗಳಲ್ಲಿ ಬಹುತೇಕ ಖಾಸಗಿ ಮಳಿಗೆಗಳಲ್ಲಿ ನಕಲಿ ಔಷಧಿಗಳನ್ನು ಅಕ್ರಮವಾಗಿ ಮಾರಾಟ ಮಾಡಲಾಗುತ್ತದೆ. ಸರಕಾರಿ ಆಸ್ಪತ್ರೆಗಳಲ್ಲೂ ಇಂಥ ಕಳಪೆ ಔಷಧಿಗಳನ್ನು ರೋಗಿಗಳಿಗೆ ಕೊಡಲಾಗುತ್ತಿರುವುದೂ ಬಯಲಾಗಿದೆ. ಬಳ್ಳಾರಿಯ ವಿಮ್ಸ್‌ನಲ್ಲಿ ಸಂಭವಿಸಿರುವ ಬಾಣಂತಿಯರ ಸಾವುಗಳಿಗೆ ಇಂಥ ನಕಲಿ ಔಷಧಿಗಳ ಸೇವನೆ ಕಾರಣವೆಂದು ರಾಜ್ಯ ಸರಕಾರ ನೇಮಿಸಿದ ತನಿಖಾ ಸಮಿತಿ ನೀಡಿರುವ ವರದಿಯಿಂದ ಗೊತ್ತಾಗಿದೆ. ಇದು ಕರ್ನಾಟಕದಲ್ಲಿ ಮಾತ್ರವಲ್ಲ ದೇಶದ ವಿವಿಧ ಕಡೆ ನಡೆಯುತ್ತಲೇ ಇವೆ. ತನಿಖಾ ವರದಿಯ ಪ್ರಕಾರ ಈ ಲೋಪಕ್ಕೆ ಔಷಧಿ ನಿಯಂತ್ರಣ ಮಂಡಳಿಯ ನಿರ್ಲಕ್ಷ್ಯವೇ ಕಾರಣವೆಂದು ತಿಳಿದು ಬಂದಿದೆ.

ಔಷಧಿ ನಿಯಂತ್ರಣ ಇಲಾಖೆ 2023-24ನೇ ವರ್ಷದಲ್ಲಿ 21,694 ಔಷಧಿ ಮಳಿಗೆಗಳಲ್ಲಿ ಪರಿಶೀಲನೆ ನಡೆಸಿದೆ. ಈ ಕಾರ್ಯಾಚರಣೆಯಲ್ಲಿ ಕಂಡು ಬಂದ ಸಂಗತಿ ಅಂದರೆ ರಾಜ್ಯದಲ್ಲಿ ಸಾವಿರಾರು ಖಾಸಗಿ ಔಷಧಿ ಮಳಿಗೆಗಳು ನಿಯಮಬಾಹಿರವಾಗಿ ಕಾರ್ಯವನ್ನು ನಿರ್ವಹಿಸುತ್ತಿವೆ. ಈ ಪರಿಶೀಲನೆ ನಂತರ 2,245 ಖಾಸಗಿ ಔಷಧಿ ಮಳಿಗೆಗಳ ಪರವಾನಿಗೆಯನ್ನು ಅಮಾನತುಗೊಳಿಸಲಾಗಿದೆ ಹಾಗೂ 292 ಔಷಧಿ ಮಳಿಗೆಗಳ ಪರವಾನಿಗೆಯನ್ನು ರದ್ದುಗೊಳಿಸಲಾಗಿದೆ.

**ಇಂಥ ಖಾಸಗಿ ಔಷಧಿ ಮಳಿಗೆಗಳಲ್ಲಿ ವೈದ್ಯರ ಸಲಹಾ ಚೀಟಿಗಳಿಲ್ಲದೆ ಔಷಧಿ ಮಾರಾಟ ವ್ಯಾಪಕವಾಗಿ ನಡೆದಿದೆ. ಬಯಲಿಗೆ ಬಂದ ಇನ್ನೊಂದು ಸಂಗತಿಯೆಂದರೆ ಅವಧಿ ಮೀರಿದ ಔಷಧಿಗಳ ಮಾರಾಟ. ಅನೇಕ ಕಡೆ ಸರಕಾರ ಗೊತ್ತುಪಡಿಸಿದ ದರಕ್ಕಿಂತ ಹೆಚ್ಚಿನ ಹಣ ಪಡೆದು ಔಷಧಿಗಳನ್ನು ಮಾರಾಟ ಮಾಡುತ್ತಿರುವ ಆತಂಕಕಾರಿ ಸಂಗತಿ ಬೆಳಕಿಗೆ ಬಂದಿದೆ. ಖಾಸಗಿ ಔಷಧಿ ಮಳಿಗೆಗಳಲ್ಲಿ ಅಗತ್ಯವಾದ ನಿರ್ದಿಷ್ಟ ವಿದ್ಯಾರ್ಹತೆ ಇಲ್ಲದವರು ಕೆಲಸ ಮಾಡುತ್ತಾರೆ. ಇಂಥ ಹಲವಾರು ಅಕ್ರಮಗಳು ನಡೆದಿರುವುದು ತಪಾಸಣೆ ಮಾಡಿದಾಗ ತಿಳಿದು ಬಂದಿದೆ.**

ಔಷಧಿ ನಿಯಂತ್ರಣಾಧಿಕಾರಿಗಳನ್ನೊಳಗೊಂಡ ಪರಿಶೀಲನೆ ಮಾಡುವ ತಂಡವು ನಡೆಸಿದ ಕಾರ್ಯಾಚರಣೆ ವೇಳೆ ಕಂಡು ಬಂದ ಇನ್ನೊಂದು ಕಳವಳಕಾರಿ ಸಂಗತಿಯೇನೆಂದರೆ ಕೆಲವು ಔಷಧಿ ಮಳಿಗೆಗಳಲ್ಲಿ ಕಾನೂನಿಗೆ ವಿರುದ್ಧವಾದ ಮಾದಕ ಔಷಧಿವನ್ನು ಲಂಗುಲಗಾಮಿಲ್ಲದೆ ಮಾರಾಟ ಮಾಡಲಾಗುತ್ತಿದೆ. ಇಂಥ ಅಕ್ರಮ ವ್ಯವಹಾರ ರಾಜಧಾನಿ ಬೆಂಗಳೂರಿನಲ್ಲಿ ಉಳಿದ ಜಿಲ್ಲೆಗಳಿಗಿಂತ ಜಾಸ್ತಿ ಪ್ರಮಾಣದಲ್ಲಿ ನಡೆಯುತ್ತಿದೆ. ಜಾಗತೀಕರಣ ಹಾಗೂ ನವ ಉದಾರೀಕರಣದ ಆರ್ಥಿಕ ನೀತಿಯ ಪರಿಣಾಮವಾಗಿ ಯಾವುದೇ ವಸ್ತುವಿನ ಉತ್ಪಾದನೆ ಮತ್ತು ಮಾರಾಟ ಜನಸಾಮಾನ್ಯರ ಅಗತ್ಯಗಳಿಗಾಗಿ ನಡೆಯುತ್ತಿಲ್ಲ. ಜನರ ಆರೋಗ್ಯಕ್ಕೆ ಸಂಬಂಧಿಸಿದ ಸೂಕ್ಷ್ಮ ವಿಚಾರದಲ್ಲೂ ಹಣ ಗಳಿಸುವುದೊಂದೇ ಔಷಧಿ ಕಂಪೆನಿಗಳ ಹಾಗೂ ಖಾಸಗಿ ದವಾಖಾನೆಗಳ ಉದ್ದೇಶವಾಗಿದೆ. ಹರ್ಯಾಣ ಮತ್ತು ಹಿಮಾಚಲ ಪ್ರದೇಶಗಳಂಥ ರಾಜ್ಯಗಳಲ್ಲಿ ಮಾರಾಟಕ್ಕೆ ಬೇಕಾದ ಔಷಧಿಗಳನ್ನು ಕೇಳಿದ ತಕ್ಷಣ ತಯಾರಿಸಿಕೊಡುವ ಕಾರ್ಖಾನೆಗಳಿವೆ ಎಂಬುದು ಅತ್ಯಂತ ಆತಂಕದ ಸಂಗತಿ. ಮಾರುಕಟ್ಟೆಗಾಗಿ ಹಾಗೂ ಲಾಭಕ್ಕಾಗಿ ತಯಾರಿಸುವ ಇಂಥ ಕಾರ್ಖಾನೆಗಳಲ್ಲಿ ಯಾವುದೇ ಸುರಕ್ಷತಾ ಮಾನದಂಡಗಳನ್ನು ಅನುಸರಿಸುವುದಿಲ್ಲ. ಯಾವುದೇ ಗುಣಮಟ್ಟವನ್ನು ಕಾಯ್ದುಕೊಳ್ಳುವುದಿಲ್ಲ. ಈಗಂತೂ ನಕಲಿ ಔಷಧಿಗಳನ್ನು ತಯಾರಿಸುವುದು ದೊಡ್ಡ ದಂಧೆಯಾಗಿದೆ. ಬಹುತೇಕ ಕಡೆ ಇಂಥ ನಕಲಿ ಔಷಧಿ ತಯಾರಿಸುವ ಕಂಪೆನಿಗಳ ಜೊತೆ ಸರಕಾರದ ದೊಡ್ಡ ಅಧಿಕಾರಿಗಳು ಶಾಮೀಲಾಗಿದ್ದಾರೆ ಎಂಬುದು ಬರೀ ಆರೋಪವಲ್ಲ. ಇದು ಒಂದು ಊರಿನ, ಜಿಲ್ಲೆಯ, ರಾಜ್ಯದ ಸಮಸ್ಯೆ ಮಾತ್ರವಲ್ಲ. ಇದು ಎಲ್ಲ ರಾಜ್ಯಗಳಲ್ಲಿ ವ್ಯಾಪಕವಾಗಿ ನಡೆಯುತ್ತಿದೆ. ಆಹಾರ ಧಾನ್ಯಗಳಲ್ಲಿ, ತಿಂಡಿ ಪದಾರ್ಥಗಳಲ್ಲಿ ಅವ್ಯಾಹತವಾಗಿ ನಡೆಯುತ್ತಿರುವ ಕಲಬೆರಕೆ ಹಾಗೂ ನಕಲಿ ವಸ್ತುಗಳ ಮಾರಾಟ ಈಗ ಜನರ ಆರೋಗ್ಯಕ್ಕೆ ಸಂಬಂಧಿಸಿದ ಔಷಧಿಗಳ ಉತ್ಪಾದನಾ ವಲಯಕ್ಕೂ ವಿಸ್ತರಣೆಯಾಗಿದೆ. ದೇಶ ವ್ಯಾಪಿಯಾಗಿ ಹಬ್ಬಿರುವ ಈ ನಕಲಿ ಔಷಧಿ ಜಾಲವನ್ನು ಪತ್ತೆ ಹಚ್ಚಿದ ಕೇಂದ್ರೀಯ ಔಷಧಿ ಮಾನಕ ನಿಯಂತ್ರಣ ಸಂಸ್ಥೆ 111 ಔಷಧಿಗಳ ಸ್ಯಾಂಪಲ್‌ಗಳನ್ನು ಪರೀಕ್ಷಿಸಿ ಕಳಪೆಯಾದ ಅವುಗಳನ್ನು ರದ್ದು ಮಾಡಿದೆ. ವ್ಯಾಪಕವಾಗಿರುವ ಇಂಥ ಕಳಪೆ ನಕಲಿ ಔಷಧಿಗಳಿಂದಾಗಿ ಜನಸಾಮಾನ್ಯರ ಆರೋಗ್ಯ ಹದಗೆಡುವುದಲ್ಲದೆ ಔಷಧಿಗಳನ್ನು ತಯಾರಿಸುವ ಉದ್ಯಮಗಳ ಬಗ್ಗೆ ಜನರ ನಂಬಿಕೆಯೂ ಹೊರಟು ಹೋಗುತ್ತದೆ. ಜನಸಾಮಾನ್ಯರ ಆರೋಗ್ಯದ ಜೊತೆಗೆ ಆಟವಾಡುತ್ತಿರುವ ಔಷಧಿ ತಯಾರಿಕೆ ಕಾರ್ಖಾನೆಗಳು ಹಾಗೂ ಮಾರಾಟಗಾರರ ಮೇಲೆ ಹಾಗೂ ಇದರಲ್ಲಿ ಶಾಮೀಲಾಗಿರುವ ಪ್ರಭಾವಿ ವ್ಯಕ್ತಿಗಳು ಮತ್ತು ಕಾರ್ಖಾನೆಗಳ ಮೇಲೆ ಸರಕಾರ ಯಾವುದೇ ಮುಲಾಜಿಲ್ಲದೆ ಉಗ್ರ ಕ್ರಮಗಳನ್ನು ಕೈಗೊಳ್ಳಬೇಕು. ಬರೀ ಸರಕಾರ ಮಾತ್ರವಲ್ಲ ಸಾರ್ವಜನಿಕರು ಅಪಾಯಕಾರಿ ಔಷಧಿಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು. ಆದರೆ ಬಹುತೇಕ ರಾಜಕಾರಣಿಗಳು ಪರಸ್ಪರ ದೂರುವುದು ಹಾಗೂ ಭಾವನಾತ್ಮಕ ವಿಷಯಗಳ ಬಗ್ಗೆ, ಜನರಲ್ಲಿ ದ್ವೇಷದ ವಿಷಬೀಜವನ್ನು ಬಿತ್ತುವುದರ ಬಗ್ಗೆ ಆಸಕ್ತಿ ಹೊಂದಿದ್ದಾರೆ. ಜನರೇ ಎಚ್ಚೆತ್ತು ಹೋರಾಟಕ್ಕೆ ಮುಂದಾಗಬೇಕಾಗಿದೆ. ಇಂಥ ಪರಿಸ್ಥಿತಿಯಲ್ಲಿ ಸರಕಾರ, ಔಷಧಿ ನಿಯಂತ್ರಣ ಸಂಸ್ಥೆಗಳು, ಔಷಧಿ ಮಾರಾಟಗಾರರು ಮತ್ತು ಸಾರ್ವಜನಿಕರು ಒಗ್ಗಟ್ಟಿನಿಂದ ಧ್ವನಿಯೆತ್ತಬೇಕಾಗಿದೆ. ಎಲ್ಲಕ್ಕಿಂತ ಮುಖ್ಯವಾಗಿ ಔಷಧಿ ತಯಾರಿಸುವ ಕಂಪೆನಿಗಳು ತಾವು ಉತ್ಪಾದಿಸುವ ಉತ್ಪನ್ನಗಳ ಗುಣಮಟ್ಟದ ಬಗ್ಗೆ ಉತ್ತರದಾಯಿಯಾಗಿರಬೇಕು. ನಕಲಿ ಔಷಧಿಗಳನ್ನು ಪತ್ತೆ ಹಚ್ಚಲು ಮತ್ತು ಅಂಥ ಅಪಾಯಕಾರಿ ಔಷಧಿಗಳನ್ನು ಮಾರುಕಟ್ಟೆಯಿಂದ ವಾಪಸ್ ಪಡೆಯಲು ಔಷಧಿ ನಿಯಂತ್ರಕ ಸಂಸ್ಥೆಗಳ ಜೊತೆ ಸಹಕಾರ ನೀಡಬೇಕು.

# ಹೊಸ ವರ್ಷ - 2025, ಸಂಕ್ರಾಂತಿ...!



ವಿ.ಎಂ.ಎಸ್.ಗೋಪಿ
• ಉದಯವಾಹಿನಿ, ವಿಶೇಷ

ಹೊಸ ವರ್ಷ ಆರಂಭದಲ್ಲಿ ಬರುವ ಮೊದಲ ಹಬ್ಬ ಸಂಕ್ರಾಂತಿ.

ಮಕರ ಸಂಕ್ರಾಂತಿಯನ್ನು ಉತ್ಸವ ಸಂಭ್ರಮದಿಂದ ಆಚರಿಸುತ್ತಾರೆ. ಆದರೆ ದಕ್ಷಿಣ ಭಾರತದಲ್ಲಿ ಇದರ ಸಂಭ್ರಮ ಹೆಚ್ಚು ತಮ್ಮದೇ ಆದ ರೀತಿಯಲ್ಲಿ. ಪದ್ಧತಿಯಲ್ಲಿ ನಡೆಯುವ ಹಬ್ಬದ ಸಿದ್ಧತೆಗಳು ಆರಂಭವಾಗುತ್ತದೆ.

ಅಕ್ಕ ಪಕ್ಕದ ಮನೆಯ ಹೆಂಗಸರು ಒಬ್ಬರನ್ನೊಬ್ಬರು ಕೇಳುತ್ತಾ... ಹಬ್ಬಕ್ಕೆ ಸಿದ್ಧವಾಗುತ್ತಾರೆ ಎಳ್ಳು ಬೆಲ್ಲಕ್ಕೆ ಬೇಕೆಂದು ಕಡಲೆಕಾಯಿ ಸುಲಿಯೋದು, ಕೊಬ್ಬರಿ ಕಾಯಿ ಸಣ್ಣದಾಗಿ ಹಚ್ಚೋದು ಸಕ್ಕರೆ ಅಚ್ಚುಗಳನ್ನು ಮಾಡುವುದು ಬಿಳಿ ಎಳ್ಳನ್ನು ಹುರಿದು ಅದಕ್ಕೆ ಕಡಲೇ ಬೀಜ ಕೊಬ್ಬರಿ ಸಕ್ಕರೆ ಅಚ್ಚುಗಳನ್ನು ಸೇರಿಸಿ ಪ್ಯಾಕೇಟ್ ಮಾಡುವುದು.

ಹಬ್ಬದ ದಿನ ಬೆಳಿಗ್ಗೆ ಎದ್ದು, ಮನೆಯಂಗಳದಲ್ಲಿ ಪೊಂಗಲ್ ಉಕ್ಕುತ್ತಿರುವ ರಂಗೋಲಿ ಮತ್ತು ಕಬ್ಬುಗಳ ಚಿತ್ರಗಳ ರಂಗೋಲಿ ಬಿಡಿಸಿ. ಬಣ್ಣ ಮತ್ತು ಹೂಗಳಿಂದ ರಂಗೋಲಿಗೆ ಅಲಂಕಾರ ಮಾಡುತ್ತಾರೆ. ಮನೆಯ ಹೊಸ್ತಿಲು ಮತ್ತು ದೇವರ ಕೋಣೆಯನ್ನು ಮಾವಿನ ತಳಿರು ತೋರಣಗಳು ಮತ್ತು ಕಬ್ಬು ಹೂವುಗಳಿಂದ ಅಲಂಕರಿಸುತ್ತಾರೆ. ಮನೆಯಲ್ಲಿ ಪೂಜೆ ಪುನಸ್ಕಾರ ಮುಗಿಸಿ ಊಟ ಮಾಡುವ ಹೊತ್ತಿಗೆ ಮಧ್ಯಾಹ್ನ ಆಗುತ್ತದೆ. ಸಂಜೆ ವೇಳೆಗೆ ದೇವಸ್ಥಾನಕ್ಕೆ ಹೋಗಿ ಬರುತ್ತಾರೆ. ಅಕ್ಕ ಪಕ್ಕದ ಮನೆಗಳಿಗೆ ಕಬ್ಬು, ಗೆಣಸು, ಅವರೇಕಾಯಿ, ಎಳ್ಳು ಬೆಲ್ಲ ಕೊಡುವುದರ ಮೂಲಕ ಸಂಕ್ರಾಂತಿ ಹಬ್ಬದ ಶುಭಾಶಯಗಳು ಹೇಳುತ್ತಾರೆ. ತಮಿಳುನಾಡಿನಲ್ಲಿ ಪೊಂಗಲ್.

ಸುಗ್ಗಿ ಹಬ್ಬವೆಂದೂ ಸಂಕ್ರಾಂತಿಯನ್ನು ಕರೆ ಯುತ್ತಾರೆ. ಮಡಿಕೆಯಲ್ಲಿ ಅಕ್ಕಿ ಬೇಳೆಯನ್ನು ಬೇಯಿಸಿ ಮಾಡುವ ಪೊಂಗಲ್ ಹಬ್ಬದ ವಿಶೇಷ. ಹೊಸ ಬಟ್ಟೆ ತೊಟ್ಟು ಬಂಧು ಮಿತ್ರರು ಮತ್ತು ಸ್ನೇಹಿತರಿಗೆ ಸಂಕ್ರಾಂತಿಯ ಶುಭಾಶಯ ಹೇಳಿ ಕಬ್ಬು ಎಳ್ಳು ಬೆಲ್ಲಗಳ ವಿನಿಮಯ ಮಾಡುವುದು ಹಬ್ಬದ ಆಚಾರ. ಕರ್ನಾಟಕ, ಕೇರಳ, ಆಂಧ್ರಪ್ರದೇಶ, ತಮಿಳುನಾಡಿನಲ್ಲಿ ಹಬ್ಬದ ಸಡಗರ ಭೋಗಿ, ಪೊಂಗಲ್, ಮಾಟ್ಟು ಪೊಂಗಲ್, ಕಾಣು ಪೊಂಗಲ್ ಮತ್ತು ಜಲ್ಲಿ ಕಟ್ಟು ಎನ್ನುವ ಗೂಳಿಯನ್ನು ಪಳಗಿಸುವ ಆಟವೂ ತಮಿಳುನಾಡಿನಲ್ಲಿ ನಡೆಯುತ್ತದೆ. ಹೊಸ ಮಡಿಕೆ ಹೊಸ ಪಾತ್ರೆಗಳಿಗೆ ಅರಿಶಿನ ಕುಂಕುಮ ಇಟ್ಟು, ಅರಿಶಿನ ದಾರದಲ್ಲಿ ಹಸಿ ಅರಿಶಿನ ಗಡ್ಡೆ ಮಡಿಕೆಗೆ ಕಟ್ಟಿ ಒಲೆಯ ಮೇಲಿಟ್ಟು ಮಡಿ ಕೆಯಲ್ಲಿ ಅಕ್ಕಿ ಬೇಳೆ ಮತ್ತು ಹಾಲು




ತುಪ್ಪ ಬೆಲ್ಲಗಳನ್ನು ಮಡಿಕೆಯಲ್ಲಿ ಕುದಿಸಿ ಪೊಂಗಲ್ ಉಕ್ಕಿಸಲಾಗುತ್ತದೆ.


ಇದು ಶುಭ ಸಮೃದ್ಧಿಯ ಸಂಕೇತವಾಗಿರುತ್ತದೆ. ಗೋಪೂಜೆ ಹೆಚ್ಚು ಜನಪ್ರಿಯ ವರ್ಷ ವಿಡಿ ತಮ್ಮ ವ್ಯವಸಾಯ ಕ್ಷೇತ್ರದಲ್ಲಿ ದುಡಿದು ಧಾನ್ಯ ಸಮೃದ್ಧಿಗೆ ಕಾರಣವಾಗುವ ಮತ್ತು ಹಾಲು ನೀಡುವ ಗೋವುಗಳನ್ನು ಸಂಕ್ರಾಂತಿಯೆಂದು ಪೂಜಿಸುವ ಮೂಲಕ ಕೃತಜ್ಞತೆ ಅರ್ಪಿಸುವುದು ಧಾನ್ಯಗಳ ಜೊತೆಗಿರುವ ಕಸ ಕಡ್ಡಿಗಳನ್ನು ಬೇಪಡಿಸಿ ಹುಲ್ಲು ಕಡ್ಡಿಗಳಿಗೆ ಬೆಂಕಿ ಹಚ್ಚುತ್ತಾರೆ. ಜಾನುವಾರುಗಳನ್ನು ಕಿಚ್ಚು ಹಾಯಿಸುವಿಕೆ ಸಂಭ್ರಮ ಆಟ ಆಚರಣೆ ನಡೆಯುತ್ತದೆ. ಪೊಂಗಲ್ ಹಬ್ಬದ ದೀನವೆ ಕೇರಳ ರಾಜ್ಯದಲ್ಲಿ ಮಕರ ಸಂಕ್ರಾಂತಿಯೆಂದು ಶಬರಿಮಲೆಯಲ್ಲಿ ಕಾಣ್ಣುವ ಮಕರ ಜ್ಯೋತಿ ನೋಡಲು ಅಯ್ಯಪ್ಪ ಭಕ್ತಾದಿಗಳು ಶಬರಿ ಮಲೆಗೆ ಹೋಗಿ ಅಯ್ಯಪ್ಪ ಸ್ವಾಮಿ ನೋಡಲು ಅಯ್ಯಪ್ಪ ಭಕ್ತಾದಿಗಳು ಶಬರಿಮಲೆಗೆ ಹೋಗಿ ಅಯ್ಯಪ್ಪ ಸ್ವಾಮಿ ಮತ್ತು ಮಕರ ಜ್ಯೋತಿಯ ದರ್ಶನವನ್ನು ಮಾಡುತ್ತಾರೆ.

## ಸುಗ್ಗಿ ಹಬ್ಬ ಸಂಕ್ರಾಂತಿ



ಗೊರೂರು ಅನಂತರಾಜು
• ಉದಯವಾಹಿನಿ, ವಿಶೇಷ

ಸುಗ್ಗಿಯ ಕುಣಿತ ಕುಣಿಯೋಣ ಬನ್ನಿ
ಸುಗ್ಗಿಯ ಹಾಡು ಹಾಡೋಣ
ಸುಗ್ಗಿಯ ಹಾಡು ಹಾಡುತ್ತಾ ನಾವು
ಸುಗ್ಗಿ ಕುಣಿತ ಕುಣಿಯುತ್ತಾ ನಾವು
ನಮ್ಮೆಲ್ಲಾ ನೋವು ಮರೆಯೋಣ
ಊರಿನ ಜನರೆಲ್ಲಾ ಒಟ್ಟಾಗಿ ಸೇರಿ
ತೆನೆ ಭತ್ತ ಎಲ್ಲರೂ ಕುಯ್ಯೋಣ
ಭತ್ತವ ನಾವು ಬಡಿಯೋಣ ಬನ್ನಿ
ಜೊಳ್ಳನ್ನು ಗಾಳಿಲಿ ತೂರೋಣ
ಹಸನಾದ ಭತದ ರಾಶಿಯ ಮಾಡಿ
ಹಸೆಯನ್ನು ಬರೆದು ಬೆಳವಣ್ಣನ ಮಾಡಿ
ಹೂವಿನ ಹಾರದ ಶೃಂಗಾರ ಮಾಡಿ
ರಾಶಿಯ ಪೂಜೆ ಮಾಡೋಣ ಬನ್ನಿ
ಕಣಜಕ್ಕೆ ಭತ್ತವ ತುಂಬೋಣ ಬನ್ನಿ
ರೈತರು ನಾವು ಅನ್ನದಾತರು ತಿಳಿ
ಗೋವುಗಳ ಮೈಯನ್ನು ನಾವುಗಳು ತೊಳೆದು
ದನಗಳ ಕಿಚ್ಚು ಹಾಯಿಸೋಣ
ಎಳ್ಳನ್ನು ದಾನ ಮಾಡಿದರೆ ಗೆಳತಿ
ಪಾಪವು ಪರಿಹಾರ ಆಗುವುದು ತಿಳಿ
ಹೊಸ ವರುಷವು ನಮ್ಮ ಬಾಳಲ್ಲಿ
ಶಾಂತಿ ನೆಮ್ಮದಿ ಹರುಷವ ತರಲಿ.



## ದಾಲ್ಚಿನ್ನಿ ಪುರುಷರಿಗೆ ಎಷ್ಟು ಪ್ರಯೋಜನಕಾರಿ



• ಉದಯವಾಹಿನಿ, ಬೆಂಗಳೂರು

ದಾಲ್ಚಿನ್ನಿ ಸೇವನೆಯು ದೇಹಕ್ಕೆ ತುಂಬಾ ಪ್ರಯೋಜನಕಾರಿ. ದಾಲ್ಚಿನ್ನಿ ಸೇವನೆಯು ವಿಶೇಷವಾಗಿ ಪುರುಷರಿಗೆ ಒಳ್ಳೆಯದು ಎಂದು ಪರಿಗಣಿಸಲಾಗಿದೆ. ಆಯುರ್ವೇದದಲ್ಲಿ ದಾಲ್ಚಿನ್ನಿಯನ್ನು ಔಷಧಿಗಿಂತ ಕಡಿಮೆಯಿಲ್ಲ ಎಂದು ಪರಿಗಣಿಸಲಾಗಿದೆ. ದಾನ್ನಿ ಸೇವಿಸುವುದರಿಂದ ದೇಹಕ್ಕೆ ತಾಜಾತನ ಬರುತ್ತದೆ.

ಪುರುಷರಿಗೆ ದಾಡ್ಮಿನ್ನಿ ಸೇವನೆಯು ಎಷ್ಟು ಪ್ರಯೋಜನಕಾರಿ ಮತ್ತು ಯಾವ ರೋಗಗಳಲ್ಲಿ ದಾಲ್ಚಿನ್ನಿ ಪರಿಣಾಮಕಾರಿ ಎಂದು ಸಾಬೀತುಪಡಿಸುತ್ತದೆ ಎಂಬುದನ್ನು ನಾವು ತಿಳಿದುಕೊಳ್ಳೋಣರೂ. ಹೃದಯವನ್ನು ಬಲಪಡಿಸುತ್ತದೆ- ದಾಡ್ಮಿನ್ನಿ ಸೇವನೆಯು ಹೃದಯಕ್ಕೆ ಒಳ್ಳೆಯದು ಎಂದು ಪರಿಗಣಿಸಲಾಗಿದೆ.

ದಾಲ್ಮೀನ್ನಿ ತಿನ್ನುವುದರಿಂದ ಹೃದಯ ಸಂಬಂಧಿ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡಬಹುದು. ಹಾರ್ಮೋನುಗಳ ಸಮತೋಲನವನ್ನು ಕಾಪಾಡಿ ಕೊಳ್ಳಿ- ಪುರುಷರಲ್ಲಿ ಹಾರ್ಮೋನುಗಳ ಸಮತೋಲನವನ್ನು ಕಾಪಾಡಿಕೊಳ್ಳಲು ದಾಲ್ಮನ್ನಿ ಪರಿಣಾಮಕಾರಿ ಮಸಾಲೆಯಾಗಿದೆ. ಇದರ ಸೇವನೆಯು ಟೆಸ್ಟೋಸ್ಟೆರಾನ್ ಮಟ್ಟವನ್ನು ನಿಯಂತ್ರಣದಲ್ಲಿಡುತ್ತದೆ. ದಾಡ್ಮಿನ್ನಿ ಹೆಚ್ಚಿನ ಪ್ರಮಾಣದ ಉತ್ಕರ್ಷಣ ನಿರೋಧಕಗಳನ್ನು ಹೊಂದಿದೆ, ಇದು ದೈಹಿಕ ಶಕ್ತಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ರಕ್ತ ಪರಿಚಲನೆ ಸುಧಾರಿಸಲು ದಾನ್ನಿ ಪ್ರಯೋಜನಕಾರಿಯಾಗಿದೆ. ಮಧುಮೇಹದ ಅಪಾಯವನ್ನು ಕಡಿಮೆ ಮಾಡುತ್ತದೆ - ದಾಲ್ಮೀನಿ ಸೇವನೆಯಿಂದ ಪುರುಷರಲ್ಲಿ ಮಧುಮೇಹದ ಅಪಾಯವನ್ನು ಕಡಿಮೆ. ಮಾಡಬಹುದು. ಇದು ಸಕ್ಕರೆಯ ಮಟ್ಟವನ್ನು ನಿಯಂತ್ರಣದಲ್ಲಿಡುತ್ತದೆ. ವಿಶೇಷವಾಗಿ ಮಧುಮೇಹದ ಅಪಾಯವಿರುವ ಜನರು ದಾಲ್ಚಿನ್ನಿಯನ್ನು ಸೇವಿಸಬೇಕು. ನಿಯಮಿತವಾಗಿ ದಾಲ್ಚಿನ್ನಿ ತಿನ್ನುವುದು ಮಧುಮೇಹಕ್ಕೆ ಪ್ರಯೋಜನಕಾರಿಯಾಗಿದೆ.

ತೂಕವನ್ನು ಕಳೆದುಕೊಳ್ಳಿ- ನೀವು ತೂಕವನ್ನು ಹೆಚ್ಚಿಸುವ ಬಗ್ಗೆ ಚಿಂತೆ ಮಾಡುತ್ತಿದ್ದರೆ ಖಂಡಿತವಾಗಿಯೂ ದಾಡ್ಮಿನ್ನಿ ಸೇವಿಸಿ. ದಾಡ್ಮಿನ್ನಿ ತಿನ್ನುವುದು ತ್ವರಿತ ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ. ಇದು ಚಯಾಪಚಯವನ್ನು ವೇಗಗೊಳಿಸುತ್ತದೆ ಮತ್ತು ಕ್ಯಾಲೊರಿಗಳನ್ನು ವೇಗವಾಗಿ ಸುಡುತ್ತದೆ. ದಾನ್ನಿ ಹೇಗೆ ಬಳಸುವುದು ನೀವು ದಾಡ್ಮಿನ್ನಿ ಚಹಾವನ್ನು ತಯಾರಿಸಬಹುದು ಮತ್ತು ಅದನ್ನು ಕುಡಿಯಬಹುದು. ದಾಲ್ಚಿನ್ನಿ ಪುಡಿ ಯನ್ನು ಜೇನುತುಪ್ಪದೊಂದಿಗೆ ಬೆರೆಸಿ ಸೇವಿಸಬಹುದು. ನೀವು ದಾಡ್ಮಿನ್ನಿ ಮತ್ತು ಶುಂಠಿ ಮಿಶ್ರಣವನ್ನು ತಿನ್ನಬಹುದು. ಇದನ್ನು ಚಹಾಕ್ಕೆ ಕೂಡ ಸೇರಿಸಬಹುದು. ನೀವು ದಾಲ್ಚಿನ್ನಿಯನ್ನು ನೀರಿನಲ್ಲಿ ಕುದಿಸಿ ಕುಡಿಯಬಹುದು.



## ದಿನಾ ಬರುವವರಲ್ಲ

• ಉದಯವಾಹಿನಿ, ವಿಶೇಷ

ಮೊಳಗುತಿದೆ
ಶಂಖ ನಾದ
ವ್ರತಸ್ಥರಾದ
ಅಘೋರಿಗಳು
ಪರಶಿವನ ಸೇವೆಗಾಗಿ
ಬರುವರು ಕುಂಭ ಮೇಳಕ್ಕೆ
ಎಲ್ಲಿದ್ದರು ಎಲ್ಲಿಂದ ಬಂದರು
ವಿಭಿನ್ನ ಬದುಕಿನ
ಅರೆ ಬೆತ್ತಲೆಯ
ಬಿಸಿಲು,ಮಳೆ,ಗಾಳಿಗೆ
ಅಂಜದೆ
ವಿಭೂತಿಯ ಹೊದಿಕೆ ಹೊತ್ತ ಸ್ಮಶಾಣವಾಸಿಗಳು
ವರುಷಗಳು ಕಾದು ಜಯಂತನುದುರಿಸಿದ
ಅಮೃತ ಬಿಂದುಗಳ
ಸ್ಪರ್ಶಿಸಲು
ತ್ರಿವೇಣಿ ಸಂಗಮದಲಿ ಮಿಂದು ಪುನೀತರಾಗಲು
ಬರುವರು ಜನಸ್ತೋಮ
ಗುಹೆ, ಗೋರಿ,
ಹಿಮಾಲಯ ವಾಸಿ ಅಘೋರಿ ಜಟಾಧಾರಿ
ಆಸ್ತಿ ಮಾಲಾದಾರಿ ನಾಡಿಗೆ ನಾವು
ದಿನಾ ಬರುವವರಲ್ಲ
ಪ್ರಯಾಗ್ ರಾಜ್‌ನಲ್ಲಿ
ನಡೆಯುತ್ತಿರುವ ಕುಂಭ ಮೇಳದ ಸಂದರ್ಭದ ನಿಮಿತ್ತ
15.01.2025 ರಚಿಸಿದ ಒಂದು ಝಲಕ್


**ಗುರಾನಿ**

## ಬೆಳ್ಳಗಾದ ಕೂದಲು ಕಪ್ಪಗಾಗಲು ತೆಂಗಿನ ಎಣ್ಣೆಯೊಂದಿಗೆ ಕರಿಜೀರಿಗೆ ಹಚ್ಚಿ

• ಉದಯವಾಹಿನಿ, ಬೆಂಗಳೂರು

ಇಂದಿನ ಆಧುನಿಕ ಕಾಲದಲ್ಲಿ ಅಭಿವೃದ್ಧಿಯ ಜತೆಗೆ ಜನರ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುತ್ತಿದೆ. ಇಂದಿನ ಬ್ಯುಸಿ ಲೈಫ್'ನಿಂದಾಗಿ ಚಿಕ್ಕ ವಯಸ್ಸಿನಲ್ಲೇ ಅನೇಕ ಆರೋಗ್ಯ ಸಮಸ್ಯೆಗಳನ್ನ ಎದುರಿಸುತ್ತಿದ್ದಾರೆ. ಅವುಗಳಲ್ಲಿ ಪ್ರಮುಖವಾದವುಗಳೆಂದರೆ ಕೂದಲು ಉದುರುವುದು, ಬೋಳು, ಚಿಕ್ಕ ವಯಸ್ಸಿನಲ್ಲಿ ಕೂದಲು ಬಿಳಿಯಾಗುವುದು, ಇವು ಸಾಮಾನ್ಯ ಸಮಸ್ಯೆಗಳಾಗಿವೆ.

ಆದರೆ, ಕೂದಲಿನ ಬೆಳವಣಿಗೆಗೆ ಮಾರುಕಟ್ಟೆಯಲ್ಲಿ ಹಲವು ಬಗೆಯ ಎಣ್ಣೆಗಳಿವೆ. ಅವುಗಳಲ್ಲಿ ಕೆಲವು ಕೃತಕ ಪದಾರ್ಥಗಳನ್ನ ಒಳಗೊಂಡಿರುತ್ತವೆ. ಇದರಿಂದ ಕೂದಲು ನಷ್ಟವಾಗುವುದರ ಜೊತೆಗೆ ಹಣವೂ ಉದುರುತ್ತದೆ. ಆದ್ದರಿಂದ, ಕೆಲವು ಅಡುಗೆ ಸಲಹೆಗಳು ಪರಿಹಾರವಾಗಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತವೆ. ಅವುಗಳಲ್ಲಿ ಒಂದು ತೆಂಗಿನ ಎಣ್ಣೆ. ತೆಂಗಿನ ಎಣ್ಣೆ ನಮ್ಮ ಕೂದಲು ದಪ್ಪವಾಗಿ ಬೆಳೆಯಲು



ಉತ್ತೇಜಿಸುತ್ತದೆ. ಬಿಳಿ ಕೂದಲು ಕಪ್ಪಾಗಲು ತೆಂಗಿನ ಅತ್ಯುತ್ತಮ ಪರಿಹಾರ ಎನ್ನುತ್ತಾರೆ ತಜ್ಞರು. ಏಕೆಂದರೆ ತೆಂಗಿನ ಎಣ್ಣೆಯಲ್ಲಿ ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿವೆ.

ತಲೆಹೊಟ್ಟು ಹೋಗಲಾಡಿಸಲು ಮತ್ತು ಬಿಳಿ ಕೂದಲನ್ನ ಕಪ್ಪಾಗಿಸಲು ಇದು ಅದ್ಭುತ ಔಷಧವಾಗಿ ಕೆಲಸ ಮಾಡುತ್ತದೆ. ಕರಿಜೀರಿಗೆಯನ್ನ ತೆಂಗಿನೆಣ್ಣೆಯೊಂದಿಗೆ ಬೆರೆಸಿ ಹಚ್ಚುವುದರಿಂದ ಕೂದಲು ಕಪ್ಪಾಗುತ್ತದೆ. ಕಪ್ಪು ಜೀರಿಗೆಯನ್ನ ಕಡಿಮೆ ಉರಿಯಲ್ಲಿ ಹುರಿದು ಮತ್ತು ಒಂದು ಕಪ್ ತೆಂಗಿನ ಎಣ್ಣೆಯನ್ನ ಸೇರಿಸಿ ಮತ್ತು ಕಡಿಮೆ ಉರಿಯಲ್ಲಿ ಬಿಸಿ ಮಾಡಿ.

ರಾತ್ರಿ ಮಲಗುವ ಮುನ್ನ ನಿಮ್ಮ ಕೂದಲಿಗೆ ತೆಂಗಿನೆಣ್ಣೆ ಹಚ್ಚಿ ಮಸಾಜ್ ಮಾಡಿ. ಈ ಎಣ್ಣೆಯನ್ನ ನಿಮ್ಮ ಕೂದಲಿಗೆ ನಿಯಮಿತವಾಗಿ ಹಚ್ಚಿದರೆ, ನಿಮ್ಮ ಕೂದಲು ನೈಸರ್ಗಿಕವಾಗಿ ಕಪ್ಪಾಗುತ್ತದೆ. ಕಪ್ಪು ಜೀರಿಗೆ ಎಣ್ಣೆಯ ಮಿಶ್ರಣವನ್ನ ನಿಮ್ಮ ನೆತ್ತಿಯ ಮೇಲೆ ಅನ್ವಯಿಸಿ ಮತ್ತು ಅದನ್ನು ಚೆನ್ನಾಗಿ ನೆನಸಿ ಮತ್ತು ಮರುದಿನ ಬೆಳಿಗ್ಗೆ ಸ್ನಾನ ಮಾಡಿ.




• ಹಿಂದಿನ ಸಂಚಿಕೆಯಿಂದ 74 ನೆಯ ಅಧ್ಯಾಯ

ಆ ಬಳಿಕ ಶ್ರೀರಾಮನು ಮೊದಲಾದ ನಾಲ್ಕೂ ಮಂದಿ ರಾಜಕುಮಾರರು ತಮ್ಮ ತಮ್ಮ ಪತ್ನಿಯರನ್ನು ಕೈ ಹಿಡಿದುಕೊಂಡು ಹೋಮಾಗ್ನಿಯನ್ನು ಪ್ರದಕ್ಷಿಣೆ ಮಾಡಿದರು. ಬಳಿಕ ಸಮಸ್ತ ಋಷಿಗಳಿಗೂ ಪ್ರದಕ್ಷಿಣ ನಮಸ್ಕಾರಗಳನ್ನು ಮಾಡಿದರು. ಹೀಗೆ ವಿಧ್ಯುಕ್ತ ಪ್ರಕಾರದಲ್ಲಿ ವಿವಾಹ ಹೋಮವನ್ನು ಸಮಾಪ್ತಿ ಮಾಡಿ ತಮ್ಮ ತಮ್ಮ ಪತ್ನಿಸಮೇತರಾಗಿ ತಮ್ಮ ತಮ್ಮ ಅರಮನೆಗಳಿಗೆ ಹೋದರು. ಆ ರಾಜಕುಮಾರರನ್ನು ಕಂಡು ದಶರಥರಾಯನು ಅತಿಹರ್ಷಗೊಂಡನು. ಆಮೇಲೆ ಸಮಸ್ತ ಋಷಿಗಳನ್ನೂ ಬಂಧುಗಳನ್ನೂ ಮೆರವಣಿಗೆಯಲ್ಲಿ ಕರೆದುಕೊಂಡು ಅರಮನೆಯನ್ನು ಪ್ರವೇಶಿಸಿದನು.

### ಹರಶುರಾಮನು ಶ್ರೀ ರಾಮನನ್ನು ಅಡ್ಡಗಟ್ಟಿದ್ದು

ಮಾರನೆಯ ದಿವಸ ಪ್ರಾತಃಕಾಲದಲ್ಲಿ ವಿಶ್ವಾಮಿತ್ರಮುನೀಶ್ವರನು ದಶರಥರಾಯನಿಗೂ ಜನಕರಾಯನಿಗೂ ಆಶೀರ್ವಾದಗಳನ್ನು ಮಾಡಿ ಬೀಳ್ಕೊಂಡು ರಾಮಲಕ್ಷ್ಮಣಭರತಶತ್ರುಘ್ನರಿಗೂ ಆಶೀಗ್ವಾದಗಳನ್ನು ಮಾಡಿ ಹಿಮವತ್ಪರ್ವತಕ್ಕೆ ಹೊರಟುಹೋದನು.

ಆಮೇಲೆ ಅಯೋಧ್ಯಾ ಪತಿಯಾದ ದಶರಥಮಹಾರಾಯನು ಮಿಥಿಲಾಧಿಪತಿಯಾದ ಜನಕರಾಯನಿಂದ ಅನುಮತಿಯನ್ನು ಪಡೆದು ತನ್ನ ಕುಮಾರರನ್ನೂ ಸೊಸೆಯರನ್ನೂ ಕೂಡಿಕೊಂಡು ಆಯೋಧ್ಯಾಪಟ್ಟಣಕ್ಕೆ ತೆರಳಿದನು. ಜನಕರಾಯನು ತನ್ನ ಕುಮಾರಿಯರಿಗೆ ಬಳುವಳಿಯಾಗಿ ಒಬ್ಬೊಬ್ಬರಿಗೆ ಲಕ್ಷಗಟ್ಟಲೆ ಅಪರಂಜಿ ನಾಣ್ಯಗಳು ಒಂದೊಂದು ಲಕ್ಷ ಹಸುಗಳು ಒಂದೊಂದು ಕೋಟಿ ರತ್ನ ಕಂಬಳಿಗಳು ಚೀನಾಂಬರಗಳು ವಸ್ತ್ರಗಳು ಆನೆ ಕುಮರೆ ರಥ ಕಾಲಾಳೆಂಬ ಚತುರಂಗಬಲಗಳು ಅನೇಕಾಭರಣಯುಕ್ತರಾದ ದಾಸೀಜನೆಗಳು ಮೊದಲಾದ ಅನೇಕ ವಸ್ತುಗಳನ್ನು ಕೊಟ್ಟು ಅಶೀರ್ವಾದಗಳನ್ನು ಮಾಡಿದನು. ಹಾಗೆಯೇ ತನ್ನ ಅಳಿಯಂದಿರಾದ ರಾಮಲಕ್ಷ್ಮಣಭರತಶತ್ರುಘ್ನರಿಗೂ ಆಶೀರ್ವಾದಗಳನ್ನು ಮಾಡಿ ಪ್ರಯಾಣಮಾಡಿಸಿ ದಶರಥರಾಯನನ್ನೂ ಕಳುಹಿಸಿ ಮಿಥಿಲಾಪಟ್ಟಣದಲ್ಲಿದ್ದನು.

ಬಳಿಕ ದಶರಥರಾಯನು ತನ್ನ ಮಕ್ಕಳನ್ನು ಕೂಡಿಕೊಂಡು ಪುರೋಹಿತನಾದ ವಸಿಷ್ಠಮುನಿ ಮೊದಲಾದ ಋಷಿಗಳನ್ನು ಮುಂದಿಟ್ಟುಕೊಂಡು ಸಮಸ್ತ ಬಲಸಹಿತನಾಗಿ ಆಯೋಧ್ಯಾಪಟ್ಟಣಕ್ಕೆ ಬರುತ್ತಿರಲು ಮಧ್ಯಮಾರ್ಗದಲ್ಲಿ ಪಕ್ಷಿಗಳು ಭಯಂಕರವಾಗಿ ಕೂಗತೊಡಗಿದವು. ಮೃಗಗಳು ಪ್ರದಕ್ಷಿಣವಾಗಿ ಬರುತ್ತಿದ್ದವು. ಅದನ್ನು ನೋಡಿ ದಶರಥರಾಯನು ವಸಿಷ್ಠಮುನಿಯನ್ನು ಕುರಿತು ★ ಎಲ್ಲೆ ವಸಿಷ್ಠಮುನೀಶ್ವರರೆ, ಪಕ್ಷಿಗಳು ಭಯಂಕರವಾಗಿ ಕೂಗುತ್ತಿವೆ. ಮೃಗಗಳು ಪ್ರದಕ್ಷಿಣವಾಗಿ ಬರುತ್ತಿವೆ. ಇದು ಏನು ಕಾರಣದಿಂದಲೋ ತಿಳಿಯಲಿಲ್ಲ. ನನ್ನ ಮನಸ್ಸಿನಲ್ಲಿ ಮಹಾಭಯ ವಾಗುತ್ತದೆ ಎಂದು ಹೇಳಿದನು.

ಮುಂದುವರಿಯುವುದು...

# ಎಳ್ಳು-ಬೆಲ್ಲ ತಿಂದು ನಾವು ನೀವು ಒಳ್ಳೆಯ ಮಾತನಾಡೋಣ



ಬಾಲರಾಜ ಎಂ. ವಿಶ್ವಕರ್ಮ, ಅರಳಗುಂಡಗಿ

**ಕೃಷಿ ಪ್ರಧಾನವಾದ ನಮ್ಮೀ ಭಾರತ ದೇಶದಲ್ಲಿನ ರೈತರು ಈ ಮಕರ ಸಂಕ್ರಾಂತಿ ಹಬ್ಬದಂದು ತಾವು ಬೆಳೆದ ಬೆಳೆಯ ಫಸಲನ್ನು ಒಂದೆಡೆ ಹಾಕಿ ಅದಕ್ಕೆ ಪೂಜೆಯನ್ನು ಮಾಡಿ ಇಳುವರಿ ಅಧಿಕವಾಗಿ ಬರುವಂತೆ ದೇವರಲ್ಲಿ ಪ್ರಾರ್ಥಿಸಿ ಸುಗ್ಗಿಯನ್ನು ಆಚರಿಸುತ್ತಾರೆ. ಇನ್ನು ಹಬ್ಬದ ದಿನದ ಅಂದಿನ ಸಂಜೆ ರೈತರೆಲ್ಲರೂ ಒಂದೆಡೆ ಸೇರಿ ಕೃಷಿ ಚಟುವಟಿಕೆಗೆ ಬಳಸುವ ತಮ್ಮ ತಮ್ಮ ಸಾಕು ಎತ್ತುಗಳನ್ನು ಸಿಂಗರಿಸಿ ಕರೆತಂದು ಬೆಂಕಿಯ ಮೇಲಿಂದ ಹಾರಿಸುತ್ತಾರೆ. ಇದಕ್ಕೆ ಕಿಚ್ಚು ಹಾಯಿಸುವುದು ಎಂದು ಕರೆಯಲಾಗುತ್ತದೆ.**

ನಮ್ಮ ಸನಾತನ ಹಿಂದೂ ಧರ್ಮದ ಪ್ರತಿಯೊಂದು ಹಬ್ಬ ಆಚರಣೆಗಳು ತನ್ನದೇ ಆದ ವಿಶೇಷತೆ ಹಾಗೂ ವೈಜ್ಞಾನಿಕ ಹಿನ್ನಲೆಗಳನ್ನೊಳಗೊಂಡಿವೆ. ವೈಜ್ಞಾನಿಕ ಜಗತ್ತು ಇತ್ತೀಚೆಗೆ ನಮ್ಮ ಎಲ್ಲಾ ಪ್ರಮುಖ ಸಂಪ್ರದಾಯ, ಹಬ್ಬ, ಆಚರಣೆಗಳ ಹಿನ್ನಲೆ ಹಾಗೂ ಅವುಗಳ ವಿಶೇಷತೆಗಳ ಕುರಿತು ಅಧ್ಯಯನ ಮಾಡಿ ಸನಾತನ ಧರ್ಮದ ಪ್ರತಿಯೊಂದು ಪ್ರಮುಖ ಆಚರಣೆಗಳು ತನ್ನದೇ ಆದ ವೈಜ್ಞಾನಿಕ ಕಾರಣಗಳನ್ನು ಹೊಂದಿವೆ ಎಂದು ಸ್ವತಃ ಒಪ್ಪಿಕೊಳ್ಳುತ್ತಿದೆ. ಅಂತಹ ಸನಾತನ ಹಿಂದೂ ಧರ್ಮದ ಪ್ರಮುಖ ಹಬ್ಬಗಳಲ್ಲೊಂದಾದ ಹಬ್ಬವೇ ಮಕರ ಸಂಕ್ರಾಂತಿ ಹಬ್ಬ.

ಸಂಕ್ರಮಣ- ಎಂದರೆ ಚಲಿಸುವಿಕೆ ಎಂದರ್ಥ. ಸೂರ್ಯನು ಒಂದು ರಾಶಿಯಿಂದ ಮತ್ತೊಂದು ರಾಶಿಗೆ ಪ್ರವೇಶಿಸುವುದಕ್ಕೆ ಸಂಕ್ರಮಣ ಎಂದು ಕರೆಯುತ್ತೇವೆ. ಈ ರೀತಿ ಜ್ಯೋತಿಷ್ಯ ಶಾಸ್ತ್ರದ ಪ್ರಕಾರ ಒಟ್ಟು ಹನ್ನೆರಡು ಮಾಸಿಕ ಸಂಕ್ರಮಣಗಳು ಸಂಭವಿಸುತ್ತವೆ. ಸೂರ್ಯದೇವನು ದಕ್ಷಿಣಾಯನದಿಂದ ಉತ್ತರಾಯಣಕ್ಕೆ ಚಲಿಸುತ್ತ ಧನು ರಾಶಿಯಿಂದ ಮಕರ ರಾಶಿಗೆ ಪ್ರವೇಶಿಸುವ ಪುಣ್ಯ ಕಾಲವೇ ಈ ಮಕರ ಸಂಕ್ರಾಂತಿ. ಇದನ್ನು ಉತ್ತರಾಯಣ ಪರ್ವ ಕಾಲವೆಂದೂ ಕರೆಯಲಾಗುತ್ತದೆ.

ಮಕರ ಸಂಕ್ರಾತಿ ಹಬ್ಬವನ್ನು ಭಾರತ ದೇಶದಾದ್ಯಂತ ಆಚರಿಸಲಾಗುತ್ತದೆ. ತೆಲಂಗಾಣ, ಆಂಧ್ರಪ್ರದೇಶ ಮತ್ತು ಕರ್ನಾಟಕ ರಾಜ್ಯಗಳಲ್ಲಿ ಸಂಕ್ರಾಂತಿ, ಮಕರ ಸಂಕ್ರಾಂತಿ



ಎಂದು ಆಚರಿಸಿದರೇ, ತಮಿಳುನಾಡಿನಲ್ಲಿ ಪೊಂಗಲ್ ಎಂದು, ಗುಜರಾತ್ ರಾಜ್ಯದಲ್ಲಿ ಉತ್ತರಾಯಣವೆಂದು, ಬಿಹಾರ ಮತ್ತು ಉತ್ತರ ಪ್ರದೇಶ ರಾಜ್ಯಗಳಲ್ಲಿ ಕಿಚಡಿ ಎಂದು, ಪಂಜಾಬ್ ರಾಜ್ಯದಲ್ಲಿ ಮಾಘೀ ಎಂದೂ ಇನ್ನು ಹಲವು ರಾಜ್ಯಗಳಲ್ಲಿ ವಿವಿಧ ರೀತಿಯಲ್ಲಿ ಈ ಹಬ್ಬವನ್ನು ಆಚರಿಸಲಾಗುತ್ತದೆ. ಏಕತೆಯಲ್ಲಿ ವೈವಿಧ್ಯತೆ ಎಂಬಂತೆ ನಮ್ಮ ಭಾರತ ದೇಶದಲ್ಲಿ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಭಾಷೆ, ಉಡುಗೆ, ತೊಡುಗೆ, ಆಚರಣೆಗಳ ಹೆಸರು ಮಾತ್ರ ಬೇರೆಯಾದರೂ ಸಂಪ್ರದಾಯ ಮಾತ್ರ ಒಂದೇ.

ಮಕರ ಸಂಕ್ರಾಂತಿಯಿಂದ ರಥಸಪ್ತಮಿವರೆಗಿನ ಅವಧಿಗೆ ಪುಣ್ಯಪ್ರದ ಉತ್ತರಾಯಣಕಾಲ ಎಂದು ಕರೆಯಲಾಗುತ್ತದೆ. ಈ ಪುಣ್ಯಮಯ ಕಾಲವು ದಾನ-ಧರ್ಮಕ್ಕೆ ಶ್ರೇಷ್ಠ ಅವಧಿಯೆಂದು ಪರಿಗಣಿಸಲಾಗಿದೆ. ನಮ್ಮ ಪುರಾಣಗಳಲ್ಲಿ ಉಲ್ಲೇಖವಿರುವಂತೆ ಈ ಮಕರ ಸಂಕ್ರಮಣದ ಉತ್ತರಾಯಣ ಕಾಲವು ಪರಮ ಪವಿತ್ರತೆಯಿಂದ ಕೂಡಿದೆ. ಈ ಪುಣ್ಯಮಯ ಕಾಲದಲ್ಲಿ ಸ್ವರ್ಗಲೋಕದ ಬಾಗಿಲು ತೆರೆದಿರುತ್ತದೆ ಎಂದೂ, ಈ ಪುಣ್ಯಕಾಲದಲ್ಲಿ ದೇಹ ತ್ಯಜಿಸಿದವರು ನೇರ ಸ್ವರ್ಗಲೋಕಕ್ಕೆ ಹೋಗುವರೆಂಬುದು ಆದಿಕಾಲದಿಂದಲೂ ನಮ್ಮಲ್ಲಿ ಬಂದಿರುವ ನಂಬಿಕೆ. ಅಂದು ಮಹಾಭಾರತದ ಕುರುಕ್ಷೇತ್ರ ಯುದ್ಧದಲ್ಲಿ ಗಾಂಡೀವಿ ಅರ್ಜುನನ ಬಾಣಗಳಿಂದ ಘಾತಕ್ಕೊಳಗಾಗಿ ಶರಶಯ್ಯೆ ಮೇಲೆ ಮಲಗಿದ್ದ ಭೀಷ್ಮ ಪಿತಾಮಹರು, ಪುಣ್ಯಕಾಲಕ್ಕಾಗಿ ಕಾದು ತಮ್ಮ ದೇಹ ತೊರೆದದ್ದು ಇದೇ ಉತ್ತರಾಯಣ ಪುಣ್ಯ ಕಾಲದಲ್ಲಿ.

ಭಗೀರತ ಮಹರ್ಷಿಗಳ ತಪಸ್ಸಿಗೆ ಒಲಿದು ಭುವಿಗಿಳಿದು ಬಂದ ದೈವಗಂಗಾ ಮಾತೆಯು ಕಪಿಲ ಮಹರ್ಷಿಗಳ ಆಶ್ರಮವನ್ನು ಪ್ರವೇಶಿಸಿದ ದಿನಕ್ಕೆ ಪಾಪ ನಾಶನ ದಿನವೆಂಬ ಹೆಸರು ಬರುವಂತಾಗಿದ್ದು ಇದೇ ಮಕರ ಸಂಕ್ರಾಂತಿಯಂದು.

ದೇವಿ ಭಾಗವತ ಪುರಾಣದ ಪ್ರಕಾರ ಕೈಲಾಸವಾಸಿ ಮಹಾದೇವನು ಮಹಾವಿಷ್ಣುವಿಗೆ ಆತ್ಮ ಜ್ಞಾನವನ್ನು ಬೋಧಿಸಿದ್ದು ಇದೇ ಉತ್ತರಾಯಣ ಪರ್ವಕಾಲದಲ್ಲಿ.

ಮತ್ಸ್ಯ ಪುರಾಣದ ಪ್ರಕಾರ ದೇವ ದೇವತೆಗಳ ದಿನವು ಪ್ರಾರಂಭವಾಗುವುದೇ ಈ ಪುಣ್ಯಪ್ರದ ಮಕರ ಸಂಕ್ರಮಣದಂದು ಹಾಗಾಗಿ ಈ ದಿನವನ್ನು ಕಲ್ಯಾಣಕರ ದಿನವೆಂದೂ ಕರೆಯಲಾಗುತ್ತದೆ.

ಚಳಿಗಾಲದಲ್ಲಿ ಬರುವ ಈ ಮಕರ ಸಂಕ್ರಾಂತಿ ಹಬ್ಬದಂದು ಹೆಚ್ಚಾಗಿ ಎಳ್ಳು, ಎಳ್ಳು-ಬೆಲ್ಲ, ನೆಲಗಡಲೆ ಕಾಳು(ಶೇಂಗಾ), ಕೊಬ್ಬರಿ ಹೀಗೆ ಎಣ್ಣೆಯ ಅಂಶವುಳ್ಳ ಪದಾರ್ಥಗಳನ್ನು ಹೆಚ್ಚಾಗಿ ಸೇವಿಸುವ ಪದ್ಧತಿ ನಮ್ಮಲ್ಲಿ ಕಾಣಬಹುದು. ಇದರ ಹಿಂದೆ ಒಂದು ವೈಜ್ಞಾನಿಕ ಕಾರಣವೂ ಅಡಗಿದೆ. ಏನೆಂದರೆ ಚಳಿಗಾಲದ ಮೈಕೊರೆವ ಚಳಿಗೆ ನಮ್ಮ ಚರ್ಮವು ಒಣಗಿ ಎಣ್ಣೆಯ ತೇವಾಂಶವನ್ನೆ ಕಳೆದುಕೊಂಡಿರುತ್ತದೆ. ಹಾಗಾಗಿ ನಮ್ಮ ದೇಹದಲ್ಲಿ ಪುನಃ ಎಣ್ಣೆಯ ಅಂಶ ಮತ್ತು ಕಾಂತಿಯನ್ನು ತರಲು ಈ ಚಳಿಗಾಲದಲ್ಲಿ ಬರುವ ಮಕರ ಸಂಕ್ರಾಂತಿ ಹಬ್ಬದಂದು ಎಣ್ಣೆಯ ಸ್ನಾನ, ಎಳ್ಳು, ಅರಿಶಿನ ಕುಟ್ಟಿಮಾಡಿದ ಪುಡಿಯಿಂದ ಸ್ನಾನ, ಎಳ್ಳು ಬೆಲ್ಲ, ಕೊಬ್ಬರಿ, ಶೇಂಗಾ ಹೀಗೆ ಎಣ್ಣೆಯ ಅಂಶವುಳ್ಳ ಪದಾರ್ಥಗಳನ್ನು ಸೇವಿಸುವ ಮೂಲಕ ಪುನಃ ತೇವಾಂಶವನ್ನು ಹೆಚ್ಚಿಸಿಕೊಳ್ಳುವ ಈ ಪದ್ಧತಿಯನ್ನು ನಮ್ಮ ಪೂರ್ವಜರು ಆಗಲೇ ಸಂಪ್ರದಾಯವೆಂಬ ಹೆಸರಿನೊಂದಿಗೆ ಈ ಹಬ್ಬಗಳಲ್ಲಿ ಸೇರಿಸಿದ್ದಾರೆ. ಅಷ್ಟೇ ಅಲ್ಲದೇ ಮಕರ ಸಂಕ್ರಮಣ ಹಬ್ಬದ ದಿನದಂದು ಎಳ್ಳು ಬೆಲ್ಲವನ್ನು ನೆರೆ ಹೊರೆಯವರಿಗೆ, ಬಂಧು ಮಿತ್ರರಿಗೆ ಹಾಗೂ ಓಣಿಯವರಿಗೆಲ್ಲ ಹಂಚಿ ಎಳ್ಳು ಬೆಲ್ಲ ತಿಂದು ನಾವು ನೀವು ಒಳ್ಳೆಯ ಮಾತನಾಡೋಣ ಎಂಬ ಶುಭ ಹಾರೈಕೆಯ ಮೂಲಕ ಸಮಾಜದಲ್ಲಿ ಉತ್ತಮ ಬಾಂಧವ್ಯವನ್ನು ಬೆಸೆಯುವಲ್ಲಿ ಈ ಸಂಕ್ರಾಂತಿ ಹಬ್ಬವು ಪ್ರಮುಖ ಪಾತ್ರ ವಹಿಸುತ್ತದೆ. ಒಟ್ಟಿನಲ್ಲಿ ರಾಜ್ಯಗಳಿಂದ ರಾಜ್ಯಗಳಿಗೆ ವೇಷ, ಭಾಷೆ ಹಾಗೂ ಜೀವನ ಶೈಲಿ ಬದಲಾದರೂ ಭಾರತದಾದ್ಯಂತ ಸನಾತನ ಹಿಂದೂ ಧರ್ಮದ ಹಬ್ಬ, ಆಚರಣೆಗಳು ವೈಜ್ಞಾನಿಕ ಹಿನ್ನಲೆಗಳೊಂದಿಗೆ ವಿವಿಧತೆಯಲ್ಲಿ ಏಕತೆಯ ಸಂದೇಶವನ್ನು ಸಾರುತ್ತವೆ.

**ಎಲ್ಲರಿಗೂ ಮಕರ ಸಂಕ್ರಾಂತಿ ಹಬ್ಬದ ಹಾರ್ದಿಕ ಶುಭಾಶಯಗಳು**

# ಆಕಳ ಕೆಚ್ಚಲು ಕೊಯ್ದ ಪ್ರಕರಣ, ನೈಜ ಆರೋಪಿಗಳ ಬಂಧನಕ್ಕೆ ಆಗ್ರಹ

## ಶಾಸಕರ ಮನೆ ಮುಂದೆ ಬಿಜೆಪಿ ರೈತ ಮೋರ್ಚಾದಿಂದ ಸಗಣಿ ರಂಗೋಲಿ ವಿವಾದ: ಬಿಜೆಪಿ ಕಾರ್ಯಕರ್ತರ ಬಂಧನ

• ಉದಯವಾಹಿನಿ, ಮುದ್ದೇಬಿಹಾಳ

ಬೆಂಗಳೂರಿನ ಚಾಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲು ಕೊಯ್ದ ನೈಜ ಆರೋಪಿಗಳ ಬಂಧನಕ್ಕೆ ಆಗ್ರಹಿಸಿ ಶಾಸಕರು, ಸಚಿವರ ನಿವಾಸದ ಎದುರು ಸೆಗಣಿ ಸಾರಿಸಿ ರಂಗೋಲಿ ಹಾಕುವಂತೆ ಬಿಜೆಪಿ ರೈತ ಮೋರ್ಚಾ ನೀಡಿದ್ದ ಕರೆ ಪಾಲಿಸಲು ಮುಂದಾಗಿದ್ದ ಇಲ್ಲಿನ ರೈತ ಮೋರ್ಚಾ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದ್ದು ವಾದ, ವಿವಾದದ ರೂಪ ಪಡೆದುಕೊಂಡು ಮದ್ಯಾಹ್ನದಿಂದ ಸಂಜೆಯವರೆಗೂ ಪೊಲೀಸ್ ಠಾಣೆ ಆವರಣದಲ್ಲಿ ಬಿಜೆಪಿ ನಾಯಕರ, ಕಾರ್ಯಕರ್ತರ ಧರಣಿಗೆ ಆಸ್ಪದ ಮಾಡಿಕೊಟ್ಟ ಘಟನೆ ಮಂಗಳವಾರ ನಡೆಯಿತು.

15ಕ್ಕೂ ಹೆಚ್ಚು ಕಾರ್ಯಕರ್ತರು ಹಸಿರು ಶಾಲು ಹೊದ್ದು ಸರ್ಕಾರದ ವಿರುದ್ಧ ಧಿಕ್ಕಾರ ಕೂಗುತ್ತ ಹುಡ್ಕೋದಲ್ಲಿರುವ ಶಾಸಕ, ಕೆಎಸ್‌ಡಿ ನಿಗಮದ ಅಧ್ಯಕ್ಷ ಸಿ.ಎಸ್.ನಾಡಗೌಡರ ನಿವಾಸದತ್ತ ತೆರಳುತ್ತಿದ್ದರು. ಪೊಲೀಸರು ಸ್ಥಳಕ್ಕಾಗಮಿಸಿ ಎಲ್ಲರನ್ನೂ ತಡೆದರು. ಈ ಮಧ್ಯೆ, ಒಂದಿಬ್ಬರು ಶಾಸಕರ ಮನೆಯ ಗೇಟ್ ಮುಂದೆ ಸೆಗಣಿ ಹಾಕಿ ಸಾರಿಸಿ ರಂಗೋಲಿ ಹಾಕಲು ಮುಂದಾಗಿದ್ದರು. ಶಾಸಕರ ನಿವಾಸದಲ್ಲಿದ್ದ ಅವರ ಆಪ್ತ ಸಿಬ್ಬಂದಿ ತಕರಾರು ತೆಗೆದರು.

ಪೊಲೀಸರು ತಡೆಯಲು ಬಂದಾಗ ಓರ್ವ ಕಾರ್ಯಕರ್ತ ಕಂಪೌಂಡ್ ಗೋಡೆಗೆ ಸೆಗಣಿ ಬಳಿದರು. ಮನೆಯಲ್ಲಿದ್ದ ಶಾಸಕರು ಇದರಿಂದ ಆಕ್ರೋಶಗೊಂಡು ಇದು ರಾಜಕೀಯ ಪ್ರೇರಿತ. ಸರ್ಕಾರ ಈಗಾಗಲೇ ಕ್ರಮ ಕೈಕೊಂಡಿದೆ. ನಾನೇನು ಮಾಡಲು ಸಾಧ್ಯ. ಪೊಲೀಸರೇನು ಮಾಡುತ್ತಿದ್ದಾರೆ ಎಂದು ಗರಂ ಆದರು.

ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಠಾಣೆಗೆ ಬರತೊಡಗಿದರು. ಠಾಣೆ ಎದುರೇ ಕೆಲವರು ನಡಹಳ್ಳಿ ವಿರುದ್ಧ ಧಿಕ್ಕಾರವನ್ನೂ ಕೂಗಿದರು. ಶಾಸಕರ ಆಪ್ತ ಸಹಾಯಕ ನಾಗರಾಜ ತಂಗಡಗಿ ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಎಫ್‌ಐಆರ್ ಪ್ರಕ್ರಿಯೆ ಪ್ರಾರಂಭಿಸಿದ್ದು ಧರಣಿ ನಿರತರನ್ನು ಕೆರಳಿಸಿತು.

ಬಿಜೆಪಿ ಮುಖಂಡರಾದ ಎಂ.ಎಸ್.ಪಾಟೀಲ, ಮುನ್ನಾಧಣಿ ನಾಡಗೌಡ, ಮಲಕೇಂದ್ರಗೌಡ ಪಾಟೀಲ, ಕೆಂಚಪ್ಪ ಬಿರಾದಾರ, ಸೋಮನಗೌಡ ಬಿರಾದಾರ, ಮುತ್ತು ಸಾಹುಕಾರ ಅಂಗಡಿ, ಲಕ್ಷ್ಮಣ ಬಿಜ್ಜೂರ, ಅಶೋಕ ರಾಠೋಡ, ಬಸಪ್ಪ ತಟ್ಟಿ, ವಿಜಯಕುಮಾರ ಬಡಿಗೇರ, ಸಂಗಮ್ಮ ದೇವರಳ್ಳಿ, ಗೌರಮ್ಮ ಹುನಗುಂದ ಬಲದಿನ್ನಿ ಸೇರಿ ಹಲವು ಮುಖಂಡರು ಧರಣಿಯಲ್ಲಿ ಸೇರಿದರು.

ಹೆಚ್ಚುವರಿ ಎಸ್ಪಿ ರಾಮನಗೌಡ ಹಟ್ಟಿ ಅವರು ಧರಣಿ ಸ್ಥಳಕ್ಕೆ ಬಂದು ಕಾನೂನು ಕ್ರಮ ಕೈಕೊಳ್ಳುತ್ತದೆ. ಧರಣಿ ಕೈಬಿಟ್ಟು ಪೊಲೀಸರಿಗೆ ಸಹಕರಿಸಿ ಎಂದು ಕೋರಿದರು. ಬಂಧಿಸಿರುವ ಕಾರ್ಯಕರ್ತರನ್ನು ಬಿಡುವವರೆಗೂ ಧರಣಿ ಬಿಡುವುದಿಲ್ಲ ಎಂದು ನಡಹಳ್ಳಿಯವರು ಸ್ಪಷ್ಟಪಡಿಸಿದರು.

ಮೊದಲೇ ಬಂಧಿಸಲ್ಪಟ್ಟಿದ್ದ ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ್, ಯುವ ಮೋರ್ಚಾ ಅಧ್ಯಕ್ಷ ಗಿರೀಶಗೌಡ ಪಾಟೀಲ ಹಿರೇಮುರಾಳ, ನಾಗೇಶ ಕವಡಿಮಟ್ಟಿ, ಸಂಜು ಬಾಗೇವಾಡಿ ಅವರನ್ನು ಸಂಜೆ ನಡಹಳ್ಳಿ, ಮುಖಂಡರ ಪ್ರತಿರೋಧದ ನಡುವೆಯೂ ಪೊಲೀಸ್ ಬಂದೋಬಸ್ತನ ಲ್ಲಿ ಬೇರೆಡೆ ಕರೆದೊಯ್ಯಲಾಯಿತು. ತಾಳಿಕೋಟೆ ಠಾಣೆ, ಜಿಲ್ಲಾ ಕೇಂದ್ರದಿಂದ ಡಿಆರ್ ಪೊಲೀಸರು ಹೆಚ್ಚಿನ ಸಂಖ್ಯೆಯಲ್ಲಿ ಕರೆಸಲಾಗಿತ್ತು. 25-30 ಕಾರ್ಯಕರ್ತರನ್ನು ನಿಯಂತ್ರಿಸಲು 50ಕ್ಕೂ ಹೆಚ್ಚು ಪೊಲೀಸರು ಠಾಣೆ ಆವರಣದಲ್ಲಿದ್ದದ್ದು ಸಾರ್ವಜನಿಕರ ಚರ್ಚೆಯ ವಿಷಯವಾಯಿತು.


ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ

### ಸರ್ಕಾರದ ವಿರುದ್ಧ ಧಿಕ್ಕಾರ

**ಸಹನೆ ಕಳೆದುಕೊಂಡ ನಡಹಳ್ಳಿಯವರು ಪಕ್ಷದ ಮುಖಂಡರು, ಕಾರ್ಯಕರ್ತರೊಂದಿಗೆ ಠಾಣೆ ಆವರಣದಲ್ಲೇ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಬಂದಿಸಿರುವವರನ್ನು ಬಿಡುವವರೆಗೂ ಧರಣಿ ಕೂಡುವುದಾಗಿ ತಿಳಿಸಿ ಧರಣಿ ಪ್ರಾರಂಭಿಸಿದರು. ಧರಣಿಯ ಕಾವು ಹೆಚ್ಚಾಗುವುದನ್ನರಿತ ಸಿಪಿಐ, ಪಿಎಸ್ಸೈ ಅವರು ನಡಹಳ್ಳಿಯವರ ಮನವೊಲಿಸಲು ಯತ್ನಿಸಿದರೂ ಪ್ರಯೋಜನವಾಗಲಿಲ್ಲ. ಕಾರ್ಯಕರ್ತರನ್ನು ಬಿಡುಗಡೆ ಮಾಡದ ಹೊರತು ಇಲ್ಲಿಂದ ಕದಲುವುದಿಲ್ಲ ಎಂದು ಪಟ್ಟು ಹಿಡಿದರು.**

**ಇದರಿಂದ ಕುಪಿತರಾದ ಮಾಜಿ ಶಾಸಕ, ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿಯವರು ಠಾಣೆಗೆ ಬಂದು ಸೆಗಣಿ ಬಳಿದು ರಂಗೋಲಿ ಹಾಕಿ ಗೋಮಾತೆ, ಸೆಗಣಿಯ ಮಹತ್ವ ಶಾಸಕರಿಗೆ ತಿಳಿಸಿಕೊಡಲು ಮುಂದಾಗಿದ್ದ ಕಾರ್ಯಕರ್ತರ ಮೇಲೆ ದೌರ್ಜನ್ಯ ನಡೆಸಿ, ಕಾನೂನಿಗೆ ವಿರುದ್ಧವಾಗಿ ಅವರನ್ನು ಬಂಧಿಸಿದ್ದನ್ನು ಆಕ್ಷೇಪಿಸಿ ಯಾವ ಕಾಯ್ದೆ, ಕಲಂ ಅಡಿ ಬಂಧಿಸಲಾಗಿದೆ ಎನ್ನುವ ಕಾರಣ ಕೊಡಿ, ಇಲ್ಲವೇ ಕಾರ್ಯಕರ್ತರನ್ನು ಬಿಟ್ಟು ಕಳಿಸಿ. ಎಂದು ಪಟ್ಟು ಹಿಡಿದರು. ಇದಕ್ಕೆ ಸಿಪಿಐ ಮಲ್ಲಿಕಾರ್ಜುನ ತುಳಸೀಗೇರಿ, ಪಿಎಸ್ಸೈ ಸಂಜಯ್ ತಿಪ್ಪರಡ್ಡಿ ಸ್ಪಂಧಿಸಲಿಲ್ಲ.**


**ಠಾಣೆ ಎದರು ಮಾಜಿ ಶಾಸಕ ನಡಹಳ್ಳಿ ಧರಣಿ**

# ಉದಯವಾಹಿನಿ ವರದಿಗೆ ಸ್ಪಂದಿಸಿದ ಜಿಲ್ಲಾಡಳಿತ

## ಕಾಲುವೆಗೆ ನೀರು ಹರಿಸಲು ಮುಂದಾದ ಅಧಿಕಾರಿಗಳು: ರೈತರು ದಿಲ್ ಖುಷ್


ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ




• ಉದಯವಾಹಿನಿ, ಯಾದಗಿರಿ

ಜಿಲ್ಲೆಯ ರೈತರು ಈಗಾಗಲೇ ಬರ-ನೆರೆಯಿಂದ ಬೆಳೆ ಹಾನಿಗೆ ಒಳಗಾಗಿ ಸಂಕಷ್ಟದಲ್ಲಿದ್ದು, ಇದರ ನಡುವೆ ಈಗ ಶೇಂಗಾ ಬೆಳೆಗಾರರಿಗೆ ಶಾಕ್ ಎದುರಾಗಿದೆ. ಶೇಂಗಾ ಬೆಳೆ ಕಟಾವು ಮಾಡಲು ಇನ್ನೇನು ಕೆಲವೇ ದಿನ ಇರುವಾಗಲೇ ಏತ ನೀರಾವರಿ ಇಲಾಖೆ ಅಧಿಕಾರಿಗಳು ಕಾಲುವೆ ನೀರು ಬಂದ್ ಮಾಡಿದ್ದರಿಂದ ಬೆಳೆ ಒಣಗುವ ಸ್ಥಿತಿಗೆ ಬಂದಿತ್ತು.

ಈ ಹಿನ್ನಲೆಯಲ್ಲಿ ಉದಯ ವಾಹಿನಿ ಪತ್ರಿಕೆಯಲ್ಲಿ ಶೇಂಗಾ ಬೆಳೆಗೆ ನೀರಿಲ್ಲದೇ ರೈತರು ಹೈರಾಣು ಎಂಬ ತೆಲೆ ಬರಹದ ಅಡಿಯಲ್ಲಿ ಸುದ್ದಿ ಪ್ರಕಟಿಸಲಾಗಿತ್ತು. ಉದಯವಾಹಿನಿ ವರದಿಗೆ ಸ್ಪಂದಿಸಿದ ಜಿಲ್ಲಾಡಳಿತ ನೀರುಣಿಸಲು ಮುಂದಾಗಿರುವುದಕ್ಕೆ ಸಾಮಾಜಿಕ ಹೋರಾಟಗಾರ ಉಮೇಶ.ಕೆ.ಮುದ್ನಾಳ ಹಾಗೂ ರೈತರು ಹರ್ಷ ವ್ಯಕ್ತಪಡಿಸಿದರು.

# ಚಿತ್ರದುರ್ಗದ ಜನರಿಂದ ಸಂಭ್ರಮ ಸಡಗರದ ಸಂಕ್ರಾಂತಿ ಹಬ್ಬದ ಆಚರಣೆ

• ಉದಯವಾಹಿನಿ, ಚಿತ್ರದುರ್ಗ

ಮಕರ ಸಂಕ್ರಾಂತಿ ಮುಖ್ಯವಾಗಿ ದಕ್ಷಿಣ ಭಾರತದಲ್ಲಿ ಆಚರಿಸಲಾಗುವ ಧಾರ್ಮಿಕ, ಸಾಂಸ್ಕೃತಿಕ ಹಬ್ಬ. ಕರ್ನಾಟಕದಲ್ಲಿ ಮಕರ ಸಂಕ್ರಾಂತಿ ಸ್ನೇಹ-ಬಾಂಧವ್ಯದ ಸಂದೇಶ ಸಾರುವ ಸಂಕ್ರಾಂತಿ ಹಬ್ಬವನ್ನು ಕೋಟೆನಾಡು ಚಿತ್ರದುರ್ಗದ ಜನರು ಸಂಭ್ರಮ ಸಡಗರದಿಂದ ಆಚರಿಸಿದರು.

ಹಬ್ಬಕ್ಕೆ ಒಂದು ದಿನ ಮುನ್ನ ಸೋಮವಾರ ದಿಂದಲೇ ಹಬ್ಬದ ಜನರು ಖರೀದಿಯಲ್ಲಿ ನಿರತರಾಗಿದ್ದರು. ಹೀಗಾಗಿ ಸೋಮವಾರ ಮಂಗಳವಾರ ಎರಡೂ ಮಾರುಕಟ್ಟೆಯಲ್ಲಿ ಹೆಚ್ಚಿನ ಜನಸಂದಣಿ ಕಂಡುಬಂದಿತ್ತು.

ವರ್ಷದ ಆರಂಭದ ಮೊದಲ ಹಬ್ಬ ಇದಾಗಿದೆ. ನಗರದ ಮಾರುಕಟ್ಟೆಗೆ ರಾಶಿ-ರಾಶಿ ಕಬ್ಬು, ಕುಂಬಳಕಾಯಿ, ಗೆಣಸು, ಕಡಲೆಕಾಯಿ, ಅವರೆಕಾಯಿ ಆಮದಾಗಿದೆ. ಅಂಗಡಿ ಮಳಿಗೆಗಳಲ್ಲಿ ಎಳ್ಳು-ಬೆಲ್ಲ, ಸಕ್ಕರೆ ಅಚ್ಚು ಮಾರಾಟ ಜೋರಾಗಿತ್ತು. ಬಿ.ಡಿ. ರಸ್ತೆ, ಸಂತೆಹೊಂಡ, ಮೆದೇಹಳ್ಳಿ ರಸ್ತೆ, ಆನೆಬಾಗಿಲು, ಎಪಿಎಂಸಿಯ ಹೂವಿನ ಮಾರುಕಟ್ಟೆಗಳಲ್ಲಿ ಹಬ್ಬದ ಸಂಭ್ರಮ ಕಳೆಗಟ್ಟಿತ್ತು. ಗ್ರಾಮೀಣ ಭಾಗದ ಜನರೂ ಹಬ್ಬದ ಸಾಮಗ್ರಿಗಳ ಖರೀದಿಗೆ ಮುಗಿ ಬಿದ್ದರು ಕಳೆದೆರಡು ದಿನಗಳಿಂದ ಸಂತೆಹೊಂಡ ಮಾರುಕಟ್ಟೆ ಬಳಿ ಐದಾರು ಲೋಡ್ ಕಬ್ಬು ಮಂಡ್ಯ, ಹಾಸನ, ಕುರುಬರಹಳ್ಳಿ ಮತ್ತಿತರ ಕಡೆಗಳಿಂದ ಬಂದಿತ್ತು. ಕುಂಬಳಕಾಯಿ ಕೂಡ ಇದಕ್ಕೆ ಹೊರತಾಗಿರಲಿಲ್ಲ.

ಚಿತ್ರದುರ್ಗದಲ್ಲಿ ಕೊರೆಯುವ ಛಳಿ ಇದ್ದರೂ ಮಹಿಳೆಯರು ಮಕ್ಕಳು ಹಿರಿಯರು ನಸುಕಿನಲ್ಲೆ ಎದ್ದು ಸ್ನಾನ ಮಾಡಿ ಹೊಸ ಬಟ್ಟೆಯುಟ್ಟು ತಮ್ಮ ಮನೆಗಳ ಅಂಗಳ, ದೇವಸ್ಥಾನಗಳ ಮುಂದೆ ಸಂಕ್ರಾಂತಿ ಶುಭಾಷಯದ ಬಣ್ಣಬಣ್ಣದ ರಂಗೋಲಿ ಬಿಡಿಸುವುದರ ಮೂಲಕ ಶುಭಾಶಯ ಕೊರಿದರು.

ನಗರದ ದೇವಾಲಯಗಳಲ್ಲಿ ವಿಶೇಷ ಅಲಂಕಾರ

**ಪೂಜೆ ಪ್ರಸಾದ:** ನಗರದ ಗ್ರಾಮ ದೇವತೆ ಉತ್ಸವಾಂಬ ಉಚ್ಚಂಗಿಯಲ್ಲಮ್ಮ ದೇವಾಲಯ, ಕೋಟೆ ಮೇಲಿನ ಬನಶಂಕರಿ, ಗಣಪತಿ ದೇವಸ್ಥಾನ, ಏಕನಾಥೇಶ್ವರಿ ದೇವಾಲಯ, ಜೋಗಿಮಟ್ಟಿ ರಸ್ತೆಯ ತಿಪ್ಪನಘಟ್ಟಮ್ಮ, ಆನೆಬಾಗಿಲು ಗಣೇ, ಆಂಜನೇಯ, ಶ್ರೀ ವೆಂಕಟೇಶ್ವರಸ್ವಾಮಿ ದೇವಾಲಯಗಳಲ್ಲಿ ನೂರಾರು ಭಕ್ತರು ಮುಂಜಾನೆಯಿಂದಲೇ ಹಿರಿಯರು ಮಕ್ಕಳು ಹೆಂಗೆಳೆಯರು ಹಣ್ಣು, ಕಾಯಿ, ಎಳ್ಳು-ಬೆಲ್ಲ ಅರ್ಪಿಸಿದರು. ದೇವಾಲಯದಲ್ಲಿ ಭೇಟಿಯಾದ ಹಿರಿಯರು, ಪರಿಚಿತರಿಗೆ ಎಳ್ಳುಬೆಲ್ಲ ನೀಡಿ ಸಂಕ್ರಾಂತಿ ಶುಭಾಶಯ ಕೋರಿದರುವುದು ಎಲ್ಲೆಡೆ ಕಂಡುಬಂದಿತು.



ಉದಯವಾಹಿನಿ ಚಿತ್ರ



# ಅಳ್ಳೇಕೋಡಿ ಮಾರಿ ಜಾತ್ರೆಗೆ ಚಾಲನೆ


• ಉದಯವಾಹಿನಿ, ಭಟ್ಕಳ

ಎರಡು ವರ್ಷಕ್ಕೊಮ್ಮೆ ನಡೆಯುವ ಭಟ್ಕಳದ ಅಳ್ಳೇಕೋಡಿ ಮಾರಿ ಜಾತ್ರೆಗೆ ಜ.14ರಂದು ಬೆಳಿಗ್ಗೆ ಧಾರ್ಮಿಕ ವಿಧಿ ವಿಧಾನಗಳ ಮೂಲಕ ಮಾರಿಕಾಂಬಾ ಮೂರ್ತಿಯನ್ನು ಗದ್ದುಗೆಯಲ್ಲಿ ಕೂರಿಸಿ ಪೂಜೆ ಮಾಡುವ ಮೂಲಕ ಚಾಲನೆ ನೀಡಲಾಯಿತು.

ಮಾರಿಕಾಂಬಾ ಮೂರ್ತಿಯನ್ನು ಗದ್ದುಗೆಯಲ್ಲಿ ಪ್ರತಿಷ್ಠಾಪಿಸಿದ ನಂತರ ಜಾತ್ರಾ ಮಹೋತ್ಸವ ಸಮಿತಿಯ ಪರವಾಗಿ ಪ್ರಥಮ ಪೂಜೆಯನ್ನು ಮಾರಿಕಾಂಬಾ ದೇವಿ ನೆರವೇರಿಸಿ ಪ್ರಸಾದ ವಿತರಣೆ ಮಾಡಲಾಯಿತು. ಅರ್ಚಕರಾದ ಗಜಾನನ ಪುರಾಣಿಕ, ಮುಕುಂದ ಪುರಾಣಿಕ ಧಾರ್ಮಿಕ ವಿಧಿ ವಿಧಾನಗಳನ್ನು ನಡೆಸಿಕೊಟ್ಟರು.

ಬಳಿಕ ಭಕ್ತರಿಗೆ ದೇವಿಯ ದರ್ಶನಕ್ಕೆ ಅವಕಾಶ ಕಲ್ಪಿಸಲಾಯಿತು. ಸಾವಿರಾರು ಭಕ್ತರು ಸರದಿ ಸಾಲಿನಲ್ಲಿ ಬಂದು ದೇವಿಯ ದರ್ಶನ ಪಡೆದರು. ಕಷ್ಟಕಾಲದಲ್ಲಿ ದೇವಿಗೆ ಹರಕೆ ಹೊತ್ತ ಬೆಳ್ಳಿ ಕಣ್ಣು, ಉಡಿ ಕಾಣಿಕೆ ಅರ್ಪಿಸಿ ಹರಕೆ ಒಪ್ಪಿಸಿದರು. ಜಾತ್ರಾಸಮಿತಿ ವತಿಯಿಂದ ಭಕ್ತರಿಗೆ ಊಟದ ವ್ಯವಸ್ಥೆ ಮಾಡಲಾಗಿತ್ತು.

ಮಾರಿ ಜಾತ್ರಾ ಮಹೋತ್ಸವ ಸಮಿತಿಯ ಅಧ್ಯಕ್ಷ ರಾಮಾ ಮೊಗೇರ, ದೇವಸ್ಥಾನದ ಆಡಳಿತ ಮಂಡಳಿ ಅಧ್ಯಕ್ಷ ತಿಮ್ಮಪ್ಪ ಹೊನ್ನಿಮನೆ, ಪ್ರಮುಖರಾದ ಹನುಮಂತ ನಾಯ್ಕ, ನಾರಾಯಣ ದೈಮನೆ, ಬಾಬು ಮೊಗೇರ, ಭಾಸ್ಕರ ಪ್ರೇಮನೆ, ಮಂಜುನಾಥ ಕೋಡಿಹಿತ್ತಲ, ಭಾಸ್ಕರ ಮೊಗೇರ ಮುಂಗ್ರಿಮನೆ, ವಿಠಲ ದೈಮನೆ, ರಾಜು ಮೊಗೇರ ಇದ್ದರು.


ಉದಯವಾಹಿನಿ ಚಿತ್ರ

# ಸಾಧಕರಿಗೆ ಸನ್ಮಾನ

• ಉದಯವಾಹಿನಿ, ಬಂಟ್ವಾಳ

ಸುಮಾರು 500 ವರ್ಷಗಳ ಹಿನ್ನೆಲೆ ಇರುವ ಮಂಗ್ಲಿಮಾರ್ ಅಣ್ಣಪ್ಪ ಪಂಜುರ್ಲಿ ಧೂಮಾವತಿ ಬಂಟ ಪರಿವಾರ ದೈವಸ್ಥಾನವು 20 ವರ್ಷಗಳ ಅವಧಿಯಲ್ಲಿ ಸುಮಾರು 30 ಕೋಟಿ ವೆಚ್ಚದಲ್ಲಿ ಹಂತ ಹಂತವಾಗಿ ಅಭಿವೃದ್ಧಿಯಾಗುತ್ತಿದೆ. 20 ವರ್ಷಗಳಿಂದ ಏರ್ಯಬೀಡುವಿನಲ್ಲಿರುವ ದೈವದ ಭಂಡಾರವನ್ನು ಇಲ್ಲಿಗೆ ಮರಳಿಸುವಂತೆ ಸಾಮೂಹಿಕ ಪ್ರಾರ್ಥನೆ ನಡೆಸಲಾಗಿದೆ ಎಂದು ಕ್ಷೇತ್ರದ ಆಡಳಿತ ಮೊಕ್ತಸರ, ರಾಜ್ಯ ಧಾರ್ಮಿಕ ಪರಿಷತ್ ವಿಶೇಷ ಪ್ರತಿನಿಧಿ ರವಿಶಂಕರ ಶೆಟ್ಟಿ ಬಡಾಜೆ ತಿಳಿಸಿದರು. ಇಲ್ಲಿನ ಅಮ್ಮಾಡಿ ಗ್ರಾಮದ ಮಂಗ್ಲಿಯಾರ್ ಕ್ಷೇತ್ರದಲ್ಲಿ ಮಂಗಳವಾರ ನಡೆದ ಮಕರ ಸಂಕ್ರಮಣ ಪೂಜೆ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗರುಡ ಮಹಾಕಾಳಿ ದೇವಳದ ಆಡಳಿತ ಮೊಕ್ತಸರ ಡಾ.ಎ. ರಾಜೇಂದ್ರ ಶೆಟ್ಟಿ, ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ರವೀಂದ್ರ ಕಂಬಳಿ ಅವರನ್ನು ಸನ್ಮಾನಿಸಲಾಯಿತು. ಮುಖಂಡ ಬಿ.ರಮಾನಾಥ ರೈ ಮಾತನಾಡಿ, ಸಾಂಪ್ರದಾಯಿಕ ಆಚಾರ- ವಿಚಾರಗಳ ಬಗ್ಗೆ ಧಾರ್ಮಿಕ ಚೌಕಟ್ಟಿನ ಒಳಗೆ ಚಿಂತನೆ ನಡೆಸಿ ಸೌಹಾರ್ದಯುತ ಪರಿಹಾರ ಕಂಡುಕೊಳ್ಳಬೇಕು' ಎಂದರು.

# ಜೇವರ್ಗಿ ಬಾಲಕಿ ಆತ್ಮಹತ್ಯೆಗೆ ಕಾರಣವಾದ ಆರೋಪಿಗೆ ಗಲ್ಲುಶಿಕ್ಷೆ ನೀಡಿ: ಶರಣು ಪಾಟೀಲ ಆಗ್ರಹ

• ಉದಯವಾಹಿನಿ, ಚಿಂಚೋಳಿ

ಜೇವರ್ಗಿ ಪಟ್ಟಣದಲ್ಲಿ ಅಪ್ರಾಪ್ತ ಬಾಲಕಿಗೆ ಕಿರುಕುಳ ನೀಡಿ ಆತ್ಮಹತ್ಯೆಗೆ ಕಾರಣವಾದ ಆರೋಪಿಗೆ ಗಲ್ಲುಶಿಕ್ಷೆ ವಿಧಿಸಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ ಆಗ್ರಹಿಸಿದರು. ಪಟ್ಟಣದ ತಹಶೀಲ್ ಕಛೇರಿ ಎದುರು ತಾಲ್ಲೂಕಾ ಬಸವಪರ ಸಂಘಟನೆಗಳು ಹಾಗೂ ವಿವಿಧ ಮುಖಂಡರ ಸಮ್ಮುಖದಲ್ಲಿ ಜೇವರ್ಗಿಯಲ್ಲಿ ಬಾಲಕಿಗೆ ಕಿರಕುಳ ನೀಡಿ ಆತ್ಮಹತ್ಯೆಗೆ ಕಾರಣವಾದ ಆರೋಪಿಗೆ ಕಠಿಣ ಶಿಕ್ಷೆ ವಿಧಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಗೃಹ ಸಚಿವರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದ ಅವರು,ಆತ್ಮಹತ್ಯೆ ಮಾಡಿಕೊಂಡ ಬಾಲಕಿ ಕುಟುಂಬಸ್ಥರಿಗೆ ಸರ್ಕಾರದಿಂದ 50ಲಕ್ಷ ಪರಿಹಾರ ನೀಡಿ ಧೈರ್ಯ ತುಂಬುವ ಕೆಲಸ ಸರ್ಕಾರ ಮಾಡಬೇಕು. ಅನೇಕ ರೀತಿಯ ಪೋಕ್ಸೋ ಪ್ರಕರಣಗಳು ವಿವಿಧ ಪ್ರಕರಣಗಳು ಹೆಚ್ಚಾಗಿ ಬೆಳಕಿಗೆ ಬರುತ್ತಿದ್ದು ಸರ್ಕಾರ ಕಟ್ಟುನಿಟ್ಟಿನ ಕ್ರಮಕ್ಕೈಗೊಂಡು ಇತರ ಘಟನೆಗಳು ಜರುಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ಸೂರ್ಯಕಾಂತ ಹುಲಿ, ನೀಲಕಂಠ ಸೀಳಿನ, ಶಂಕರ ಶಿವಪೂರಿ, ವಿರೇಶ ಎಂಪಳ್ಳಿ, ಸಂಜೀವಕುಮಾರ ಪಾಟೀಲ, ಅನೀಲಕುಮಾರ ಜಮಾದಾರ, ಸುರೇಶ ಸುಕಂದ, ಸಂಜುಕುಮಾರ, ಸಂಪತ್ತಕುಮಾರ, ಜಗನ್ನಾಥ, ನಾಗರಾಜ, ಸಂತೋಷ ಪಾಟೀಲ, ಪ್ರಮೋಧ ಸೀಳಿನ, ಮಲ್ಲಿಕಾರ್ಜುನ ಅಣವಾರ, ಲೋಕೇಶ, ಶ್ರೀಧರ ಪಾಟೀಲ, ರಾಜಶೇಖರ ಪಾಟೀಲ, ರವಿಪಾಟೀಲ, ಹಣಮಂತ ಪೂಜಾರಿ, ಲಕ್ಷ್ಮಣ ಆವುಂಟಿ,ಅಮೃತರಾವ, ಧೂಳಪ್ಪ, ಜ್ಞಾನೇಶ್ವರ ಮಠ, ಪವನಕುಮಾರ ಪಾಟೀಲ, ಗೋಪಾಲ ಪೂಜಾರಿ,ಅನೇಕರಿದ್ದರು.



ಉದಯವಾಹಿನಿ ಚಿತ್ರ

**ಕಠಿಣ ಶಿಕ್ಷೆ ವಿಧಿಸುವಂತೆ ಆಗ್ರಹ**

# ಉಮಾರಾಮಲಿಂಗೇಶ್ವರ ಜಾತ್ರಾ ಮಹೋತ್ಸವ

• ಉದಯವಾಹಿನಿ, ಶಿಗ್ಗಾವಿ

ಉತ್ತರ ಕರ್ನಾಟಕ ಭಾಗದಲ್ಲಿ ಜಾತ್ರೆಗಳು ವಿಶಿಷ್ಟ್ಯತೆ ಹೊಂದಿದ್ದು, ಅದರಲ್ಲಿ ದಕ್ಷಿಣ ಕಾಶಿ ಎಂಬ ಐತಿಹಾಸಿಕ ಹಿನ್ನೆಲೆ ಹೊಂದಿದ ತಾಲ್ಲೂಕಿನ ಗಂಗೀಭಾವಿ ರಾಮಲಿಂಗೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜ.14ರಿಂದ 15ರ ವರೆಗೆ ಸುತ್ತಲಿನ ಗ್ರಾಮಗಳ ಹಾಗೂ ದೇವಸ್ಥಾನ ಸಮಿತಿ ಸಹಯೋಗದಲ್ಲಿ ಸಂಭ್ರಮದಿಂದ ಜರುಗಲಿದೆ. ಕ್ಷೇತ್ರದ ರಾಮಲಿಂಗೇಶ್ವರ ದೇವಸ್ಥಾನ ಪುರಾತನವಾಗಿದ್ದು ಪುಣ್ಯಸ್ನಾನದ ಕಟ್ಟೆ ನಿರ್ಮಿಸಲಾಗಿದೆ. ದೂರದಿಂದ ಬರುವ ಭಕ್ತರು ಗಂಗೆಯಲ್ಲಿ ಸ್ನಾನ ಮಾಡಿ ಬೇಡಿಕೆಗಳನ್ನು ಇಷ್ಟಾರ್ಥಗೊಳಿಸುತ್ತಿದ್ದಾರೆ. ಪುರಾತನ ಅಶ್ವಥ ವೃಕ್ಷವಿದ್ದು, ಅದರ ಸುತ್ತು ಪ್ರದಕ್ಷಿಣೆ ಹಾಕಿ ವರ ಪಡೆಯುತ್ತಿದ್ದಾರೆ. ಸಂತಾನ ಪ್ರಾಪ್ತಿಯಾಗುತ್ತದೆ ಎಂಬ ನಂಬಿಕೆ ಭಕ್ತರಲ್ಲಿದೆ.

ಮಂಗಳವಾರ ಬೆಳಿಗೆ ಜಾತ್ರಾ ಮಹೋತ್ಸವದಲ್ಲಿ ಉಮಾ- ರಾಮಲಿಂಗೇಶ್ವರ ದೇವರಿಗೆ ಪಂಚಾಮೃತ ಅಭಿಷೇಕ, ಮಾರಾರುದ್ರಾಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಸಮಾರಂಭಗಳು ಸಂಭ್ರಮದಿಂದ ಜರುಗಲಿವೆ. ಮಧ್ಯಾಹ್ನ 1ಗಂಟೆಗೆ ರಾಮಲಿಂಗೇಶ್ವರ ಉತ್ಸವ ಮೂರ್ತಿಯ ಮೆರವಣಿಗೆ ಹೊಸೂರ ಗ್ರಾಮದ ಬಸವಣ್ಣದೇವರ ಪಾದಗಟ್ಟಿಯಿಂದ ಗಂಗೀಭಾವಿ ವರೆಗೆ ಭಕ್ತ ಸಮೂಹದ ನಡುವೆ ಶ್ರದ್ಧಾಭಕ್ತಿಯಿಂದ ನಡೆಯಲಿದೆ. ಅಂದು ಸಂಜೆ 4 ಗಂಟೆಗೆ ರಾಮಲಿಂಗೇಶ್ವರ ದೇವರ ರಥೋತ್ಸವ ವಿಜೃಂಭಣೆಯಿಂದ ಜರುಗಲಿದೆ.

ಜ.15ರಂದು ಬೆಳಿಗ್ಗೆ ಪಂಚಾಮೃತ ಅಭಿಷೇಕ ನಡೆಯಲಿದೆ. ನಂತರ ರಾಮಲಿಂಗೇಶ್ವರ ದೇವರ ತೇರಿಗೆ ಕಡುಬಿನ ಕಾಳಗ ಜರುಗಲಿದೆ ಎಂದು ರಾಮಲಿಂಗೇಶ್ವರ ದೇವಸ್ಥಾನ ಸೇವಾ ಸಮಿತಿ ಸದಸ್ಯರು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

# ಗೋ ಕಳ್ಳತನ ತಡೆಯಲು ಬಜರಂಗದಳ ಮನವಿ

• ಉದಯವಾಹಿನಿ, ಕಳಸ

ತಾಲ್ಲೂಕಿನಾದ್ಯಂತ ಗೋ ಕಳ್ಳತನ ನಿರಂತರವಾಗಿ ನಡೆದಿದ್ದು. ಇದಕ್ಕೆ ಕಡಿವಾಣ ಹಾಕಬೇಕು ಎಂದು ಬಜರಂಗದಳ ಕಳಸ ಘಟಕದ ವತಿಯಿಂದ ಕಳಸ ಪೊಲೀಸ್ ಠಾಣೆಗೆ ಮನವಿ ಸಲ್ಲಿಸಲಾಯಿತು.

ಬಾಳೆ ಹೊಳೆ, ಹೊರನಾಡು, ಕಳಸ ಮತ್ತು ಹಿರೇಬೈಲಿನಲ್ಲಿ ಗೋವುಗಳನ್ನು ಕಳ್ಳರು ಕದ್ದು ಸಾಗಿಸುತ್ತಿರುವುದು ಗಮನಕ್ಕೆ ಬಂದಿದೆ. ಸರಕು ಸಾಗಣೆಯ ವಾಹನ ಮಾತ್ರವಲ್ಲ, ಜನರ ಓಡಾಟಕ್ಕೆ ಬಳಸುವ ವಾಹನಗಳಲ್ಲೂ ಜಾನುವಾರುಗಳನ್ನು ಕದ್ದು ಸಾಗಿಸಲಾಗುತ್ತಿದೆ ಎಂದು ಸಂಘಟನೆಯ ಕಾರ್ಯಕರ್ತರು ಆರೋಪಿಸಿದರು. ರಾತ್ರಿ 1 ಗಂಟೆಯಿಂದ ಬೆಳಗಿನ ಜಾವ 5 ಗಂಟೆ ಸಮಯದಲ್ಲಿ ಗೋವುಗಳ ಕಳ್ಳತನ ನಡೆಯುತ್ತಿದ್ದು, ಪೊಲೀಸರು ಬಿಗಿ ಕ್ರಮ ವಹಿಸಿ ಗೋ ಕಳ್ಳತನ ತಡೆಯಬೇಕು ಎಂದು ಕಾರ್ಯಕರ್ತರು ಆಗ್ರಹಿಸಿದರು. ಬಜರಂಗದಳ ಮುಖಂಡರಾದ ಅಜಿತ್ ಕುಲಾಲ್, ಸಂತೋಷ್ ಮೂಲ್ಯ ಮತ್ತಿತರರು ಇದ್ದರು.


ಉದಯವಾಹಿನಿ ಚಿತ್ರ

# ಹಾಸನ ಹಾಲು ಉತ್ಪಾದಕರ ಸಹಕಾರ ಒಕ್ಕೂಟ: 10 ಕೋಟಿ ಲಾಭ ಗಳಿಸುವ ನಿರೀಕ್ಷೆ

## • 2024-25ನೇ ಸಾಲಿಗೆ 2,800 ಕೋಟಿ ವಹಿವಾಟು ನಡೆಸುವ ಗುರಿ ಹೊಂದಿದೆ: ಶಾಸಕ ಎಚ್.ಡಿ. ರೇವಣ್ಣ

• ಉದಯವಾಹಿನಿ, ಹಾಸನ

ಹಾಸನ ಹಾಲು ಉತ್ಪಾದಕರ ಸಹಕಾರ ಒಕ್ಕೂಟವು 2024-25 ನೇ ಸಾಲಿಗೆ 2,800 ಕೋಟಿ ವಹಿವಾಟು ನಡೆಸುವ ಗುರಿ ಹೊಂದಿದೆ. ಡಿಸೆಂಬರ್ ಅಂತ್ಯದವರೆಗೆ ಸುಮಾರು 1,720 ಕೋಟಿ ವಹಿವಾಟು ನಡೆಸಲಾಗಿದೆ ಎಂದು ಒಕ್ಕೂಟದ ಅಧ್ಯಕ್ಷ ಶಾಸಕ ಎಚ್.ಡಿ. ರೇವಣ್ಣ ತಿಳಿಸಿದರು. ಇಲ್ಲಿನ ಹಾಸನ ಹಾಲು ಒಕ್ಕೂಟದ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2024-25 ರ ಸಾಲಿನಲ್ಲಿ ಒಕ್ಕೂಟವು ಪರಿವರ್ತನೆಗೆ ಕಳುಹಿಸುವ ಹಾಲಿನ ಪ್ರಮಾಣ ಹೆಚ್ಚಾಗಿದೆ ಎಂದರು. ಪರಿವರ್ತನೆಯಾದ ಉತ್ಪನ್ನಗಳಾದ ಹಾಲಿನಪುಡಿ ಉತ್ಪಾದನಾ ವೆಚ್ಚ ಪ್ರತಿ ಕೆ.ಜಿ.ಗೆ 290 ಆಗಿದ್ದು, ಮಾರಾಟ ದರ ಪ್ರತಿ ಕೆ.ಜಿ.ಗೆ 210 ಇದೆ. ಇದರಿಂದ ಪ್ರತಿ ಕೆ.ಜಿ.ಗೆ ಸುಮಾರು 80 ನಷ್ಟ ಅನುಭವಿಸುವಂತಾಗಿದೆ.

ಉತ್ಪನ್ನಗಳಿಗೆ ಬೇಡಿಕೆ ಕಡಿಮೆ ಇದೆ. ಆದರೂ, ವೆಚ್ಚಗಳ ಮೇಲೆ ನಿಯಂತ್ರಣ ಸಾಧಿಸಲಾಗುತ್ತಿದೆ ಎಂದು ಹೇಳಿದರು. ಹಾಲು ಮತ್ತು ಹಾಲಿನ ಉತ್ಪನ್ನಗಳ ಮಾರಾಟ ಹೆಚ್ಚಳಕ್ಕೆ ಆದ್ಯತೆ ನೀಡಿದ್ದು, ಸೆಪ್ಟೆಂಬರ್‌ನಿಂದ ಒಕ್ಕೂಟವು ಲಾಭದಲ್ಲಿ ಮುನ್ನಡೆಯುತ್ತಿದೆ. ಮಾರ್ಚ್‌ಗೆ ಅಂತ್ಯಗೊಳ್ಳುವ ಆರ್ಥಿಕ ವರ್ಷದಲ್ಲಿ ? 10 ಕೋಟಿ ಲಾಭ ಗಳಿಸುವ ನಿರೀಕ್ಷೆ ಇದೆ ಎಂದರು.

### ದ್ರವರೂಪದ ಹಾಲಿಗೆ ಸೀಮಿತ

**2024-25ನೇ ರಲ್ಲಿ 1.5 ಲಕ್ಷ ಲಿಂಗ ನಿರ್ಧಾರಿತ ಕೃತಕ ಗರ್ಭಧಾರಣೆ ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದರು. ಪ್ರತಿ ವೀರ್ಯ ನಳಿಕೆ ಬೆಲೆ 250 ಆಗಿದೆ. ಇದರಲ್ಲಿ ಒಕ್ಕೂಟದಿಂದ 75 ಕೆಎಂಎಫ್‌ನಿಂದ 75 ಅನುದಾನ ನೀಡಲಿದ್ದು ಉತ್ಪಾದಕರು 100 ಮಾತ್ರ ಭರಿಸಬೇಕಿದೆ. ಇದರಲ್ಲಿ ಶೇ 90 ಕ್ಕಿಂತ ಹೆಚ್ಚು ಹೆಣ್ಣು ಕರುಗಳ ಜನನವಾಗುತ್ತಿದ್ದು ಉತ್ಪಾದಕರು ಹೆಚ್ಚಿನ ಸಂಖ್ಯೆಯಲ್ಲಿ ಇದರ ಉಪಯೋಗ ಪಡೆದುಕೊಳ್ಳುತ್ತಿದ್ದಾರೆ ಎಂದು ಮಾಹಿತಿ ನೀಡಿದರು. ಒಕ್ಕೂಟದ ದ್ರವರೂಪದ ಹಾಲಿಗೆ ಸೀಮಿತ ಮಾರುಕಟ್ಟೆ ಸೌಲಭ್ಯ ಇರುವುದನ್ನು ಪಶುಸಂಗೋಪನಾ ಸಚಿವರ ಗಮನಕ್ಕೆ ತರಲಾಗಿದೆ.**


ಉದಯವಾಹಿನಿ ಚಿತ್ರ

ಹಾಸನ ಹಾಲು ಒಕ್ಕೂಟದ ವ್ಯಾಪ್ತಿಯಲ್ಲಿ ಬರುವ ಹಾಸನ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳಲ್ಲಿ ಹಾಲಿನ ಸಂಘಗಳು ಇಲ್ಲದೇ ಇರುವ ಗ್ರಾಮಗಳನ್ನು ಗುರುತಿಸಿ, ಪ್ರತಿ ವರ್ಷ ಸುಮಾರು 100 ನೂತನ ಸಂಘಗಳನ್ನು ಸ್ಥಾಪಿಸುವ ಮೂಲಕ ಮುಂದಿನ 2-3 ವರ್ಷಗಳಲ್ಲಿ ಎಲ್ಲಾ ಗ್ರಾಮಗಳಲ್ಲಿಯೂ ಹಾಲಿನ ಉತ್ಪಾದಕ ಸಂಘಗಳನ್ನು ಸ್ಥಾಪಿಸಲು ಒಕ್ಕೂಟದಿಂದ ವಿಶೇಷ ಯೋಜನೆ ರೂಪಿಸಿದೆ. ಈ ವರ್ಷದಲ್ಲಿ ಸುಮಾರು 20 ನೂತನ ಸಂಘಗಳನ್ನು ಸ್ಥಾಪಿಸಲಾಗಿದೆ. ಇನ್ನೂ 50 ನೂತನ ಸಂಘಗಳ ಸ್ಥಾಪನೆಗೆ ಯೋಜಿಸಲಾಗಿದೆ ಎಂದರು.

ಗ್ರಾಮೀಣ ಶಾಲೆಗಳಲ್ಲಿ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಶೇ 90 ಕ್ಕಿಂತ ಹೆಚ್ಚಿನ ಅಂಕಗಳೊಂದಿಗೆ ತೇರ್ಗಡೆ ಹೊಂದಿದರುವ ಒಕ್ಕೂಟದ ವ್ಯಾಪ್ತಿಯ ಹಾಲು ಉತ್ಪಾದಕರ ಸಂಘಗಳ ಸದಸ್ಯರ ಮಕ್ಕಳು ಹಾಗೂ ಪಿ.ಯು.ಸಿ. ನಂತರದ ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮುಂದುವರಿಸಿರುವ ವಿದ್ಯಾರ್ಥಿಗಳಿಗೆ ಹಾಮೂಲ್ ರೈತ ಕಲ್ಯಾಣ ಟ್ರಸ್ಟ್ ವತಿಯಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು. ಯಶಸ್ವಿನಿ ಆರೋಗ್ಯ ರಕ್ಷಾ ಯೋಜನೆಗೆ ನೋಂದಣಿಯಾಗಿರುವ ಒಕ್ಕೂಟದ ವ್ಯಾಪ್ತಿಯ ಹಾಲು ಉತ್ಪಾದಕರ ಕುಟುಂಬಗಳಿಗೆ ಒಕ್ಕೂಟದಿಂದ ಸಹಾಯಧನ ನೀಡುತ್ತಿದ್ದು, ಒಕ್ಕೂಟಕ್ಕೆ ನೀಡಲಾಗಿರುವ ಗುರಿಗಳನ್ವಯ ಪ್ರಗತಿ ಸಾಧಿಸಲು ಕ್ರಮ ಕೈಗೊಳ್ಳಲಾಗುವುದು. ಸಹಾಯಧನ ಮೊತ್ತವನ್ನು ಫಲಾನುಭವಿಗಳಿಗೆ ಒಕ್ಕೂಟದ ರೈತ ಕಲ್ಯಾಣ ಟ್ರಸ್ಟ್ ವತಿಯಿಂದ ಪಾವತಿಸಲಾಗುತ್ತಿದೆ ಎಂದು ಹೇಳಿದರು.

ಒಕ್ಕೂಟದ ವ್ಯಾಪ್ತಿಯ ಸಂಘಗಳು ಸ್ವಂತ ಕಟ್ಟಡ ಹೊಂದಲು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಒಕ್ಕೂಟದಿಂದ ಕಟ್ಟಡ ನಿರ್ಮಾಣ ಅನುದಾನ 3 ಲಕ್ಷ ನೀಡಲಾಗುತ್ತಿದ್ದು ಒಕ್ಕೂಟದ ವ್ಯಾಪ್ತಿಯ ಸಂಘಗಳ ದೈನಂದಿನ ವ್ಯವಹಾರ, ಹಾಲು ಶೇಖರಣೆ, ಗುಣಮಟ್ಟ ಪರೀಕ್ಷೆ ಮುಂತಾದವುಗಳನ್ನು ಕಂಪ್ಯೂಟರೀಕರಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಎಲ್ಲಾ 1,718 ಸಂಘಗಳಲ್ಲಿ ಎ.ಎಂ.ಸಿ.ಯು. ಘಟಕಗಳನ್ನು ಅಳವಡಿಸಿ, ಏಕರೂಪ ತಂತ್ರಾಂಶವನ್ನು ಅಳವಡಿಸುವ ಕಾರ್ಯ ಪ್ರಗತಿಯಲ್ಲಿದೆ ಎಂದರು.

**ಒಕ್ಕೂಟದ ಬಹುದಿನಗಳ ಬೇಡಿಕೆಯಾಗಿರುವ ಬೆಂಗಳೂರು ಮಾರುಕಟ್ಟೆಯನ್ನು ಹಾಸನ ಹಾಲು ಒಕ್ಕೂಟಕ್ಕೂ ಹಂಚಿಕೆ ಮಾಡಿಕೊಡಲು ಕೋರಲಾಗಿದೆ. ಇದರ ಬಗ್ಗೆ ಸರ್ಕಾರದ ವತಿಯಿಂದ ಕ್ರಮ ಕೈಗೊಳ್ಳಬೇಕಾಗಿದೆ**
**-ರೇವಣ್ಣ, ಶಾಸಕ**

**ಉತ್ಪನ್ನಗಳಿಗೆ ಬೇಡಿಕೆ ಕಡಿಮೆ**

# ಮಿನಿ ನ್ಯೂಸ್

## ಡಾ.ಅಂಬಿಕಾ ಹೀರವೆ ಡಾಕ್ಟರ್ ಆಫ್ ಫಾರ್ಮಸಿ ಪದವಿ ಪ್ರದಾನ

• ಉದಯವಾಹಿನಿ, ಚಿಂಚೋಳಿ

ಕಲಬುರಗಿಯ ಡಾ.ಅಂಬಿಕಾ ಹೀರವೆ ಅವರಿಗೆ ಮಾತೋಶ್ರೀ ತಾರಾದೇವಿ ರಾಂಪುರೆ ಇನ್ಸ್ಟಿಟ್ಯೂಟ್ ಆಫ್ ಫಾರ್ಮಾಸ್ಯುಟಿಕಲ್ ಸೈನ್ಸ್ ಕಾಲೇಜ್ ಕಲಬುರಗಿ ವತಿಯಿಂದ ಡಾಕ್ಟರ್ ಆಫ್ ಫಾರ್ಮಸಿ ಪದವಿಯನ್ನು ಪ್ರದಾನ ಮಾಡಲಾಯಿತು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ,ಕರ್ನಾಟಕ ಹಾಗೂ ಮಾತೋಶ್ರೀ ತಾರಾದೇವಿ ರಾಂಪುರೆ ಇನ್ಸ್ಟಿಟ್ಯೂಟ್ ಆಫ್ ಫಾರ್ಮಾಸ್ಯುಟಿಕಲ್ ಸೈನ್ಸ್ ಕಾಲೇಜ್ ಕಲಬುರಗಿ ವತಿಯಿಂದ ಡಾಕ್ಟರ್ ಆಫ್ ಫಾರ್ಮಸಿ ಪದವಿ ಯನ್ನು ಡಾ.ಅಂಬಿಕಾ ಹೀರವೆ ಅವರಿಗೆ ನೀಡಲಾಯಿತು,ಡಾ.ಅಂಬಿಕಾ ಹೀರಾವೆ ಅವರಿಗೆ ಡಾಕ್ಟರ್ ಆಫ್ ಫಾರ್ಮಸಿ ಪದವಿ ಯನ್ನು ನೀಡುವುದರಿಂದ ಪ್ರೀಯಾಂಕಾ ಆನಂದ ಗಢಾಳೆ ಶುಭಹಾರೈಸಿದ್ದಾರೆ.


ಉದಯವಾಹಿನಿ ಚಿತ್ರ

## 2025ರ ಅಕ್ಟೋಬರ್‌ಗೆ ಹು-ಧಾ ಬೈಪಾಸ್ ರಸ್ತೆ ಕಾಮಗಾರಿ ಪೂರ್ಣ

• ಉದಯವಾಹಿನಿ, ಹುಬ್ಬಳ್ಳಿ

ಪುಣೆ-ಬೆಂಗಳೂರು ರಾಷ್ಟ್ರೀಯ ಹೆದ್ದಾರಿ 48ರ ನೂಲ್ವಿ-ಬೆಳಗಲಿ ಕ್ರಾಸ್‌ನಲ್ಲಿ ರಸ್ತೆ ಕೆಳಸೇತುವೆ ನಿರ್ಮಾಣಕ್ಕೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಸೋಮವಾರ ಭೂಮಿಪೂಜೆ ನೆರವೇರಿಸಿದರು. ನಂತರ ಮಾತನಾಡಿದ ಪ್ರಲ್ಹಾದ ಜೋಶಿ, ಈ ಹಿಂದೆ ನಾಲ್ಕು ಪಥದ ಹೆದ್ದಾರಿ ಇದ್ದಾಗಲೇ ಸರ್ವಿಸ್ ರಸ್ತೆ, ಬ್ರಿಡ್ಜ್ ನಿರ್ಮಾಣ ಮಾಡಬೇಕಿತ್ತು. ಅದು ಆಗಲಿಲ್ಲ. 2014ರಲ್ಲಿ ನಿತಿನ್ ಗಡ್ಕರಿ ಅವರು ಸಚಿವರಾದ ನಂತರ ಆರು ಪಥದ ರಸ್ತೆ ನಿರ್ಮಾಣ ಮಾಡಲಾಯಿತು.

ರಸ್ತೆ ಅಗಲವಾದ ನಂತರ ವಾಹನಗಳ ವೇಗ, ಇನ್ನಿತರ ಕಾರಣಗಳಿಂದ ಅಪಘಾತಗಳ ಸಂಖ್ಯೆಯೂ ಹೆಚ್ಚಿತ್ತು. ಈ ನಿಟ್ಟಿನಲ್ಲಿ 12.44 ಕೋಟಿ ವೆಚ್ಚದಲ್ಲಿ ರಸ್ತೆ ಕೆಳ ಸೇತುವೆ ನಿರ್ಮಿಸಲಾಗುತ್ತಿದೆ' ಎಂದರು. 'ನಮ್ಮ ಮನವಿಗೆ ಸ್ಪಂದಿಸಿ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ಸೇತುವೆ ಮಂಜೂರು ಮಾಡಿದ್ದಾರೆ. ಕೆಳಸೇತುವೆಯ ಎತ್ತರವು 4.50 ಮೀಟರ್ ಬದಲಾಗಿ 5.50 ಮೀಟರ್ ಇರುವಂತೆ ನೋಡಿಕೊಳ್ಳಬೇಕು. ಇದರಿಂದ ರೈತರು, ಸಾರ್ವಜನಿಕರಿಗೆ ಅನುಕೂಲವಾಗುತ್ತದೆ' ಎಂದು ಹೇಳಿದರು. 'ಕುಂದಗೋಳ ಮತಕ್ಷೇತ್ರಕ್ಕೆ ಹೆಚ್ಚು ಅನುದಾನ ತಂದು ಅಭಿವೃದ್ಧಿ ಕೆಲಸಗಳನ್ನು ಮಾಡಲಾಗಿದೆ. ಮುಂಬರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಸೇರಿದಂತೆ ಇನ್ನಿತರ ಚುನಾವಣೆಗಳಲ್ಲಿ ಜನರು ಆಶೀರ್ವಾದ ಮಾಡಬೇಕು' ಎಂದರು.

## ಮಠ, ಮಾನ್ಯಗಳಿಗೆ ಪ್ರತ್ಯೇಕ ಅನುದಾನ ನೀಡಿ: ಈಶ್ವರಪ್ಪ

• ಉದಯವಾಹಿನಿ, ಜಾಲಹಳ್ಳಿ

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಬಜೆಟ್‌ನಲ್ಲಿ ಮಠ, ಮಾನ್ಯ ಅಭಿವೃದ್ಧಿಗೆ ಪ್ರತ್ಯೇಕ ಅನುದಾನ ಮೀಸಲಿಡಬೇಕು ಎಂದು ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪ ಹೇಳಿದರು. ಕಲಬುರಗಿ ವಿಭಾಗದ ಕಾಗಿನೆಲೆ ಕನಕಗುರು ಪೀಠ ತಿಂಥಣಿ ಬ್ರಿಜ್‌ನಲ್ಲಿ ಹಮ್ಮಿಕೊಂಡ ಹಾಲುಮತ ಸಂಸ್ಕೃತಿ ವೈಭವ ಕಾರ್ಯಕ್ರಮದಲ್ಲಿ ಸೋಮವಾರ ಮಾತನಾಡಿದರು. ಈ ಹಿಂದೆ ನಾನು ಅಧಿಕಾರದಲ್ಲಿರುವ ಸಂದರ್ಭದಲ್ಲಿ ರಾಜ್ಯ ಸರ್ಕಾರದಿಂದ ?238 ಕೋಟಿ ಅನುದಾನ ಮೀಸಲಿಟ್ಟು ಮಠ ಮಾನ್ಯಗಳ ಅಭಿವೃದ್ಧಿ ಕಾರ್ಯಗಳಿಗೆ ವಿನಿಯೋಗಿಸಿದ್ದೇನೆ. ಅದೇ ತರಹ ಈಗಿನ ರಾಜ್ಯ ಸರ್ಕಾರ ಕೂಡ ಬಜೆಟ್‌ನಲ್ಲಿಯೇ ಮೀಸಲಿಡಲು ಅಧಿಕಾರದಲ್ಲಿರುವ ನಾಯಕರು ಮನಸು ಮಾಡಬೇಕು ಎಂದರು. ಹಾಲುಮತ ಭಾಸ್ಕರ ಪ್ರಶಸ್ತಿಯನ್ನು ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಾಲುಮತ ಅಧ್ಯಯನ ಪೀಠದ ಸಂಚಾಲಕ ಎಫ್.ಟಿ. ಹಳ್ಳಿಕೇರಿ ಅವರಿಗೆ, ಕನಕ ರತ್ನ ಪ್ರಶಸ್ತಿಯನ್ನು ನ್ಯೂಸ್ ಫಸ್ಟ್ ಚಾನೆಲ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರವಿಕುಮಾರ್, ಸಮಾಜ ಸೇವೆಗಾಗಿ ನೀಡುವ ಸಿದ್ದಶ್ರೀ ಪ್ರಶಸ್ತಿಯನ್ನು ಬೆಂಗಳೂರಿನ ಕಾಳಿದಾಸ ಹೆಲ್ತ್ ಎಜುಕೇಶನ್ ಮತ್ತು ಅಹಿಲ್ಯಾ ಟ್ರಸ್ಟ್‌ನ ಡಾ.ವಿಜಯಲಕ್ಷ್ಮಿ ಡಾ.ಪರಮೇಶ ದಂಪತಿಗಳಿಗೆ ನೀಡಲಾಯಿತು.

## ವಿವಿ ಸಾಗರ ಜಲಾಶಯ 2ನೇ ಬಾರಿ ಕೋಡಿ ಜನರಲ್ಲಿ ಹೆಚ್ಚಾದ ಸಂಕ್ರಾಂತಿ ಸಂಭ್ರಮ

• ಉದಯವಾಹಿನಿ, ಹಿರಿಯೂರು

ಬರೋಬ್ಬರಿ 89 ವರ್ಷಗಳ ಕಾಲ ತುಂಬದಿದ್ದ ವಿವಿ ಸಾಗರ ಜಲಾಶಯ ಇದೀಗ ಕೇವಲ ಎರಡೂವರೆ ವರ್ಷದ ಅಂತರದಲ್ಲಿ ಎರಡನೇ ಬಾರಿ ಜಲಾಶಯ ಕೋಡಿ ಬಿದ್ದಿದ್ದು, ಸಾರ್ವಜನಿಕರ ಉತ್ಸಾಹವನ್ನು ನೂರ್ಮಡಿಗೊಳಿಸಿದೆ. 1933ರಲ್ಲಿ ಪ್ರಥಮ ಬಾರಿಗೆ ಜಲಾಶಯ ಕೋಡಿ ಬಿದ್ದಿತ್ತು. 89 ವರ್ಷಗಳ ನಂತರ 2022 ಸೆ. 2ರಂದು 2ನೇ ಬಾರಿಗೆ ಕೋಡಿ ಬಿದ್ದಿತ್ತು. ಈಗ 3ನೇ ಬಾರಿಗೆ ಜ. 12ರಂದು ಕೋಡಿಯಲ್ಲಿ ನೀರು ಹರಿದಿದೆ. ಇದು ಸಂಕ್ರಾಂತಿ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿದೆ. 1933 ಹಾಗೂ 2022ರಲ್ಲಿ ಜಲಾಶಯ ತನ್ನ ಗರಿಷ್ಠ ಮಟ್ಟ 135 ಅಡಿ ತಲುಪಿದ್ದರಿಂದ ಕೋಡಿಯಲ್ಲಿ ಅಪಾರ ಪ್ರಮಾಣದ ನೀರು ಹರಿದು ವೇದಾವತಿ ನದಿ ಸೇರಿತ್ತು. ಕೋಡಿಯಲ್ಲಿ ನೀರು ನರ್ತಿಸುತ್ತ ಸಾಗುವ ದೃಶ್ಯ ಮನಮೋಹಕವಾಗಿತ್ತು. ಪ್ರಸ್ತುತ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಪ್ರಯತ್ನದಿಂದ ಭದ್ರಾ ಜಲಾಶಯದಿಂದ ನೀರನ್ನು ಪಂಪ್ ಮಾಡಿ ಜಲಾಶಯವನ್ನು ತುಂಬಿಸಲಾಗಿದೆ. ಕೋಡಿಯಲ್ಲಿ ಹೆಚ್ಚೆಂದರೆ 690 ಕ್ಯುಸೆಕ್ ನೀರು ಹೊರಹೋಗಲಿದೆ. ಹೀಗಾಗಿ 2022ರಲ್ಲಿನ ನೀರು ಹರಿವಿನ ಸಂಭ್ರಮ ಈ ಬಾರಿ ಇರದು.

2017ರಲ್ಲಿ ಮಳೆಗಾಗಿ ಪರ್ಜನ್ಯ ಪೂಜೆ ಮಾಡಿಸಿದರೂ ವರುಣನ ಕೃಪೆಯಾಗದೆ ವಾಣಿವಿಲಾಸ ಜಲಾಶಯ ಪ್ರಥಮ ಬಾರಿಗೆ ಡೆಡ್ ಸ್ಟೋರೇಜ್ ತಲುಪಿತ್ತು.

ಜಿಲ್ಲೆಯ ಅಂತರ್ಜಲಕ್ಕೆ ಏಕಮಾತ್ರ ಆಸರೆ ಎಂದೇ ಗುರುತಿಸಲ್ಪಟ್ಟಿದ್ದ ಜಲಾಶಯ ಡೆಡ್ ಸ್ಟೋರೇಜ್ ತಲುಪಿದ್ದರಿಂದ ಒಂದೆಡೆ ಕುಡಿಯುವ ನೀರಿಗೆ ತತ್ವಾರ ಉಂಟಾದರೆ, ಮತ್ತೊಂದೆಡೆ ಅಚ್ಚುಕಟ್ಟು ಪ್ರದೇಶದ ಸಾವಿರಾರು ಎಕರೆ ತೆಂಗು, ಅಡಿಕೆ ತೋಟಗಳು ಕಣ್ಮರೆಯಾಗಿ, ನೂರಾರು ಕುಟುಂಬಗಳು ಊರು ತೊರೆದು ಬದುಕು ಅರಸಿ ದೊಡ್ಡ ದೊಡ್ಡ ನಗರಗಳಿಗೆ ವಲಸೆ ಹೋಗಿದ್ದವು.


ಉದಯವಾಹಿನಿ ಚಿತ್ರ

# ಇಸ್ರೇಲ್-ಹಮಾಸ್ ಕದನ ವಿರಾಮಕ್ಕೆ ಕರಡು ಸಿದ್ಧ

## ಇಸ್ರೇಲ್-ಹಮಾಸ್, ರಷ್ಯಾ-ಉಕ್ರೇನ್ ರಾಷ್ಟ್ರಗಳ ನಡುವೆ ಶಾಂತಿ ಸ್ಥಾಪನೆಗೆ ಜಾಗತಿಕ ನಾಯಕರು ನಿರಂತರ ಯತ್ನ

**ಕತಾರ್:** ಮಾತು, ಸಂಧಾನಗಳ ಮೂಲಕ ಬಗೆಹರಿಯದ ಸಮಸ್ಯೆ ಯಾವುದಾದರೂ ಇದೆಯಾ? ಜಗತ್ತಿನಾದ್ಯಂತ ಅಲ್ಲಲ್ಲಿ ನಡೆಯುತ್ತಿರುವ ಯುದ್ಧಗಳಿಗೂ ವಿರಾಮ ಹಾಕೋಕೆ ದೇಶ ದೇಶಗಳ ನಡುವೆ ಒಪ್ಪಂದ ಏರ್ಪಡುವುದು ಹೊಸದೇನೂ ಅಲ್ಲ. ಆದರೆ, ಜಿದ್ದಿಗೆ ಬಿದ್ದವರಂತೆ ನಿರಂತರವಾಗಿ ವರ್ಷಕ್ಕೂ ಹೆಚ್ಚು ಸಮಯದಿಂದ ಸಮರ ನಡೆಸುತ್ತಿರುವ ಇಸ್ರೇಲ್-ಹಮಾಸ್, ರಷ್ಯಾ-ಉಕ್ರೇನ್ ರಾಷ್ಟ್ರಗಳ ನಡುವೆ ಶಾಂತಿ ಸ್ಥಾಪನೆಗೆ ಜಾಗತಿಕ ನಾಯಕರು ನಿರಂತರ ಯತ್ನ ನಡೆಸಿದ್ದರು.

ಅದರ ಫಲವಾಗಿ ಇದೀಗ ಇಸ್ರೇಲ್ ಮತ್ತು ಹಮಾಸ್ ನಡುವೆ ಯುದ್ಧ ವಿರಾಮಕ್ಕೆ ಸಂಬಂಧಿಸಿದಂತೆ ಒಪ್ಪಂದದ ಅಂತಿಮ ಡ್ರಾಫ್ಟ್ ಸಿದ್ಧವಾಗಿದೆ. ಪ್ರಮುಖ ಸಂಧಾನಕಾರನಾಗಿರುವ ಕತಾರ್ ಈ ಕರಡನ್ನು ಸಿದ್ಧಪಡಿಸಿದೆ.

ಇಸ್ರೇಲ್ ಮತ್ತು ಹಮಾಸ್ ಯುದ್ಧ ವಿರಾಮ ಹಾಗೂ ಒತ್ತೆಯಾಳುಗಳ ಬಿಡುಗಡೆಗೆ ಸಂಬಂಧಿಸಿದಂತೆ ಕರಡನ್ನು ಸಿದ್ಧಪಡಿಸಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಅಮೆರಿಕ ಅಧ್ಯಕ್ಷ ಜೋ ಬೈಡನ್ ಅವರು ಇತ್ತೀಚೆಗಷ್ಟೇ ದೂರವಾಣಿ ಮೂಲಕ ಚರ್ಚೆ ಮಾಡಿದ್ದರು.

ಬೈಡನ್ ಅವಧಿಯಲ್ಲೇ ಮಧ್ಯಪ್ರಾಚ್ಯದಲ್ಲಿ ಶಾಂತಿ?

ಈಗಾಗಲೇ ಹತ್ತಾರು ತಿಂಗಳಿನಿಂದಲೂಸ ಅಮೆರಿಕ, ಈಜಿಪ್ಟ್ ಮತ್ತು ಕತಾರ್ ದೇಶಗಳ ಮಧ್ಯಸ್ಥಿಕೆಯಲ್ಲಿ ಮಾತುಕತೆ ನಡೆಯುತ್ತಿದೆ. ಯುದ್ಧಕ್ಕೆ ಬ್ರೇಕ್ ಹಾಕುವ ಒಪ್ಪಂದವು ಇನ್ನೇನು ಆಗಿಯೇ ಹೋಯ್ತು ಅನ್ನುವಷ್ಟರಲ್ಲಿ 'ಅಹಂ' ಎದುರಾಯಿತು. ಎಲ್ಲಾ ಪ್ರಯತ್ನಗಳೂ, ಮಾತುಗತೆಗಳೂ ಅರ್ಧಕ್ಕೆ ನಿಂತು ಹೋದವು. ಅತ್ತ ಇಸ್ರೇಲ್ ಕೂಡ ತಣ್ಣಗಾಗಲು ಬಯಸಲಿಲ್ಲ, ಇತ್ತ ಹಮಾಸ್ ಕೂಡ ಅಡಗಿ ನಡೆಸುವ ದಾಳಿಗಳನ್ನು ನಿಲ್ಲಿಸಲಿಲ್ಲ. ಇನ್ನು ಸಂಧಾನಕ್ಕೆ ಬಂದ ದೇಶಗಳು 'ಸುಮ್ಮನೆ ನಮಗ್ಯಾಕೆ ತಲೆನೋವು' ಅಂತ ಸುಮ್ಮನಾಗಿದ್ದವು.

ಇಸ್ರೇಲ್‌ನ ವಿದೇಶಿ ಗುಪ್ತಚರ ಸಂಸ್ಥೆಯ ಮುಖ್ಯಸ್ಥ ಡೇವಿಡ್ ಬಾರ್ನಿಯಾ ಮತ್ತು ಬೈಡನ್ ಅವರ ಉನ್ನತ ಸಲಹೆಗಾರ ಬ್ರೆಟ್ ಮೆಕ್‌ಗುರ್ಕ್ ಇಬ್ಬರೂ ಕತಾರ್ ರಾಜಧಾನಿ ದೋಹಾದಲ್ಲಿದ್ದಾರೆ. ಅಲ್ಲಿಯೂ ಒಪ್ಪಂದದ ಬಗ್ಗೆ ಅಂತಿಮ ಚರ್ಚೆಗಳು ನಡೆದಿವೆ. ಈಗ ಇಸ್ರೇಲ್, ಹಮಾಸ್ ಎರಡೂ ಕಡೆಯವರಿಗೆ ಪ್ರಸ್ತುತಪಡಿಸಬೇಕಾದ ಅಂತಿಮ



ವಿವರಗಳನ್ನು ಸಿದ್ಧಪಡಿಸಲಾಗಿದೆ. ಇನ್ನು ಟ್ರಂಪ್ ಅಧಿಕಾರ ಸ್ವೀಕಾರ ಜನವರಿ 20ರಂದು ನಡೆಯಲಿದ್ದು, ಅದಕ್ಕೂ ಮುಂಚೆಯೇ ಕದನ ವಿರಾಮ ಒಪ್ಪಂದಗಳು ಪೂರ್ಣಗೊಂಡರೆ, ಬೈಡನ್ ಪ್ರಯತ್ನವೂ ಇತಿಹಾಸದಲ್ಲಿ ಉಳಿಯಲಿದೆ.

ಸತತ ಹದಿನೈದು ತಿಂಗಳಿಂದ ನಡೆಯುತ್ತಿರುವ ಯುದ್ಧದಲ್ಲಿ ಒಂದೇ ಒಂದು ಬಾರಿ ಮಾತ್ರ ಅಲ್ಪಾವಧಿಗೆ ಕದನ ವಿರಾಮ ಕೈಗೂಡಿತ್ತು. ಬೂದಿ ಮುಚ್ಚಿದ ಕೆಂಡದಂತಿದ್ದ ಆ ಕದನ ವಿರಾಮವು ಮತ್ತೆ ಧಕ್ಕನೆ ಹೊತ್ತಿ ಉರಿಯಲು ಶುರುವಾಯಿತು. ಆ ಬೆಂಕಿಯು ಈವರೆಗೂ ಆರಿಸಲು ಸಾಧ್ಯವಾಗಿಲ್ಲ. ಈಗ ಕತಾರ್ ಸಿದ್ಧಪಡಿಸಿರುವ ಒಪ್ಪಂದವು ಇಸ್ರೇಲ್ ಒಂದು ಹಂತದ ಯುದ್ಧವಿರಾಮ, ಒತ್ತೆಯಾಳುಗಳ ಬಿಡುಗಡೆಗೆ ಸಿದ್ಧವಿದೆ. ಆದರೆ, ಹಮಾಸ್ ಇಸ್ರೇಲ್ ತನ್ನ ಸೇನೆಯನ್ನು ಸಂಪೂರ್ಣವಾಗಿ ಹಿಂತೆಗೆಯುವಂತೆ ಒತ್ತಾಯಿಸುತ್ತಿದೆ.

2023ರ ಅಕ್ಟೋಬರ್‌ನಲ್ಲಿ ಹಮಾಸ್ ಬಂಡುಕೋರರು ಇಸ್ರೇಲ್‌ನ ಗಡಿಯೊಳಕ್ಕೆ ನುಗ್ಗಿ ಮನಬಂದಂತೆ ಸಿಕ್ಕ ಸಿಕ್ಕವರ ಮೇಲೆ ಗುಂಡು ಹಾರಿಸಿದ್ದರು. ಸುಮಾರು 1,200 ಜನರ ಹತ್ಯೆ ನಡೆದಿತ್ತು ಹಾಗೂ 250 ಜನರನ್ನು ಒತ್ತೆಯಾಳುಗಳನ್ನಾಗಿ ಮಾಡಿಕೊಂಡಿದ್ದರು.

ಅದರ ಬೆನ್ನಲ್ಲೇ ಇಸ್ರೇಲ್ ಪಡೆಗಳು ಗಾಜಾ ಮೇಲೆ ಆಕ್ರಮ ಶುರು ಮಾಡಿತ್ತು. ಈವರೆಗೂ ಯುದ್ಧದಿಂದ ಗಾಜಾದಲ್ಲಿ 46 ಸಾವಿರಕ್ಕೂ ಹೆಚ್ಚು ಜನರು ಪ್ರಾಣ ಕಳೆದುಕೊಂಡಿದ್ದಾರೆ.

### ಗೋಪ್ಯ ಮಾತುಕತೆ

**ದೋಹಾದಲ್ಲಿ ಮಧ್ಯರಾತ್ರಿ ಮಾತುಕತೆ ಯುದ್ಧ ವಿರಾಮ ಆಗೋಕೆ ಏನೆಲ್ಲಾ ನಿಯಮಗಳಿಗೆ ಹಮಾಸ್ ಮತ್ತು ಇಸ್ರೇಲ್ ಒಪ್ಪಿಕೊಳ್ಳಬೇಕು, ಯಾವುದು ಇರಬೇಕು, ಯಾವುದನ್ನು ತೆಗೆಯಬೇಕು ಅನ್ನೋ ಎಲ್ಲಾ ಅಂಶಗಳ ಬಗ್ಗೆಯೂ ಮಧ್ಯರಾತ್ರಿ ಮಾತುಕತೆ ನಡೆದಿದೆ. ಕತಾರ್‌ನ ರಾಜಧಾನಿ ದೋಹಾದಲ್ಲಿ ಇಸ್ರೇಲ್‌ನ ಗುಪ್ತಚರ ಮುಖ್ಯಸ್ಥ, ನಿಯೋಜಿತ ಅಧ್ಯಕ್ಷ ಟ್ರಂಪ್ ಅವರ ಮಧ್ಯಪ್ರಾಚ್ಯದ ರಾಯಭಾರಿ ಹಾಗೂ ಕತಾರ್‌ನ ಪ್ರಧಾನಿ ಒಟ್ಟಿಗೆ ಸೇರಿ ಗೋಪ್ಯ ಮಾತುಕತೆಯನ್ನು ನಡೆಸಿದರು. ಅನಂತರ ಯುದ್ಧ ವಿರಾಮದ ಅಂತಿಮ ಕರಡು ಸಿದ್ಧವಾಯಿತು.**

**ಗಾಜಾದಲ್ಲಿ ಒತ್ತೆಯಾಳುಗಳ ಬಿಡುಗಡೆ ಹಾಗೂ ಕದನ ವಿರಾಮಕ್ಕೆ ಇನ್ನಿಲ್ಲದಂತೆ ಅಮೆರಿಕದ ಅಧಿಕಾರಿಗಳು ಯತ್ನ ನಡೆಸಿದ್ದಾರೆ. ಜನವರಿ 20ರೊಳಗೆ ಆ ಎಲ್ಲವೂ ಮುಗಿಯುವಂತೆ ಸತತ ಪ್ರಯತ್ನದಲ್ಲಿದ್ದಾರೆ. ಪ್ಯಾಲೆಸ್ತೀನ್‌ನಲ್ಲಿ ಇಸ್ರೇಲ್ ಕಾರ್ಯಾಚರಣೆಯನ್ನು ನಿಲ್ಲಿಸುವ ಕುರಿತು ಪ್ರಧಾನಿ ನೆತನ್ಯಾಹು ಅವರ ಮುಂದೆ ಅಮೆರಿಕ ಅಧ್ಯಕ್ಷ ಬೈಡನ್ ಪ್ರಸ್ತಾಪ ಇಟ್ಟಿದ್ದರು. ಇದರ ಜೊತೆಗೆ ಗಾಜಾದಲ್ಲಿ ಕದಮ ವಿರಾಮದ ಜೊತೆಗೆ ಅಲ್ಲಿನ ಜನರಿಗೆ ಅಗತ್ಯ ನೆರವು ತಲುಪಿಸುವುದನ್ನು ಹೆಚ್ಚಿಸಲು ನೆರವಾಗುವಂತೆ ಕೋರಿದ್ದರು.**

---

# ರಷ್ಯಾ ಅಧ್ಯಕ್ಷರನ್ನು ಕಾಣಲು ಟ್ರಂಪ್ ಅವರಿಗೇಕೆ ಇಷ್ಟು ತವಕ

**ವಾಷಿಂಗ್ಟನ್:** ಅಮೆರಿಕದ ಅಧ್ಯಕ್ಷರಾಗಿ ಅಧಿಕೃತವಾಗಿ ಅಧಿಕಾರ ಸ್ವೀಕರಿಸಿದ ಮೇಲೆ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಆದ್ಯತೆಯ ಮೇರೆಗೆ ಭೇಟಿಯಾಗುವುದಾಗಿ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ರಷ್ಯಾ-ಉಕ್ರೇನ್ ಯುದ್ಧ ಕೊನೆಗಾಣಿಸುವ ದೃಷ್ಟಿಯಿಂದ ನಾನು ತುರ್ತಾಗಿ ಪುಟಿನ್ ಅವರನ್ನು ಭೇಟಿಯಾಗಬೇಕಿದೆ.. ಎಂದು ಟ್ರಂಪ್ ಹೇಳಿರುವುದು ಇದೀಗ ಜಾಗತಿಕವಾಗಿ ಗಮನ ಸೆಳೆದಿದೆ.

ಅಧ್ಯಕ್ಷನಾಗಿ ಅಧಿಕೃತವಾಗಿ ಅಧಿಕಾರ ಸ್ವೀಕರಿಸುತ್ತಿದ್ದಂತೇ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗಿನ ಭೇಟಿಗಾಗಿ ಸಿದ್ಧತೆ ಆರಂಭಿಸುತ್ತೇನೆ. ರಷ್ಯಾ-ಉಕ್ರೇನ್ ಸುದೀರ್ಘ ಯುದ್ಧವನ್ನು ಕೊನಗಾಣಿಸಲು ಇದು ಸಕಾಲ ಎಂಬುದು ನನ್ನ ಭಾವನೆ. ಹೀಗಾಗಿ ಪುಟಿನ್ ಅವರನ್ನು ಭೇಟಿ ಮಾಡುವುದು ನನ್ನ ಆದ್ಯತಾ ಪಟ್ಟಿಯಲ್ಲಿ ಮೊದಲ ಸ್ಥಾನ ಪಡೆದುಕೊಂಡಿದೆ.. ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಯುದ್ಧವನ್ನು ಕೊನೆಗಾಣಿಸಲು ನಿಮ್ಮ ಕಾರ್ಯತಂತ್ರವೇನು ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಡೊನಾಲ್ಡ್ ಟ್ರಂಪ್, ಪುಟಿನ್ ಅವರನ್ನು ಭೇಟಿ ಮಾಡಿ ಮಾತನಾಡುವುದೇ ತಮ್ಮ ಕಾರ್ಯತಂತ್ರ ಎಂದು ಸೂಚ್ಯವಾಗಿ ಹೇಳಿದರು. ಯುದ್ಧವನ್ನು ಕೊನೆಗಾಣಿಸುವ ಅಂತಿಮ ನಿರ್ಧಾರವನ್ನು ಪುಟಿನ್ ಅವರೇ ಕೈಗೊಳ್ಳಬೇಕು ಎಂದೂ ಟ್ರಂಪ್ ಇದೇ ವೇಳೆ ಸ್ಪಷ್ಟಪಡಿಸಿದರು. ರಷ್ಯಾ 2022ರಿಂದ ಉಕ್ರೇನ್ ಜೊತೆ ಯುದ್ಧದಲ್ಲಿ ನಿರತವಾಗಿದೆ. ಆದರೆ ಇದು ಯುದ್ಧವನ್ನು ಕೊನೆಗಾಣಿಸಲು ಸಕಾಲ. ನಾನು ಪುಟಿನ್ ಜೊತೆ ಮಾತನಾಡಲು ಸಿದ್ಧ ಎಂದು ಹಲವಾರು ಬಾರಿ ಹೇಳಿದ್ದೇನೆ. ಈಗಲೂ ಪುಟಿನ್ ಭೇಟಿ ನನ್ನ ಪ್ರಾಥಮಿಕ ಆದ್ಯತೆ.. ಎಂದು ಡೊನಾಲ್ಡ್ ಟ್ರಂಪ್ ನುಡಿದರು. ಕೆಲವು ಮಹತ್ತರವಾದ ನಿರ್ಣಯಗಳನ್ನು ಕೈಗೊಳ್ಳಲು ನೀವು ಅಧ್ಯಕ್ಷ ಕಚೇರಿಯಲ್ಲಿ ಇರಬೇಕಾಗುತ್ತದೆ. ಜ.(20-ಸೋಮವಾರ)ರಂದು ನಾನು ಅಧ್ಯಕ್ಷನಾಗಿ ಅಧಿಕೃತವಾಗಿ ಅಧಿಕಾರ ಸ್ವೀಕರಿಸಲಿದ್ದು, ಕೂಡಲೇ ಪುಟಿನ್ ಭೇಟಿಗೆ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡುತ್ತೇನೆ.. ಎಂದು ಚುನಾಯಿತ ಅಧ್ಯಕ್ಷರು ತಿಳಿಸಿದರು.

ಇನ್ನು ಮುಂದಿನ ವಾರದಲ್ಲೇ ಡೊನಾಲ್ಡ್ ಟ್ರಂಪ್ ಮತ್ತು ವ್ಲಾಡಿಮಿರ್ ಪುಟಿನ್ ನಡುವೆ ದೂರವಾಣಿ ಮಾತುಕತೆ ನಡೆಯುವ ಸಾಧ್ಯತೆ ಇದ್ದು, ರಷ್ಯಾ-ಉಕ್ರೇನ್ ಯುದ್ಧ ಕೊನೆಯಾಗುವ ಎಲ್ಲಾ ಲಕ್ಷಣಗಳು ಗೋಚರಿಸುತ್ತಿವೆ ಎಂದು ಇನ್ನೇನು ಕೆಲವೇ ದಿನಗಳಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಪಟ್ಟ ಅಲಂಕರಿಸಲಿರುವ ಯುಎಸ್ ಕಾಂಗ್ರೆಸ್‌ಮನ್ ಮೈಕ್ ವಾಲ್ಟ್ಜ ಹೇಳಿದ್ದಾರೆ.



- **ತುರ್ತಾಗಿ ಪುಟಿನ್ ಭೇಟಿ ಮಾಡುವುದಾಗಿ ಹೇಳಿದ ಟ್ರಂಪ್**
- **ರಷ್ಯಾ-ಉಕ್ರೇನ್ ಯುದ್ಧ ನಿಲ್ಲಿಸುವ ಪ್ರಯತ್ನ ಎಂದ ಟ್ರಂಪ್**
- **ಅಧಿಕಾರ ಸ್ವೀಕರಿಸುತ್ತಿದ್ದಂತೇ ಪುಟಿನ್‌ಗೆ ಕರೆ ಮಾಡಲಿರುವ ಟ್ರಂಪ್**
- **ಡೊನಾಲ್ಡ್ ಟ್ರಂಪ್-ವ್ಲಾಡಿಮಿರ್ ಪುಟಿನ್ ನಡುವೆ ಗಟ್ಟಿಯಾಗಲಿದೆ ಸ್ನೇಹ?**

---

# ಕುಂಭಮೇಳ ನಡೆಸಿದ್ರೆ ಹುಷಾರ್ ಎಂದು ಯೋಗಿ ಆದಿತ್ಯನಾಥ್‌ಗೆ ಬೆದರಿಕೆ ಹಾಕಿದ್ದವನ ಬಂಧನ

**ಉತ್ತರ ಪ್ರದೇಶ:** ಸಿಎಂ ಯೋಗಿ ಆದಿತ್ಯನಾಥ್ ಅವರ ಹೆಸರನ್ನು ಉಲ್ಲೇಖಿಸಿ ಮಹಾಕುಂಭ ಮೇಳದ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಆಕ್ಷೇಪಾರ್ಹ ಹೇಳಿಕೆ ನೀಡಿದ್ದ ವ್ಯಕ್ತಿಯೊಬ್ಬ ಇದೀಗ ಪೊಲೀಸರ ಅತಿಥಿಯಾಗಿದ್ದಾನೆ.

ಕುಂಭಮೇಳ ನಡೆದರೆ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಶಿರಚ್ಛೇದ ಮಾಡುವುದಾಗಿ ಸಾಮಾಜಿಕ ಜಾಲತಾಣಗಳಲ್ಲಿ ಬೆದರಿಕೆ ಹಾಕಿದ್ದ ಮಜನ್ ರಾಝಾ ಎಂಬಾತನನ್ನು ರಾಯ್ ಬರೇಲಿ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಮಜನ್ ರಾಝಾ ತನ್ನ ತಪ್ಪನ್ನು ಒಪ್ಪಿ, ಕುಂಟುತ್ತಾ ಕ್ಷಮೆಯಾಚಿಸುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ. ಹಿಂದೂ ಕಾರ್ಯಕರ್ತರು ನೀಡಿದ ದೂರಿನ ಆಧಾರದ ಮೇಲೆ, ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಆಕ್ಷೇಪಾರ್ಹ ಪೋಸ್ಟ್ ಮಾಡುವ ಮೂಲಕ ಆರೋಪಿ ಹಿಂದೂ ಸಮುದಾಯದ ನಂಬಿಕೆಗೆ ಧಕ್ಕೆ ತಂದಿದ್ದಾನೆ.

ಸಾಮಾಜಿಕ ಜಾಲತಾಣ ಬಳಸಿಕೊಂಡು



ಸನಾತನ ಧರ್ಮ, ರಾಮಮಂದಿರ ಹಾಗೂ ಮಹಾಕುಂಭ ಮೇಳದ ಬಗ್ಗೆ ಆಕ್ಷೇಪಾರ್ಹ ಮತ್ತು ಪ್ರಚೋದನಕಾರಿ ಕಾಮೆಂಟ್‌ಗಳನ್ನು ಮಾಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರೇಮನಗರ ಠಾಣೆಯ ಪೊಲೀಸರ ವಿಶೇಷ ತಂಡ ಆರೋಪಿಯನ್ನು ಬಂಧಿಸಿದ್ದಾರೆ ಎಂದು ಬರೇಲಿಯ ಪೊಲೀಸ್ ವರಿಷ್ಠಾಧಿಕಾರಿ ಮನುಷ್ ಪರೀಕ್ ತಿಳಿಸಿದ್ದಾರೆ. ಸದ್ಯ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಕುಂಭಮೇಳ 144 ವರ್ಷಕ್ಕೊಮ್ಮೆ ನಡೆಯುವ ವಿಶ್ವದ ಅತಿ ದೊಡ್ಡ ಧಾರ್ಮಿಕ ಉತ್ಸವ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಜ.13ರಿಂದ ಮಹಾ ಕುಂಭಮೇಳ ಆರಂಭವಾಗಲಿದೆ.

---

# ದೆಹಲಿ ಸಿಎಂ ಅತಿಶಿ ವಿರುದ್ಧ ಎಫ್‌ಐಆರ್

ನವದೆಹಲಿ: ವಿಧಾನಸಭಾ ಚುನಾವಣೆಗೆ ಮುನ್ನ ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಿದ್ದಕ್ಕಾಗಿ ದೆಹಲಿ ಮುಖ್ಯಮಂತ್ರಿ ಅತಿಶಿ ವಿರುದ್ಧ ಚುನಾವಣಾಧಿಕಾರಿ ಎಫ್‌ಐಆರ್ ದಾಖಲಿಸಿದ್ದಾರೆ.

ಮುಖ್ಯಮಂತ್ರಿ ಅತಿಶಿ ಸರ್ಕಾರಿ ವಾಹನವನ್ನು ವೈಯಕ್ತಿಕ ಉದ್ದೇಶಕ್ಕೆ ಬಳಸಿಕೊಂಡಿದ್ದಾರೆ ಎಂಬ ಆರೋಪದ ಹಿನ್ನಲೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಜನವರಿ 7 ರಂದು ದೆಹಲಿ ಚುನಾವಣೆ ಘೋಷಣೆಯಾದ ನಂತರ, ಸರ್ಕಾರಿ ವಾಹನವು ಚುನಾವಣಾ ಪ್ರಚಾರ ಸಾಮಗ್ರಿಗಳನ್ನು ಎಎಪಿಯ ಚುನಾವಣಾ ಕಚೇರಿಗೆ ತಲುಪಿಸುತ್ತಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಈ ಕುರಿತು ಕಲ್ಕಾಜಿ ನಿವಾಸಿ ಕೆ.ಎಸ್‌ರ.ದುಗ್ಗಲ್ ಅವರು ಗೋವಿಂದಪುರಿ ಚುನಾವಣಾ ಆಯೋಗಕ್ಕೆ ಪ್ರತ್ಯೇಕ ದೂರು ಸಲ್ಲಿಸಿದ್ದಾರೆ. ಆಗ್ನೇಯ ವಿಭಾಗದ ಕಾರ್ಯನಿರ್ವಾಹಕ ಎಂಜಿನಿಯರ್ ಸಂಜಯ್ ಕುಮಾರ್ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳುವಂತೆ ಚುನಾವಣಾಧಿಕಾರಿ ಪೊಲೀಸರಿಗೆ ಸೂಚಿಸಿದ್ದಾರೆ.



ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ

ಚುನಾವಣಾ ಆಯೋಗವು ಜನವರಿ 7 ರಂದು ದೆಹಲಿ ಚುನಾವಣೆಯನ್ನು ಘೋಷಿಸುವುದರೊಂದಿಗೆ, ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿದೆ.

ಚುನಾವಣಾ ಸಮಯದಲ್ಲಿ ಪ್ರಚಾರ, ಚುನಾವಣಾ ಪ್ರಚಾರ ಅಥವಾ ಚುನಾವಣಾ ಸಂಬಂಧಿತ ಪ್ರಯಾಣಕ್ಕಾಗಿ ಅಧಿಕೃತ ಅಥವಾ ಸರ್ಕಾರಿ ವಾಹನಗಳನ್ನು ಬಳಸುವುದನ್ನು ಕೋಡ್ ನಿಷೇಧಿಸುತ್ತದೆ.

---

# ಸ್ವಂತ ಮಗಳ ಮೇಲೆ ಕಣ್ಣು ಹಾಕಿದ ಪತಿ

## ಮರ್ಮಾಂಗವನ್ನು ಜಜ್ಜಿ ಕೊಂದ ಪತ್ನಿಯರು

**ತೆಲಂಗಾಣ:** ತನ್ನ ಮಗಳ ಮೇಲೆಯೇ ಕಣ್ಣು ಹಾಕಿದ ವ್ಯಕ್ತಿಯನ್ನು ಆತನ ಇಬ್ಬರು ಪತ್ನಿಯರೇ ಸೇರಿ ಕೊಲೆಗೈದ ಘಟನೆ ತೆಲಂಗಾಣದ ಸೂರ್ಯಪೇಟೆಯಲ್ಲಿ ನಡೆದಿದೆ.

ಜಿಲ್ಲೆಯ ಚಿವ್ವೆನ್ನಾ ತಾಲ್ಲೂಕಿನ ಹಳ್ಳಿಯಲ್ಲಿ ಸೋಮವಾರ ನಸುಕಿನ ಜಾವ ಈ ಘಟನೆ ನಡೆದಿದೆ. ಕೊಲೆಯಾದ ವ್ಯಕ್ತಿಯನ್ನು 43 ವರ್ಷ, ವೃತ್ತಿಯಲ್ಲಿ ಚಾಲಕ ಎಂದು ಗುರುತಿಸಲಾಗಿದೆ.

ಹಲವು ವರ್ಷಗಳ ಹಿಂದೆ ನಲ್ಗೊಂಡ ಜಿಲ್ಲೆಯ ಯುವತಿಯನ್ನು ಮದು ವೆಯಾಗಿದ್ದ. ದಂಪತಿಗೆ ಇಬ್ಬರು ಹೆಣ್ಣು ಮಕ್ಕಳು ಜನಿಸಿದ್ದರು.

ಗಂಡು ಮಗುವಿನ ಮೋಹದಲ್ಲಿ ತನ್ನ ಪತ್ನಿಯ ತಂಗಿಯನ್ನೂ ಮದುವೆಯಾಗಿದ್ದಾನೆ. ಆಕೆಗೆ ಗಂಡು ಮಗು ಜನಿಸಿದ್ದು, ಎಲ್ಲರೂ ಒಂದೇ ಕುಟುಂಬದಲ್ಲಿ ಒಟ್ಟಿಗೆ ನೆಲೆಸಿದ್ದರು.

ಕೆಲವು ತಿಂಗಳ ಹಿಂದೆ ತನ್ನ ಮೊದಲ ಪತ್ನಿಯ ಕಿರಿ ಮಗಳು ಅನಾರೋಗ್ಯಕ್ಕೆ ತುತ್ತಾಗಿ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಳು. ಹಿರಿ ಮಗಳು ಹೈದರಾಬಾದ್ನಲ್ಲಿ ಉನ್ನತ ವ್ಯಾಸಂಗ ಮಾಡುತ್ತಿದ್ದಾಳೆ. ಕಿರಿ ಮಗಳ ಸಾವಿನ ನಂತರ ಆರೋಪಿ ಮದ್ಯದ ಚಟಕ್ಕೆ ದಾಸನಾಗಿದ್ದ. ಅಂದಿನಿಂದ ಆತನ ನಡವಳಿಕೆ ಬದಲಾಗುತ್ತಾ ಸಾಗಿದೆ.



ಮಗಳೊಂದಿಗೆ ತಂದೆ ಅನುಚಿತ ವರ್ತನೆ

ಇಬ್ಬರು ಪತ್ನಿಯರಿಗೆ ಮಾನಸಿಕ, ದೈಹಿಕ ಹಿಂಸೆ ನೀಡಲು ಪ್ರಾರಂಭಿಸಿದ. ಇದರಿಂದ ಪತ್ನಿಯರು ಸಾಕಷ್ಟು ಮನನೊಂದಿದ್ದರು.

ಹಿರಿ ಮಗಳ ಜೊತೆ ಅಸಭ್ಯವಾಗಿ ವರ್ತಿಸಲು ಆರಂಭಿಸಿದ್ದಾನೆ.

ದಿನ ಕಳೆದಂತೆ ಆಕೆಗೆ ಲೈಂಗಿಕ ಕಿರುಕುಳ ನೀಡಲೂ ಶುರು ಮಾಡಿದ್ದಾನೆ. ಹೈದರಾಬಾದ್ನಲ್ಲಿ ನೆಲೆಸಿದ್ದ ಮಗಳು ಸಂಕ್ರಾಂತಿ ಹಬ್ಬಕ್ಕೆ ಸಿಕ್ಕ ರಜೆಗಾಗಿ ಊರಿಗೆ ಬಂದಿದ್ದಳು. ಹೀಗೆ ಬಂದ ಮಗಳೊಂದಿಗೆ ತಂದೆ ಅನುಚಿತವಾಗಿ ವರ್ತಿಸಲು ಶುರು ಮಾಡಿದ್ದಾನೆ. ಇದು ತಪ್ಪು, ನಿಮ ನಡವಳಿಕೆ ಬದಲಾಯಿಸಿಕೊಳ್ಳಿ ಎಂದು ಪತ್ನಿಯರು ಅಂಗಲಾಚಿ ಬೇಡಿಕೊಂಡರೂ ಆರೋಪಿ ನಿರ್ಲಕ್ಷಿಸಿದ್ದಾನೆ. ಇದರಿಂದ ಬೇಸರಗೊಂಡು ಒಂದು ದಿನ ತಾಯಿ ಮತ್ತು ಮಗಳು ಆತಹತ್ಯೆ ಮಾಡಿಕೊಳ್ಳಲು ಆಲೋಚಿಸಿದ್ದರು.

ಆದರೆ ಅದೇ ರಾತ್ರಿ ಪತಿ ತನ್ನ ಮಗಳೊಂದಿಗೆ ಅಸಭ್ಯವಾಗಿ ವರ್ತಿಸಲು ಶುರು ಮಾಡಿದ್ದ. ಇದರಿಂದ ಕೋಪಗೊಂಡ ಇಬ್ಬರು ಪತ್ನಿಯರು ಪತಿಯ ಮರ್ಮಾಂಗಕ್ಕೆ ಕಲ್ಲಿನಿಂದ ಹೊಡೆದು ಕೊಲೆ ಮಾಡಿದ್ದಾರೆ.

ಪೊಲೀಸರು ಘಟನೆ ನಡೆದ ಸ್ಥಳಕ್ಕೆ ದೌಡಾಯಿಸಿ ಪ್ರಾಥಮಿಕ ಮಾಹಿತಿ ಸಂಗ್ರಹಿಸಿ ತನಿಖೆ ಕೈಗೊಂಡಿದ್ದಾರೆ. ಮೃತನ ಸಹೋದರಿ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಾಗಿದೆ ಎಂದು ಸಬ್ ಇನ್ಸ್‌ಪೆಕ್ಟರ್ ವಿ. ಮಹೇಶ್ ತಿಳಿಸಿದ್ದಾರೆ.

---

# ಉದ್ಯೋಗಿಗಳ ಮೇಲೆ ಡಿಟೆಕ್ಟೀವ್‌ಗಳನ್ನು ಬಿಟ್ಟ ಖಾಸಗಿ ಸಂಸ್ಥೆಗಳು

**ಬರ್ಲಿನ್ :** ಸಂಸ್ಥೆಯ ಮಾನವ ಸಂಪನ್ಮೂಲ ನಿಯಮಗಳ ಪ್ರಕಾರ ದಕ್ಕ ಬೇಕಾದ ಅನಾರೋಗ್ಯದ ರಜೆಯನ್ನು ಉದ್ಯೋಗಿಗಳು ಬಳಸಿಕೊಂಡರೆ, ಅವರ ಹಿಂದೆ ಬೇಹುಗಾರಿಕೆಯನ್ನು ಖಾಸಗಿ ಸಂಸ್ಥೆಗಳು ಮಾಡುತ್ತಿವೆ ಎಂದು ಸೌತ್ ಮಾರ್ನಿಂಗ್ ಪೋಸ್ಟ್ ವರದಿ ಮಾಡಿದೆ. ಆದರೆ, ಈ ಖಾಸಗಿ ಸಂಸ್ಥೆಗಳು ಭಾರತದಲ್ಲಿ ಆಪರೇಟ್ ಮಾಡುವ ಕಂಪೆನಿಗಳಲ್ಲ, ಬದಲಿಗೆ ಜರ್ಮನಿಯ ಸಂಸ್ಥೆಗಳು. ಭಾರತದ ಹೆಚ್ಚಿನ ಖಾಸಗಿ ಸಂಸ್ಥೆಗಳಲ್ಲಿ ಅರ್ಧ ದಿನದಿಂದ ಏಳು ದಿನದ ವರೆಗೆ ಏಕಕಾಲಕ್ಕೆ ತೆಗೆದುಕೊಳ್ಳಬಹುದು. ಇದು, ದೇಶದ ಅಂಗಡಿ ಮತ್ತು ಸಂಸ್ಥೆಯ ಕಾಯಿದೆ.

ಆದರೆ, ಜರ್ಮನಿಯಲ್ಲಿ ಈ ರೀತಿಯ ಕಾಯಿದೆ ಇಲ್ಲ. ಹಾಗಾಗಿ, ಉದ್ಯೋಗಿಗಳು ಸಿಕ್ ಲೀವ್ ಅನ್ನು ದೀರ್ಘಾವಧಿಗೆ ತೆಗೆದುಕೊಂಡರೆ, ಅವರು ಸಲ್ಲಿಸಿರುವ ಅನಾರೋಗ್ಯದ ರಜೆ ನ್ಯಾಯಸಮ್ಮತವಾಗಿ ಇದೆಯಾ ಎನ್ನುವುದನ್ನು ಪರೀಕ್ಷಿಸಲು ಬೇಹುಗಾರರನ್ನು ಬಿಟ್ಟಿವೆ. ಆರ್ಥಿಕತೆ ಹಿನ್ನಡೆಯನ್ನು ಜರ್ಮನಿಯಲ್ಲಿ ಉದ್ಯೋಗಿಗಳ ಈ ಸಿಕ್ ಲೀವ್, ಸಂಸ್ಥೆಯ ಅಭಿವೃದ್ದಿಗೆ ಹೊಡೆತ ಬೀಳುತ್ತಿರುವ ಹಿನ್ನಲೆಯಲ್ಲಿ, ಹಲವು ಖಾಸಗಿ ಸಂಸ್ಥೆಗಳು ಈ ಕೆಲಸವನ್ನು ಆರಂಭಿಸಿದೆ ಎಂದು ಮಾರ್ನಿಂಗ್ ಪೋಸ್ಟ್ ತನ್ನ ವರದಿಯಲ್ಲಿ ಉಲ್ಲೇಖಿಸಿದೆ.

ಜರ್ಮನ್ ಸಂಸ್ಥೆಗಳ ಈ ಕ್ರಮ ನ್ಯಾಯಸಮ್ಮತವೇ ಎನ್ನುವುದು ಪ್ರಮುಖವಾಗಿ ಚೀನಾದ ಸಾಮಾಜಿಕ ಜಾಲತಾಣದಲ್ಲಿ ಬಹುದೊಡ್ಡ ಚರ್ಚೆಯ ವಿಷಯವಾಗಿದೆ. ಖಾಸಗಿ ಸಂಸ್ಥೆಗಳ ಹೆಚ್ಚುತ್ತಿರುವ ಈ ಬೇಡಿಕೆಯನ್ನೇ ಬಂಡವಾಳ ಮಾಡಿಕೊಂಡು, ಹಲವು ಏಜೆನ್ಸಿಗಳು ಬೇಹುಗಾರಿಕೆ ವೃತ್ತಿಯನ್ನು ಆರಂಭಿಸಿವೆ.

ಅಂತಹ ಒಂದು ಕಂಪೆನಿ ಒಂದು ಎಂದರೆ, ಜರ್ಮನಿಯ ಫ್ರಾಂಕ್ ಫರ್ಟ್ ಕೇಂದ್ರ ರೈಲ್ವೆ ನಿಲ್ದಾಣದ ಬಳಿ ಇರುವ ಲೆನ್ಸ್ ಗ್ರೂಪ್. ಸಿಕ್ ಲೀವ್ ಗಾಗಿ ಅರ್ಜಿ ಸಲ್ಲಿಸುತ್ತಿರುವ ಉದ್ಯೋಗಿಗಳ ಸಂಖ್ಯೆ, ಇತ್ತೀಚಿನ ದಿನಗಳಲ್ಲಿ ಗಣನೀಯವಾಗಿ ಏರುತ್ತಿರುವುದರಿಂದ, ಖಾಸಗಿ ಸಂಸ್ಥೆಗಳು ಡಿಟೆಕ್ಟೀವ್ ನಡೆಸಲು ಮುಂದಾಗಿವೆ.

ಆರ್ಥಿಕ ಸಹಕಾರ ಮತ್ತು ಅಭಿವೃದ್ದಿ ಸಂಸ್ಥೆಮಾಹಿತಿಯ ಪ್ರಕಾರ, ಕೆಲವೊಂದು ಸಂಸ್ಥೆಗಳಲ್ಲಿ ಉದ್ಯೋಗಿಗಳು 40 ರಿಂದ 100 ದಿನದವರೆಗೆ ಸಿಕ್ ಲೀವ್ ಅರ್ಜಿಯನ್ನು ವಾರ್ಷಿಕವಾಗಿ, ಮಾನವ ಸಂಪನ್ಮೂಲ ಇಲಾಖೆಗೆ ಸಲ್ಲಿಸಿದ್ದಾರೆ.

2023ರಲ್ಲಿ ಪ್ರಮುಖವಾಗಿ, ಜರ್ಮನಿ, ಇಟಲಿ, ಫ್ರಾನ್ಸ್ ಮತ್ತು ಸ್ಪೇನ್ ದೇಶದ ಉದ್ಯೋಗಿಗಳು ಶೇ. 6.8ರಷ್ಟು ಕೆಲಸದ ಅವಧಿಯಲ್ಲಿ ಸಿಕ್ ಲೀವ್ ನಿಂದಾಗಿ ತಪ್ಪಿಸಿಕೊಂಡಿದ್ದಾರೆ. ಇದು, ಒಟ್ಟಾರೆಯಾಗಿ ಕಂಪೆನಿಗಳ ರಫ್ತು ಬೇಡಿಕೆಯ ಚಟುವಟಿಕೆಗಳಿಗೆ ಭಾರೀ ಹಿನ್ನಡೆಯನ್ನು ತಂದೊಡ್ಡಿದೆ ಎನ್ನುವುದು ವರದಿಯಲ್ಲಿ ಉಲ್ಲೇಖವಾಗಿದೆ.



- **ಜರ್ಮನ್ ಸಂಸ್ಥೆಗಳ ಈ ಕ್ರಮ ನ್ಯಾಯಸಮ್ಮತವೇ ಎನ್ನುವುದು ಸಾಮಾಜಿಕ ಜಾಲತಾಣದಲ್ಲಿ ಚರ್ಚೆಯ ವಿಷಯ**
- **ಭಾರತದ ಹೆಚ್ಚಿನ ಖಾಸಗಿ ಸಂಸ್ಥೆಗಳಲ್ಲಿ ಅರ್ಧ ದಿನದಿಂದ ಏಳು ದಿನದ ವರೆಗೆ ಏಕಕಾಲಕ್ಕೆ ಸಿಕ್ ಲೀವ್ ಹಾಕಬಹುದು**
- **ಜರ್ಮನಿಯ ಫ್ರಾಂಕ್ ಫರ್ಟ್ ಕೇಂದ್ರ ರೈಲ್ವೇ ನಿಲ್ದಾಣದ ಬಳಿ ಇರುವ ಬೇಹುಗಾರಿಕೆ ಕಂಪೆನಿ ಲೆನ್ಸ್ ಗ್ರೂಪ್**

---

# ತಣ್ಣಗಾಗುವ ಲಕ್ಷಣ ತೋರದ ಲಾಸ್ ಏಂಜಲಿಸ್ ಕಾಡ್ಗಿಚ್ಚು

## ಕಾಡ್ಗಿಚ್ಚು ನಂದಿಸಲು ಲಾಸ್ ಏಂಜಲಿಸ್ ಸ್ಥಳೀಯ ಆಡಳಿತ ಹರಸಾಹಸ, ಖಾಸಗಿ ಅಗ್ನಿಶಾಮಕ ದಳದ ಮೊರೆ


**ಲಾಸ್ ಏಂಜಲಿಸ್:** ಅಮೆರಿಕದ ಲಾಸ್ ಏಂಜಲಿಸ್‌ನಲ್ಲಿ ಹಬ್ಬಿರುವ ಭೀಕರ ಕಾಡ್ಗಿಚ್ಚು ತಣ್ಣಗಾಗುವ ಲಕ್ಷಣ ಕಂಡುಬರುತ್ತಿಲ್ಲ. ಕಾಡ್ಗಿಚ್ಚಿನ ಪರಿಣಾಮ ಹಬ್ಬಿರುವ ಬೆಂಕಿಯು, ಭಾರೀ ಗಾಳಿಯಿಂದಾಗಿ ಮತ್ತಷ್ಟು ಪ್ರದೇಶಗಳಿಗೆ ವ್ಯಾಪಿಸುತ್ತಿದೆ. ಅಲ್ಲದೇ ರಕ್ಷಣಾ ಕಾರ್ಯಾಚರಣೆಗೂ ಅಡ್ಡಿಯಾಗಿದ್ದು, ಇದುವರೆಗೂ ಸುಮಾರು 25 ಜನ ಈ ಘೋರ ಕಾಡ್ಗಿಚ್ಚಿಗೆ ಬಲಿಯಾಗಿದ್ದಾರೆ.

ಲಾಸ್ ಏಂಜಲಿಸ್‌ನ ಪೆಸಿಫಿಕ್ ಪ್ಯಾಲಸೇಡ್ಸ್ ಮತ್ತು ಈಟನ್ ಪ್ರದೇಶದಲ್ಲಿ ಹೆಚ್ಚು ಸಾವು-ನೋವುಗಳು ಸಂಭವಿಸಿರುವ ವರದಿಯಾಗಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಲಿದೆ ಎಂದು ರಕ್ಷಣಾ ಕಾರ್ಯಾಚರಣೆ ಸಿಬ್ಬಂದಿ ಆತಂಕ ವ್ಯಕ್ತಪಡಿಸಿದ್ದಾರೆ. ಪೆಸಿಫಿಕ್ ಪ್ಯಾಲಸೇಡ್ಸ್ ಪ್ರದೇಶದಲ್ಲಿ 8 ಜನ ಮತ್ತು ಈಟನ್ ಪ್ರದೇಶದಲ್ಲಿ 17 ಜನ ಕಾಡ್ಗಿಚ್ಚಿಗೆ ಬಲಿಯಾಗಿದ್ದಾರೆ ಎಂದು ಲಾಸ್ ಏಂಜಲಿಸ್ ಕೌಂಟಿ ಶೆರಿಫ್ ಆಬರ್ಟ್ ಲೂನಾ ಮಾಹಿತಿ ನೀಡಿದ್ದಾರೆ.

ಬೆಂಕಿಯ ಬಿರುಗಾಳಿಗೆ ತತ್ತರಿಸಿದ ಜನವಸತಿ

ಇದೇ ವೇಳೆ ಈ ಭೀಕರ ಕಾಡ್ಗಿಚ್ಚು ವನ್ಯಜೀವಿಗಳ ಮೇಲೂ ಪರಿಣಾಮ ಬೀರಿದ್ದು, ಭಾರೀ ಸಂಖ್ಯೆಯಲ್ಲಿ ವನ್ಯಜೀವಿಗಳು ಮೃತಪಟ್ಟಿವೆ ಎಂಬ ಆಘಾತಕಾರಿ ಸುದ್ದಿ ಹೊರಬಿದ್ದಿದೆ.

ಇನ್ನು ಹಾಲಿವುಡ್ ಪ್ರದೇಶದಲ್ಲೂ ಕಾಡ್ಗಿಚ್ಚಿನ ರುದ್ರ ನರ್ತನ ಮುಂದುವರೆದಿದ್ದು, ಜನರು ತಮ್ಮ ಮನೆಗಳನ್ನು ತೊರೆದು ಸುರಕ್ಷಿತ ಪ್ರದೇಶಗಳತ್ತ ವಲಸೆ ಹೊರಟಿದ್ದಾರೆ. ರಕ್ಷಣಾ ಕಾರ್ಯಾಚರಣೆ ಸಿಬ್ಬಂದಿಯ ಆಗಮನಕ್ಕಾಗಿ ಕಾಯುತ್ತಿರುವ ಸಾವಿರಾರು ಜನರು, ಅತ್ಯಂತ ವಿಷಮ ಪರಿಸ್ಥಿತಿಯಲ್ಲಿ ಕುಟುಂಬ ಸಮೇತರಾಗಿ ವಲಸೆ ಹೋಗುತ್ತಿರುವ ದೃಶ್ಯಗಳು ಸಾಮಾನ್ಯವಾಗಿವೆ. ರಕ್ಷಣಾ ಕಾರ್ಯಾಚರಣೆಗೆ



ನೀರಿನ ಅಭಾವ ಬಹುದೊಡ್ಡ ಸಮಸ್ಯೆಯಾಗಿದ್ದು, ನಿರಂತರ ಕಾರ್ಯಾಚರಣೆಗಳಿಂದ ಅಗ್ನಿಶಾಮಕ ದಳದ ಸಿಬ್ಬಂದಿ ಕೂಡ ಬಳಲಿದ್ದಾರೆ.

ರಕ್ಷಣಾ ಕಾರ್ಯಾಚರಣೆಗೆ ಯಾವುದೇ ನಿರ್ದಿಷ್ಟ ಸಮಯ ನಿಗದಿಪಡಿಸಿಲ್ಲವಾದ್ದರಿಂದ, ಅಗ್ನಿಶಾಮಕ ದಳದ ಸಿಬ್ಬಂದಿ ನಿರಂತರವಾಗಿ ಯಾವುದೇ ದೈಹಿಕ ವಿಶ್ರಾಂತಿ ಪಡೆಯದೇ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಈ ಮಧ್ಯೆ ಲಾಸ್ ಏಂಜಲಿಸ್ ಪ್ರದೇಶದಲ್ಲಿ ಖಾಸಗಿ ಅಗ್ನಿಶಾಮಕ ದಳದ ಬೇಡಿಕೆ ಹೆಚ್ಚುತ್ತಿದ್ದು, ಜನರು ದುಪ್ಪಟ್ಟು ದರ ನೀಡಿ ಅಗ್ನಿಶಾಮಕ ಸೇವೆಯನ್ನು ಪಡೆಯಲು ಸಿದ್ಧರಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ. ತಮ್ಮ ಮನೆ ಹಾಗೂ ಆಸ್ತಿಪಾಸ್ತಿಯನ್ನು ಬೆಂಕಿಯಿಂದ ರಕ್ಷಿಸಿಕೊಳ್ಳಲು, ಖಾಸಗಿ ಅಗ್ನಿಶಾಮಕ ದಳಕ್ಕೆ ದುಪ್ಪಟ್ಟು ಹಣ ನೀಡಲು ಜನ ತಯಾರಾಗಿದ್ದಾರೆ ಎನ್ನಲಾಗಿದೆ.

- **ಆರುವುದೆಂತು ಲಾಸ್ ಏಂಜಲಿಸ್ ಭೀಕರ ಕಾಡ್ಗಿಚ್ಚು?**
- **ಬೆಂಕಿಯ ಬಿರುಗಾಳಿಗೆ ತತ್ತರಿಸಿ ಹೋದ ಜನವಸತಿ ಪ್ರದೇಶಗಳು**
- **ಖಾಸಗಿ ಅಗ್ನಿಶಾಮಕ ದಳದ ಮೊರೆ ಹೋದ ಸ್ಥಳೀಯರು**
- **ಕಾಡ್ಗಿಚ್ಚು ನಂದಿಸಲು ಲಾಸ್ ಏಂಜಲಿಸ್ ಸ್ಥಳೀಯ ಆಡಳಿತ ಹರಸಾಹಸ**

### ಕ್ಯಾಲಿಫೋರ್ನಿಯಾ ಕಾಡ್ಗಿಚ್ಚು - ಅವಶೇಷಗಳ ನಡುವೆ ಲೂಟಿ

**ಇನ್ನು ಕಾಡ್ಗಿಚ್ಚಿನ ದುರ್ಲಾಭ ಪಡೆಯುತ್ತಿರುವ ಕೆಲವು ದುರುಳರು, ಮನೆಗಳನ್ನು ಲೂಟಿ ಮಾಡುತ್ತಿರುವ ಕುರಿತು ಅಮೆರಿಕದ ಮಾಧ್ಯಮಗಳಲ್ಲಿ ವರದಿಯಾಗಿದೆ. ಮನೆ ತ್ಯಜಿಸಿ ವಸಲೆ ಹೊರಟವರ ಮೇಲೆ ದಾಳಿ ಮಾಡುವ ಲೂಟಿಕೋರರು, ಅವರ ವಸ್ತುಗಳನ್ನು ದೋಚಿ ಪರಾರಿಯಾಗುತ್ತಾರೆ ಎಂದು ಹೇಳಲಾಗಿದೆ. ಒಟ್ಟಿನಲ್ಲಿ ಲಾಸ್ ಏಂಜಲಿಸ್ ಕಾಡ್ಗಿಚ್ಚು ಭೀಕರ ಮಾನವ ಸಂಕಷ್ಟಗಳನ್ನು ತಂದೊಡ್ಡಿದ್ದು, ಈ ಭೀಕರ ನೈಸರ್ಗಿಕ ವಿಕೋಪ ಅಮೆರಿಕವನ್ನು ಹಿಂಡಿ ಹಿಪ್ಪೆ ಮಾಡಿದೆ ಎಂದು ಹೇಳಬಹುದು.**

---

## ಮಿನಿ ನ್ಯೂಸ್

### ಮಾಲ್ಡಾದಲ್ಲಿ ಹಾಡಹಗಲೇ ಗುಂಡಿಕ್ಕಿ ಟಿಎಂಸಿ ಕಾರ್ಯಕರ್ತನ ಹತ್ಯೆ

**ಮಾಲ್ಡಾ:** ಪಶ್ಚಿಮ ಬಂಗಾಳದ ಮಾಲ್ಡಾ ಜಿಲ್ಲೆಯಲ್ಲಿ ಟಿಎಂಸಿ ಹಿರಿಯ ಕೌನ್ಸಿಲರ್ ಒಬ್ಬರು ಹತ್ಯೆಯಾಗಿ ಇನ್ನೂ ಹದಿನೈದು ದಿನ ಕಳೆದಿಲ್ಲ. ಹೀಗಿರುವಾಗಲೇ ಮತ್ತೊರ್ವ ಟಿಎಂಸಿ ಕಾರ್ಯಕರ್ತನನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿದೆ.

ಅದೇ ವಲಯದಲ್ಲಿ ಮಂಗಳವಾರ ಹಾಡಹಗಲೇ ನಡೆದ ಶೂಟೌಟ್ ಘಟನೆಯಲ್ಲಿ ಟಿಎಂಸಿಯ ಇತರ ಇಬ್ಬರು ಕಾರ್ಯಕರ್ತರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಹಿಂದಿನ ಘಟನೆಯಂತೆಯೇ ಪಕ್ಷದೊಳಗೆ ಆಂತರಿಕ ಪೈಪೋಟಿಯಿಂದ ಶೂಟೌಟ್ ನಡೆದಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಮೃತನನ್ನು ಹಸನ್ ಶೇಕ್ ಎಂದು ಗುರುತಿಸಲಾಗಿದೆ. ಟಿಎಂಸಿ ಸ್ಥಳೀಯ ಸಮಿತಿ ಅಧ್ಯಕ್ಷ ಬಕುಲ್ ಶೇಕ್ ಮತ್ತು ಎಸರುದ್ದೀನ್ ಶೇಖ್ ಗಾಯಗೊಂಡಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಟಿಎಂಸಿ ಸ್ಥಳೀಯ ಸಮಿತಿ ಅಧ್ಯಕ್ಷರು ಪಕ್ಷದ ಕಾರ್ಯಕರ್ತರೊಂದಿಗೆ ರಸ್ತೆ ಉದ್ಘಾಟನೆ ಕಾರ್ಯಕ್ರಮಕ್ಕೆ ತೆರಳಿದ್ದ ವೇಳೆ ಕಾಲಿಯಾಗಂಜ್ ಪ್ರದೇಶದಲ್ಲಿ ಬೆಳಗ್ಗೆ ಈ ಘಟನೆ ನಡೆದಿದೆ. ಗುಂಡೇಟಿನಿಂದ ಪಕ್ಷದ ಕಾರ್ಯಕರ್ತರೊಬ್ಬರು ಮೃತಪಟ್ಟಿದ್ದಾರೆ ಎಂದು ಮಾಲ್ಡಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವೈದ್ಯರು ಘೋಷಿಸಿದರು. ಇನ್ನಿಬ್ಬರು ಅಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅವರ ಸ್ಥಿತಿ ಚಿಂತಾಜನಕವಾಗಿದೆ.

### ತಿರುಮಲ ದೇವಸ್ಥಾನದಲ್ಲಿ ಚಿನ್ನಾಭರಣ ಕಳ್ಳತನ: ಹೊರಗುತ್ತಿಗೆ ಸಿಬ್ಬಂದಿ ಬಂಧನ

**ತಿರುಪತಿ:** ಆಂಧ್ರ ಪ್ರದೇಶದ ಪ್ರಸಿದ್ಧ ಧಾರ್ಮಿಕ ಕ್ಷೇತ್ರ, ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಭಕ್ತಾದಿಗಳಿಂದ ದೇವರಿಗೆ ಕಾಣಿಕೆಯಾಗಿ ಸ್ವೀಕರಿಸಿದ ಅರ್ಧ ಕೆಜಿಗೂ ಹೆಚ್ಚು ಚಿನ್ನವನ್ನು ಕದ್ದ ಆರೋಪದ ಮೇಲೆ ತಿರುಮಲ ತಿರುಪತಿ ದೇವಸ್ಥಾನದ (ಟಿಟಿಡಿ) ಹೊರಗುತ್ತಿಗೆ ನೌಕರನನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಮಂಗಳವಾರ ತಿಳಿಸಿದ್ದಾರೆ. ಕಳೆದ ಒಂದು ವರ್ಷದಲ್ಲಿ 10 ರಿಂದ 15 ಬಾರಿ ಬಿಸ್ಕೆಟ್ ಮತ್ತು ಆಭರಣಗಳ ರೂಪದಲ್ಲಿ ರೂ. 46 ಲಕ್ಷ ಮೌಲ್ಯದ 650 ಗ್ರಾಂ ಚಿನ್ನವನ್ನು ಕದ್ದ ಆರೋಪದ ಮೇಲೆ 40 ವರ್ಷದ ವಿ. ಪೆಂಚಲಯ್ಯ ಅವರನ್ನು ಪೊಲೀಸರು ಬಂಧಿಸಿದ್ದಾರೆ.

ಪೆಂಚಲಯ್ಯ ಪರಕಾಮಣಿಯಲ್ಲಿ ಕೆಲಸ ಮಾಡುತ್ತಿದ್ದರು. ಅಲ್ಲಿ ದೇವರಿಗೆ ಅರ್ಪಿಸಲಾದ ಕಾಣಿಕೆಗಳನ್ನು ವಿಂಗಡಿಸಲಾಗುತ್ತಿದೆ. ಅವರು ದೇವರಿಗೆ ನೀಡಲಾದ ಚಿನ್ನವನ್ನು ಕದಿಯುವುದರಲ್ಲಿ ತೊಡಗಿದ್ದರು ಎಂದು ಅಧಿಕಾರಿ ಪಿಟಿಐಗೆ ತಿಳಿಸಿದರು.

ಪರಕಾಮಣಿಯಲ್ಲಿ, ನಗದು, ಚಿನ್ನಾಭರಣ ಮತ್ತಿತರ ಕಾಣಿಕೆಗಳನ್ನು ವಿಂಗಡಿಸಲಾಗುತ್ತದೆ. ನಗದನ್ನು ಬ್ಯಾಂಕಿನಲ್ಲಿ ಠೇವಣಿಯಾಗಿಡಲಾಗುತ್ತದೆ. ಇತರ ಬೆಲೆ ಬಾಳುವ ವಸ್ತುಗಳನ್ನು ಲಾಕರ್ ನಲ್ಲಿ ಇಡಲಾಗುತ್ತದೆ. ಕಳೆದ ಎರಡು ವರ್ಷಗಳಿಂದ ಪರಕಾಮಣಿಯಲ್ಲಿ ಕೆಲಸ ಮಾಡುತ್ತಿದ್ದ ಪೆಂಚಲಯ್ಯ ಎಂಬುವರು ವಾಹನಕ್ಕೆ ಜಾರಿಸಿ ಚಿನ್ನದ ಬಿಸ್ಕತ್ ಕದಿಯಲು ಯತ್ನಿಸುತ್ತಿದ್ದಾಗ ಸಿಕ್ಕಿಬಿದ್ದಿದ್ದಾರೆ.

### ಅನಾರೋಗ್ಯದ ನಡುವೆಯೂ ಸ್ಟೀವ್ ಜಾಬ್ಸ್‌ ಪತ್ನಿಯಿಂದ ಅಮೃತ ಸ್ನಾನ

**ಪ್ರಯಾಗ್ ರಾಜ್:** ಆಪಲ್‌ನ ಸಹ ಸಂಸ್ಥಾಪಕ ಸ್ಟೀವ್ ಜಾಬ್ಸ್ ಪತ್ನಿ ಲಾರೆನ್ ಪೊವೆಲ್ ಜಾಬ್ಸ್ ಮಹಾಕುಂಭ ಮೇಳ 2025 ರಲ್ಲಿ ಭಾಗಿ ಯಾಗಲು ಭಾರತಕ್ಕೆ ಆಗಮಿಸಿದ್ದಾರೆ. ಪ್ರಯಾಗ್ ರಾಜ್ ನಲ್ಲಿ ತಂಗಿರುವ ಸ್ಟೀವ್ ಜಾಬ್ಸ್ ಪತ್ನಿಗೆ 2 ನೇ ದಿನದಂದು ಅಲರ್ಜಿ ಉಂಟಾಗಿದೆ. ಈ ಅನಾರೋಗ್ಯದ ನಡುವೆಯೂ ಲಾರೆನ್ ಪೊವೆಲ್ ಜಾಬ್ಸ್ ಕುಂಭಮೇಳದಲ್ಲಿ ಗಂಗಾ ನದಿ ಸಂಗಮದಲ್ಲಿ ಪವಿತ್ರ ಸ್ನಾನಕ್ಕೆ ಹಾಜರಾಗಲಿದ್ದಾರೆ. ಸಂತ ಸ್ವಾಮಿ ಕೈಲಾಸಾನಂದ ಗಿರಿ, ಅವರು ಸಂಗಮದಲ್ಲಿ ಸ್ನಾನ ಮಾಡುವ ಆಚರಣೆಯಲ್ಲಿ ಭಾಗವಹಿಸುತ್ತಾರೆ. ಅವರು ನನ್ನ 'ಶಿವಿರ'ನಲ್ಲಿ ವಿಶ್ರಾಂತಿ ಪಡೆಯುತ್ತಿದ್ದಾರೆ. ಅವರಿಗೆ ಸ್ವಲ್ಪ ಅಲರ್ಜಿ ಇದೆ. ಅವರು ಎಂದಿಗೂ ಜನದಟ್ಟಣೆಯ ಸ್ಥಳಕ್ಕೆ ಹೋಗಿಲ್ಲ. ಅವರು ತುಂಬಾ ಸರಳರು. ಪೂಜೆಯ ಸಮಯದಲ್ಲಿ ಅವರು ನಮ್ಮೊಂದಿಗೆ ಇದ್ದರು. ಎಂದಿಗೂ ನೋಡದವರೂ ಸಹ ನಮ್ಮ ಆಚರಣೆಗಳಲ್ಲಿ ಸೇರಲು ಬಯಸುತ್ತಾರೆ, ಇದು ನಮ್ಮ ಸನಾತನ ಧರ್ಮದ ಹಿರಿಮೆ ಎಂದು ಹೇಳಿದ್ದಾರೆ.

### ಅಸಾರಾಂ ಬಾಪುಗೆ ಮಧ್ಯಂತರ ಜಾಮೀನು

**ಜೋಧ್‌ಪುರ:** 2013ರ ಅತ್ಯಾಚಾರ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಸ್ವಯಂಘೋಷಿತ ದೇವಮಾನವ ಅಸಾರಾಂ ಬಾಪುಗೆ ರಾಜಸ್ಥಾನ ಹೈಕೋರ್ಟ್ ಮಂಗಳವಾರ ಮಾರ್ಚ್ 31ರವರೆಗೆ ಮಧ್ಯಂತರ ಜಾಮೀನು ಮಂಜೂರು ಮಾಡಿದೆ.

ವಿವಿಧ ಕಾಯಿಲೆಗಳಿಂದ ಬಳಲುತ್ತಿದ್ದ ಮತ್ತು ಚಿಕಿತ್ಸೆಯ ಅಗತ್ಯವನ್ನು ಗಮನಿಸಿದ ಸುಪ್ರೀಂ ಕೋರ್ಟ್ ಮತ್ತೊಂದು ಅತ್ಯಾಚಾರ ಪ್ರಕರಣದಲ್ಲಿ ಮಾರ್ಚ್ 31ರವರೆಗೆ ಅಸಾರಾಂ ಅವರಿಗೆ ಜನವರಿ 7ರಂದು ಮಧ್ಯಂತರ ಜಾಮೀನು ನೀಡಿತ್ತು. ಅದಾದ ವಾರದ ನಂತರ ಮತ್ತೊಮ್ಮೆ ಮಧ್ಯಂತರ ಜಾಮೀನು ಸಿಕ್ಕಿದೆ. ವೈದ್ಯಕೀಯ ಕಾರಣಗಳಿಗಾಗಿ ಸರ್ವೋಚ್ಚ ನ್ಯಾಯಾಲಯವು ಅವರಿಗೆ ಜಾಮೀನು ನೀಡಿದ ಕೂಡಲೇ, ಅಸಾರಾಂ ಪರ ವಕೀಲರು ಹೈಕೋರ್ಟ್‌ನಲ್ಲಿ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸುವಂತೆ ಮನವಿ ಮಾಡಿದರು.

### 'ಅಮೃತ ಸ್ನಾನ' ಮಾಡಿದ 1 ಕೋಟಿ ಭಕ್ತರು

**ಪ್ರಯಾಗ್‌ರಾಜ್:** ಜಗತ್ತಿನ ಅತಿ ದೊಡ್ಡ ಧಾರ್ಮಿಕ ಉತ್ಸವ ಮಹಾ ಕುಂಭಮೇಳಕ್ಕೆ ಸೋಮವಾರ ಅದ್ದೂರಿ ಚಾಲನೆ ಸಿಕ್ಕಿದೆ. 2ನೇ ದಿನವಾದ ಮಂಗಳವಾರ ಬೆಳಗ್ಗೆ ಕುಂಭಮೇಳದಲ್ಲಿ 1 ಕೋಟಿ ಭಕ್ತರು ಅಮೃತ ಸ್ನಾನ ಮಾಡಿದ್ದಾರೆ. ಮಕರ ಸಂಕ್ರಾಂತಿ ಹಿನ್ನೆಲೆ ಮಂಗಳವಾರ ಬೆಳಗ್ಗೆ 8:30 ರ ಹೊತ್ತಿಗೆ ಮಹಾ ಕುಂಭಮೇಳದಲ್ಲಿ ಒಂದು ಕೋಟಿ ಭಕ್ತರು ಅಮೃತ ಸ್ನಾನ ಮಾಡಿದರು. ಮುಂಜಾನೆ ಪಂಚಾಯತ್ ನಿರ್ವಾಣಿ ಅಖಾರದ ನಾಗಾ ಸಾಧುಗಳು ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದರು. ನಂತರ ಇತರ ಅಖಾಡಗಳ ಋಷಿಗಳು ಪವಿತ್ರ ಸ್ನಾನ ಮಾಡಿದರು. ಭಾರತ ಮತ್ತು ವಿದೇಶಗಳಿಂದ ಬಂದಿದ್ದ ಲಕ್ಷಾಂತರ ಯಾತ್ರಿಕರು ಚಳಿಯನ್ನು ಲೆಕ್ಕಿಸದೇ, ಅಮೃತ ಸ್ನಾನಕ್ಕಾಗಿ ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ಸಂಗಮವಾದ ಸಂಗಮಕ್ಕೆ ಆಗಮಿಸಿದರು. ಬ್ರಾಹ್ಮಿ ಮುಹೂರ್ತದಂದು, ಅಸಂಖ್ಯಾತ ಭಕ್ತರು ಪವಿತ್ರ ನೀರಿನಲ್ಲಿ ಮುಳುಗಿದರು. ಪಂಚಾಯತ್ ನಿರ್ವಾಣಿ ಅಖಾಡದ ನಾಗಾ ಸಾಧುಗಳು ಈಟಿ, ತ್ರಿಶೂಲ ಮತ್ತು ಕತ್ತಿಗಳಿಂದ ಅಲಂಕರಿಸಲ್ಪಟ್ಟ ರಾಜ ರೂಪದಲ್ಲಿ ಅಮೃತ ಸ್ನಾನ ಮಾಡಿದರು. ಕುದುರೆಗಳು ಮತ್ತು ರಥಗಳ ಮೇಲೆ ಸವಾರಿ ಮಾಡಿ, ಸಾಧುಗಳು ಮತ್ತು ಸಂತರು ಭವ್ಯ ಮೆರವಣಿಗೆ ಮುನ್ನಡೆಸಿದರು.



# ಡ್ರಗ್ ಕೇಸ್‌ನಲ್ಲಿ ರಾಗಿಣಿ ನಿರಪರಾಧಿ

ರಾಗಿಣಿ ದ್ವಿವೇದಿ ಅವರ ವಿರುದ್ಧ ದಾಖಲಾಗಿದ್ದ ಡ್ರಗ್ಸ್ ಪ್ರಕರಣದಲ್ಲಿ ಹೈಕೋರ್ಟ್ ನಿರಪರಾಧಿ ಎಂದು ತೀರ್ಪು ನೀಡಿದೆ. ಸಾಕ್ಷ್ಯಾಧಾರ ಕೊರತೆಯಿಂದ ಪ್ರಕರಣ ರದ್ದಾಗಿದೆ. ನಾಲ್ಕು ವರ್ಷಗಳ ಕಾನೂನು ಹೋರಾಟದ ಬಳಿಕ ಈ ತೀರ್ಪು ರಾಗಿಣಿಗೆ ದೊಡ್ಡ ನೆಮ್ಮದಿ ನೀಡಿದೆ. ಅವರ ವೃತ್ತಿ ಜೀವನದ ಮೇಲೆ ಈ ಪ್ರಕರಣ ಸಾಕಷ್ಟು ಪರಿಣಾಮ ಬೀರಿತ್ತು.

ನಟಿ ರಾಗಿಣಿ ದ್ವಿವೇದಿ ಹೆಸರು ಡ್ರಗ್ಸ್ ಕೇಸ್‌ನಲ್ಲಿ ತಳುಕು ಹಾಕಿಕೊಂಡಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿ 2020ರ ಸೆಪ್ಟೆಂಬರ್‌ನಲ್ಲಿ ರಾಗಿಣಿ ಅವರನ್ನು ಬಂಧಿಸಲಾಗಿತ್ತು. ಅವರು ಹಲವು ದಿನ ಜೈಲಿನಲ್ಲೂ ಕೂಡ ಇದ್ದರು. ನಾಲ್ಕು ವರ್ಷಗಳ ಬಳಿಕ ಡ್ರಗ್ಸ್ ಕೇಸ್‌ನಲ್ಲಿ ರಾಗಿಣಿ ನಿರಪರಾಧಿ ಎಂಬುದು ಸಾಬೀತಾಗಿದೆ. ನಟಿಯ ವಿರುದ್ಧ ಯಾವುದೇ ಸಾಕ್ಷ್ಯ ಸಿಗದ ಕಾರಣ ಕೇಸ್ ಖುಲಾಸೆ ಮಾಡಿ ಹೈಕೋರ್ಟ್ ಆದೇಶ ನೀಡಿದೆ. ಇದರಿಂದ ರಾಗಿಣಿ ಅವರು ರಿಲೀಫ್ ಆಗಿದ್ದಾರೆ. ಡ್ರಗ್ ಮಾಫಿಯಾದೊಂದಿಗೆ ನಂಟು ಹೊಂದಿದ ಆರೋಪ ರಾಗಿಣಿ ಮೇಲೆ ಇತ್ತು. ಪಾರ್ಟಿ ಆಯೋಜಿಸಿ ಡ್ರಗ್ಸ್ ಬಳಕೆಗೂ ಅವರು ಅವಕಾಶ ಮಾಡಿಕೊಟ್ಟಿದ್ದರು ಎನ್ನಲಾಗಿತ್ತು. ಈ ಕಾರಣಕ್ಕೆ ಎನ್‌ಡಿಪಿಎಸ್ ಆಯಕ್ಟ್ ಅಡಿಯಲ್ಲಿ ಅವರ ವಿರುದ್ಧ ಕೇಸ್ ದಾಖಲಿಸಲಾಗಿತ್ತು. ಆದರೆ ಈ ಬಗ್ಗೆ ಯಾವುದೇ ಸಾಕ್ಷ್ಯಾಧಾರ ಸಿಕ್ಕಿಲ್ಲ ಎನ್ನಲಾಗಿದೆ.

ಕೇವಲ ಸಹ ಆರೋಪಿಗಳ ಹೇಳಿಕೆ ಆಧರಿಸಿ ರಾಗಿಣಿ ವಿರುದ್ಧ ಕೇಸ್ ದಾಖಲಿಸಲಾಗಿತ್ತು. ಆದರೆ, ಯಾವುದೇ ಸಾಕ್ಷ್ಯಗಳನ್ನು ಒದಗಿಸಿಲ್ಲ ಎಂದು ರಾಗಿಣಿ ಪರ ವಕೀಲ ಎ. ಮೊಹಮ್ಮದ್ ತಾಹಿರ್ ವಾದ ಮಾಡಿದ್ದಾರೆ. ಈ ವಾದವನ್ನು ಪರಿಗಣಿಸಿದ ನ್ಯಾಮೂರ್ತಿ ಹೇಮಂತ್ ಚಂದನ್ ಗೌಡರ್ ಅವರ ನೇತೃತ್ವದ ಹೈಕೋರ್ಟ್ ಏಕಸದಸ್ಯ ಪೀಠ ಪ್ರಕರಣ ರದ್ದುಪಡಿಸಿ ಆದೇಶ ಹೊರಡಿಸಿದೆ. ಎ 4 ಪ್ರಶಾಂತ್ ರಂಕಾ ವಿರುದ್ಧದ ಪ್ರಕರಣ ಕೂಡ ರದ್ದಾಗಿದೆ. ರಾಗಿಣಿ ದ್ವಿವೇದಿ ಅವರು 'ಕೆಂಪೇಗೌಡ' ರೀತಿಯ ಸಿನಿಮಾ ಮಾಡಿ ಗಮನ ಸೆಳೆದವರು. 'ತುಪ್ಪ ಬೇಕಾ ತುಪ್ಪ..' ಹಾಡಿಗೆ ಡ್ಯಾನ್ಸ್ ಮಾಡಿ ತುಪ್ಪದ ಹುಡುಗಿ ಎಂದೇ ಫೇಮಸ್ ಆದರು. ಡ್ರಗ್ ಕೇಸ್ ಅವರ ವೃತ್ತಿ ಜೀವನಕ್ಕೆ ದೊಡ್ಡ ಕಪ್ಪು ಚುಕ್ಕಿ ಆಗಿತ್ತು. ಆದರೆ, ಈಗ ಅವರು ಆರೋಪ ಮುಕ್ತರಾಗಿದ್ದಾರೆ.

# ರಿಟೈರ್‌ಮೆಂಟ್ ಬಗ್ಗೆ ಸುದೀಪ್ ಮಾತು



ಎಲ್ಲಾ ಹೀರೋಗೂ ಒಂದು ಟೈಮ್‌ಲೈನ್ ಇರುತ್ತೆ:


ಸುದೀಪ್ ಅವರು 'ಮ್ಯಾಕ್ಸ್' ಸಿನಿಮಾ ಗೆದ್ದ ಸಂಭ್ರಮದಲ್ಲಿದ್ದಾರೆ. ಇದರ ನಡುವೆ ಸುದೀಪ್ ನಿವೃತ್ತಿ ಬಗ್ಗೆ ಮಾತೆತ್ತಿದ್ದಾರೆ. ಎಲ್ಲಾ ಹೀರೋಗೂ ಒಂದು ಟೈಮ್ ಲೈನ್ ಅಂತ ಇರುತ್ತದೆ. ಕೊನೆಗೆ ಅವರು ಬೋರ್ ಆಗಿಬಿಡುತ್ತಾರೆ ಅಂತ ರಿಟೈರ್‌ಮೆಂಟ್ ಬಗ್ಗೆ ಸುದೀಪ್ ಮುಕ್ತವಾಗಿ ಮಾತನಾಡಿದ್ದಾರೆ. ಸಂದರ್ಶನವೊಂದರಲ್ಲಿ ಸಿನಿಮಾ ಕೆರಿಯರ್ ಬಗ್ಗೆ ಮಾತನಾಡಿದ ಸುದೀಪ್, ಟೆನ್ಶನ್ ಅಂತ ಅಲ್ಲ, ಸುಸ್ತಾಗಬಹುದು. ಆದರೆ ನೀವು ಮಾಡೋದೆಲ್ಲಾ ಕರೆಕ್ಟ್ ಮಾಡಿದ್ರೆ, ಎಲ್ಲಿ ಸುಸ್ತಾಗುತ್ತೆ ನಮಗೆಲ್ಲರಿಗೂ ವಿಶ್ರಾಂತಿ ಬೇಕು. ಹೊಟ್ಟೆ ಇದೆ ಅಂತಾ ಸಿಕ್ಕಾಪಟ್ಟೆ ತಿನ್ನೋನಲ್ಲ. ನಿದ್ದೆ ಮಾಡೋಕೆ ಹಾಸಿಗೆ ಇದೆ ಅಂತ ಸುಮ್ನೆ ನಿದ್ದೆ ಮಾಡೋನಲ್ಲ. ರಿಟೈರ್‌ಮೆಂಟ್ ಆದ ಮೇಲೆ ರೆಸ್ಟ್ ಇದ್ದೇ ಇರುತ್ತೆ ಅಲ್ವಾ ಅಲ್ಲಿಯವರೆಗೂ ಯಾಕೆ ರಿಟೈರ್ ಆಗಬೇಕು. ಕೆಲಸ ಮಾಡೋಣ ಎಂದಿದ್ದಾರೆ. ಪ್ರತಿಯೊಬ್ಬ ಹೀರೋಗೂ ಒಂದು ಟೈಮ್‌ಲೈನ್ ಅಂತ ಇರುತ್ತದೆ. ಕೊನೆಗೆ ಬೋರ್ ಆಗಿಬಿಡ್ತಾರೆ. ನಮ್ಮಂತವರಿಗೆಲ್ಲಾ ಅಣ್ಣನ ರೋಲ್, ತಮ್ಮನ ರೋಲ್, ಚಿಕ್ಕಪ್ಪ ರೋಲ್ ಸೂಟ್ ಆಗಲ್ಲ. ಮಾಡೋದು ಇಲ್ಲ. ಆಗ ನಮಗೆ ಏನು ಅನಿಸುತ್ತೆ ಅಂದ್ರೆ, ಏನಾದರೂ ಹೊಸದು ಮಾಡಬೇಕು ಅಂತ ಅನಿಸುತ್ತದೆ. ನಾನು ಹೀರೋ ಆಗಿ ಇನೊಬ್ಬರಿಗೆ ಕಾಯಿಸೋನಲ್ಲ, ಸೆಟ್‌ಗೆ ಬೇಗ ಹೋಗಿರುತ್ತೇನೆ. ಇನ್ನೂ ಹೀರೋ ಆಗಿ ಇಳಿದ ಮೇಲೆ ಬೇರೆ ಪಾತ್ರ ಮಾಡೋಕೆ ಹೋಗಿ ಮತ್ತೊಬ್ಬರಿಗೆ ಕಾಯುತ್ತಾ ಇರೋಕೆ ಆಗುತ್ತಾ ಎಂದಿದ್ದಾರೆ. ಸೆಟ್‌ಗೆ ಅವರು ಬಂದಿಲ್ಲ, ಇವರು ಬಂದಿಲ್ಲ ಅನ್ನೋದು ನಮಗೆ ಸೂಟ್ ಆಗುತ್ತಾ ಎಂದಿದ್ದಾರೆ. ಮುಂದೆ ಸಿನಿಮಾ ಇನ್ನೂ ಮಾಡಬಹುದು, ನಿರ್ದೇಶನ ಅಥವಾ ನಿರ್ಮಾಣ ಮಾಡಬಹುದು ಗೊತ್ತಿಲ್ಲ. ಸಿನಿಮಾ ನಮಗೆ ಬಹಳ ಹತ್ತಿರವಾಗಿರುವುದರಿಂದ, ಅದರಿಂದ ದೂರ ಆಗ್ತೀನಿ ಅಂತ ಹೇಳೋಕೆ ಆಗಲ್ಲ. ಒಬ್ಬ ನಾಯಕ ನಟನೆಯಿಂದ ದೂರ ಆಗಬಹುದು. ಅದನ್ನ ಇವತ್ತು ಅಟ್ಯಾಚ್‌ಮೆಂಟ್ ಮಾಡಿಕೊಂಡು ಕೂತಿಲ್ಲ. ಪೋಷಕ ನಟನಾಗಿ ಸೈರಾ ನರಸಿಂಹ ರೆಡ್ಡಿ, 'ದಬಾಂಗ್'ನಲ್ಲಿ ಬೇರೆ ತರಹದ ಪಾತ್ರ ಮಾಡುತ್ತಾ ಇರಲಿಲ್ಲ. ನಾನು ಯಾವತ್ತೂ ಹೀರೋ ಇಮೇಜ್‌ಗೆ ಅಂಟಿಕೊಂಡಿಲ್ಲ. ಆ ಪಾತ್ರಗಳನ್ನ ಮಾಡೋಕೆ ಖುಷಿ ಇದೆ. ತೃಪ್ತಿ ಇದೆ ಎಂದು ಮಾತನಾಡಿರುವ ಸುದೀಪ್ ಮುಂದಿನ ಸಿನಿಮಾ ಕೆರಿಯರ್ ಪ್ಲ್ಯಾನ್ ಬಗ್ಗೆ ತಿಳಿಸಿದ್ದಾರೆ.



# ಯುವ ಜೊತೆಯಾದ ಸಂಜನಾ ಆನಂದ್

ದೊಡ್ಮನೆ ಕುಡಿ ಯುವರಾಜ್‌ಕುಮಾರ್ ಅವರು 'ಯುವ' ಸಿನಿಮಾ ಬಳಿಕ ಎರಡನೇ ಸಿನಿಮಾವನ್ನು ಕೈಗೆತ್ತಿಕೊಂಡಿದ್ದಾರೆ. 'ಎಕ್ಕ' ಸಿನಿಮಾದಲ್ಲಿ ಯುವಗೆ ನಾಯಕಿ ಯಾರು ಎಂಬುದಕ್ಕೆ ಇದೀಗ ಉತ್ತರ ಸಿಕ್ಕಿದೆ. 'ಸಲಗ' ಬ್ಯೂಟಿ ಸಂಜನಾ ಆನಂದ್ ಹೀರೋಯಿನ್ ಆಗಿದ್ದಾರೆ. 'ಎಕ್ಕ' ಸಿನಿಮಾ ಶೂಟಿಂಗ್ ಭರದಿಂದ ನಡೆಯುತ್ತಿದೆ. ಈಗಾಗಲೇ ಯುವನ ರಕ್ತಸಿಕ್ತ ಅವತಾರದ ಪೋಸ್ಟರ್ ನೋಡಿ ಅಭಿಮಾನಿಗಳ ನಿರೀಕ್ಷೆ ಹೆಚ್ಚಿಸಿದೆ. ಹೀಗಿರುವಾಗ 'ಎಕ್ಕ' ಅಡ್ಡಾಗೆ ನಾಯಕಿಯಾಗಿ 'ಸಲಗ' ನಟಿ ಸಂಜನಾ ಎಂಟ್ರಿ ಕೊಟ್ಟಿದ್ದಾರೆ. ಯುವ ಮತ್ತು ಸಂಜನಾ ರೊಮ್ಯಾಂಟಿಕ್ ಆಗಿ ಕಾಣಿಸಿಕೊಂಡಿರುವ ಪೋಸ್ಟರ್ ಅನ್ನು ಸಂಕ್ರಾಂತಿ ಹಬ್ಬದಂದು ಚಿತ್ರತಂಡ ರಿವೀಲ್ ಮಾಡಿದೆ. 'ತೊದಲು ಪ್ರೀತಿಯ ಮೊದಲ ಪರಿಚಯ' ಎಂದು ಪೋಸ್ಟರ್‌ಗೆ ಅಡಿಬರಹ ನೀಡಿದ್ದಾರೆ. ಇನ್ನೂ ರೋಹಿತ್ ಪದಕಿ ನಿರ್ದೇಶನದ 'ಎಕ್ಕ' ಒಬ್ಬ ಯುವಕನ ಕಥೆಯನ್ನು ಹೇಳುತ್ತದೆ. ಒಬ್ಬ ಮನುಷ್ಯನು ಭೂಗತ ಲೋಕಕ್ಕೆ ತುತ್ತಾದಾಗ, ಆತನಿಗೆ ಆಗುವ ಅನುಭವಗಳನ್ನು ಹೇಳುವ ಕಥೆಯೇ 'ಎಕ್ಕ' ಸಿನಿಮಾ. 'ಎಕ್ಕ' ಚಿತ್ರದಲ್ಲಿ ಯುವ ರಾಜ್ ಕುಮಾರ್, ಸಂಪದಾ, ಅತ್ತುಲ್ ಕುಲಕರ್ಣಿ, ಶ್ರುತಿ ಕೃಷ್ಣ, ರಾಹುಲ್ ದೇವ್ ಶೆಟ್ಟಿ ಮುಂತಾದವರು ನಟಿಸುತ್ತಿದ್ದಾರೆ. ಚಿತ್ರಕಥೆಯನ್ನು ರೋಹಿತ್ ಪದಕಿ ಮತ್ತು ವಿಕ್ರಮ್ ಹತ್ವಾರ್ ರಚಿಸಿದ್ದಾರೆ. ಈ ಚಿತ್ರವನ್ನು ಶ್ರೀಮತಿ ಅಶ್ವಿನಿ ಪುನೀತ್ ರಾಜ್ ಕುಮಾರ್ ಪಿ.ಆರ್.ಕೆ ಪ್ರೊಡಕ್ಷನ್ಸ್ ಲಾಂಛನದಡಿಯಲ್ಲಿ, ಜಯಣ್ಣ ಮತ್ತು ಭೋಗೇಂದ್ರ ಜಯಣ್ಣ ಫಿಲಂಸ್ ಲಾಂಛನದಡಿಯಲ್ಲಿ ಹಾಗು ಕಾರ್ತಿಕ್ ಗೌಡ ಮತ್ತು ಯೋಗಿ ಜಿ ರಾಜ್ ಕೆ.ಆರ್.ಜಿ.ಸ್ಟುಡಿಯೋಸ್ ಲಾಂಛನದಡಿಯಲ್ಲಿ ನಿರ್ಮಿಸಲಿದ್ದಾರೆ.

# ಜಯಂ ರವಿ ಈಗ ರವಿ ಮೋಹನ್



ತಮಿಳು ಚಿತ್ರರಂಗದ ಖ್ಯಾತ ನಟರಲ್ಲಿ ಒಬ್ಬರು ಜಯಂ ರವಿ. ವಿಭಿನ್ನ ಪಾತ್ರಗಳ ಮೂಲಕ ಗಮನಸೆಳೆದ ಅವರೀಗ ಹೆಸರು ಬದಲಿಸಿಕೊಂಡಿದ್ದಾರೆ. ಜಯಂ ರವಿ ಇನ್ಮುಂದೆ ರವಿ ಮೋಹನ್ ಆಗಿ ಬದಲಾಗಿದ್ದಾರೆ. ಹೊಸ ವರ್ಷಕ್ಕೆ ಅಭಿಮಾನಿಗಳಿಗೆ ಶುಭ ಕೋರುತ್ತಾ ತಾವು ಇಲ್ಲಿವರೆಗೆ ಜಯಂ ರವಿಗೆ ನೀಡಿದ ಬೆಂಬಲವನ್ನು ರವಿ ಮೋಹನ್ ಹೆಸರಿಗೂ ನೀಡಬೇಕು ಎಂದಿದ್ದಾರೆ.

ಜಯಂ ರವಿ ಅವರು ರವಿ ಮೋಹನ್ ಆಗಿ ಹೆಸರು ಬದಲಾಯಿಸಿಕೊಳ್ಳುವುದರ ಜೊತೆಗೆ ಹೊಸ ಪಯಣ ಕೂಡ ಆರಂಭಿಸಿದ್ದಾರೆ. 'ರವಿ ಮೋಹನ್ ಸ್ಟುಡಿಯೋಸ್' ಎಂಬ ಹೆಸರಿನ ಪ್ರೊಡಕ್ಷನ್ ಹೌಸ್ ಪ್ರಾರಂಭಿಸಿದ್ದಾರೆ, ಈ ಸಂಸ್ಥೆಯಡಿ ಹೊಸ ಪ್ರತಿಭೆಗಳಿಗೆ ಅವಕಾಶ ನೀಡಿ ಒಳ್ಳೆಯ ಸಿನಿಮಾಗಳನ್ನು, ನಿರ್ದೇಶಕರು ಹಾಗೂ ಹೊಸ ನಾಯಕರನ್ನು ಚಿತ್ರರಂಗಕ್ಕೆ ಕೊಡುಗೆಯಾಗಿ ನೀಡುವುದಾಗಿ ರವಿ ಮೋಹನ್ ಘೋಷಣೆ ಮಾಡಿದ್ದಾರೆ.

ರವಿ ಮೋಹನ್ ತಮ್ಮನ್ನು ಇಲ್ಲಿವರೆಗೆ ಬೆಳೆಸಿದ ಹಾಗೂ ಬೆಂಬಲಿಸಿ ಅಭಿಮಾನಿಗಳಿಗೆ ಏನಾದರೂ ಮರಳಿ ಕೊಡಬೇಕೆಂಬ ತೀರ್ಮಾನಕ್ಕೆ ಬಂದಿದ್ದಾರೆ. ಅದಕ್ಕಾಗಿ ರವಿ ಮೋಹನ್ ಫ್ಯಾನ್ಸ್ ಕ್ಲಬ್‌ಗಳು ರವಿ ಮೋಹನ್ ಫ್ಯಾನ್ಸ್ ಫೌಂಡೇಶನ್ ಎಂಬ ರಚನಾತ್ಮಕ ಸಂಸ್ಥೆಯಾಗಿ ಪರಿವರ್ತನೆಯಾಗಿವೆ. ಈ ಫೌಂಡೇಷನ್ ಮೂಲಕ ಅಗತ್ಯವಿರುವ ಎಲ್ಲಾರಿಗೂ ಸಹಾಯ ಮಾಡುವುದಾಗಿ ರವಿ ಮೋಹನ್ ತಿಳಿಸಿದ್ದಾರೆ.

# ಸಂಕ್ರಾಂತಿ ಹಬ್ಬದ ಸಂಭ್ರಮದಲ್ಲಿ ಸ್ಯಾಂಡಲ್‌ವುಡ್ ತಾರೆಯರು

ಮಕರ ಸಂಕ್ರಾಂತಿ ಹಿಂದೂಗಳ ಪ್ರಮುಖ ಹಬ್ಬಗಳಲ್ಲೊಂದು. ವರ್ಷದ ಮೊದಲಹಬ್ಬ ಇದಾಗಿದ್ದು, ಎಲ್ಲೆಡೆ ಅತ್ಯಂತ ಸಂಭ್ರಮದಿಂದ ಆಚರಿಸಲಾಗುತ್ತದೆ. ಇದೀಗ ಸ್ಯಾಂಡಲ್‌ವುಲ್‌ನಲ್ಲೂ ಸಂಕ್ರಾಂತಿ ಸಂಭ್ರಮ ಮನೆ ಮಾಡಿದೆ. ಸೆಲೆಬ್ರಿಟಿಗಳು ಸಂಕ್ರಾಂತಿ ಹಬ್ಬವನ್ನು ಸಡಗರಿದಿಂದ ಆಚರಿಸಿದ್ದಾರೆ. ಡಿವೈನ್ ಸ್ಟಾರ್ ರಿಷಬ್ ಶೆಟ್ಟಿ ಮನೆಯಲ್ಲಿ ಸಂಕ್ರಾಂತಿ ಹಬ್ಬ ಜೋರಾಗಿದೆ. ಕುಂದಾಪುರದಲ್ಲಿ ಕುಟುಂಬದೊಂದಿಗೆ ಅದ್ದೂರಿಯಾಗಿ ರಿಷಬ್ ಹಬ್ಬ ಸೆಲೆಬ್ರೇಟ್ ಮಾಡಿದ್ದಾರೆ. ಸಿನಿಮಾ ಕೆಲಸಕ್ಕೆ ಬ್ರೇಕ್ ಹಾಕಿ ಹಬ್ಬದ ಆಚರಣೆಯ ಫೋಟೋವನ್ನು ನಟ ಹಂಚಿಕೊಂಡಿದ್ದಾರೆ.



ನಟಿ ಶ್ವೇತಾ ಶ್ರೀವಾಸ್ತವ್ ಅವರು ಮಗಳೊಂದಿಗೆ ಕಾರ್ಕಳದಲ್ಲಿ ಹಬ್ಬ ಆಚರಿಸಿದ್ದಾರೆ. ನನ್ನ ಅಜ್ಜನ ಊರು ಕಾರ್ಕಳ. ಸುಗ್ಗಿ ಸಂಭ್ರಮ ಶುರುವಾಗಿದೆ. ನಿಮ್ಮ ಪ್ರಯತ್ನಗಳೆಲ್ಲವೂ ಫಲ ಕೊಡಲಿ. ಯಶಸ್ಸು ಹಾಗೂ ಸಂತೋಷ ನಿಮ್ಮ ಜೀವನದಲ್ಲಿ ತುಂಬಿರಲಿ ಎಲ್ಲಾರಿಗೂ ಮಕರ ಸಂಕ್ರಾಂತಿಯ ಶುಭಾಶಯಗಳು ಎಂದು ನಟಿ ಇನ್ಸ್ಟಾಗ್ರಾಂ ಖಾತೆಯಲ್ಲಿ ಬರೆದುಕೊಂಡಿದ್ದಾರೆ. 'ಬಿಗ್ ಬಾಸ್' ಖ್ಯಾತಿಯ ದಿವ್ಯಾ ಉರುಡುಗ ಅವರು 'ನಿನಗಾಗಿ' ಸೀರಿಯಲ್ ಸೆಟ್‌ನಲ್ಲಿ ಸಂಕ್ರಾಂತಿ ಹಬ್ಬ ಆಚರಿಸಿದ್ದಾರೆ.

ಇನ್ನೂ ಧ್ರುವ ಸರ್ಜಾ ಫಾರಂ ಹೌಸ್‌ನಲ್ಲಿ 'ಕೆಡಿ' ಚಿತ್ರತಂಡ ಜೊತೆ ಹಬ್ಬ ಸೆಲೆಬ್ರೇಟ್ ಮಾಡಿದ್ದಾರೆ. ಡೈರೆಕ್ಟರ್ ಪ್ರೇಮ್, ರೀಷ್ಮಾ ನಾಣಯ್ಯ ಜೊತೆ ಹಬ್ಬ ಸೆಲೆಬ್ರೇಟ್ ಮಾಡಿದ್ದಾರೆ. ಗೋವಿಗೆ ಪೂಜೆ ಮಾಡಿಸಿದ್ದಾರೆ.

# ಟೀಮ್ ಇಂಡಿಯಾ ಆಟಗಾರರಿಗೆ ಬಿಸಿ ಮುಟ್ಟಿಸಲು ಮುಂದಾದ ಬಿಸಿಸಿಐ

ಟೀಮ್ ಇಂಡಿಯಾ ಆಟಗಾರರಿಗೆ ಪ್ರತಿ ಪಂದ್ಯಕ್ಕೆ ನಿಗದಿತ ಸಂಭಾವನೆ ನೀಡಲಾಗುತ್ತದೆ. ಆದರೆ ಇದನ್ನು ಪುನರ್‌ಪರಿಶೀಲಿಸಲು ಇದೀಗ ಬಿಸಿಸಿಐ ಮುಂದಾಗಿದೆ. ಅಲ್ಲದೆ ಮುಂಬರುವ ದಿನಗಳಲ್ಲಿ ಪ್ರದರ್ಶನಕ್ಕೆ ತಕ್ಕಂತೆ ವೇತನ ನೀಡುವ ಬಗ್ಗೆ ಚರ್ಚಿಸಲಾಗಿದೆ. ಈ ಮೂಲಕ ಟೀಮ್ ಇಂಡಿಯಾ ಆಟಗಾರರಿಗೆ ಬಿಸಿಸಿಐ ಮುಟ್ಟಿಸಲು ಪ್ಲ್ಯಾನ್ ರೂಪಿಸಲಾಗುತ್ತಿದೆ.

ನ್ಯೂಝಿಲೆಂಡ್ ವಿರುದ್ಧ ಹೀನಾಯ ಸೋಲು, ಆಸ್ಟ್ರೇಲಿಯಾ ವಿರುದ್ಧದ ಶೋಚನೀಯ ಸೋಲುಗಳ ಬಳಿಕ ಬಿಸಿಸಿಐ ಎಚ್ಚೆತ್ತುಕೊಂಡಿದೆ. ಈ ಬಗ್ಗೆ ಚರ್ಚಿಸಲೆಂದೇ ಕೆಲ ದಿನಗಳ ಹಿಂದೆ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ, ಕೋಚ್ ಗೌತಮ್ ಗಂಭೀರ್ ಅವರೊಂದಿಗೆ ಬಿಸಿಸಿಐ ಪರಿಶೀಲನಾ ಸಭೆ ನಡೆಸಿದೆ. ಈ ಸಭೆಯಲ್ಲಿ ಆಟಗಾರರ ವೇತನ ಕಡಿತದ ಬಗ್ಗೆಯೂ ಚರ್ಚಿಸಲಾಗಿದೆ ಎಂದು ವರದಿಯಾಗಿದೆ. ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿಯ ಪ್ರಕಾರ, ಟೀಮ್ ಇಂಡಿಯಾ ಆಟಗಾರರಿಗೆ ಅವರ ಪ್ರದರ್ಶನಕ್ಕೆ ಅನುಗುಣವಾಗಿ ಸಂಭಾವನೆ ನೀಡುವ ಬಗ್ಗೆ ಬಿಸಿಸಿಐ ಅಧಿಕಾರಿಗಳು ಚರ್ಚಿಸಿದ್ದಾರೆ. ಅಂದರೆ ಚೆನ್ನಾಗಿ ಆಡಿದರೆ ಮಾತ್ರ ಉತ್ತಮ ಸಂಭಾವನೆ ಪಡೆಯಲಿದ್ದಾರೆ. ಇಲ್ಲದಿದ್ದರೆ ವೇತನ ಕಡಿತವಾಗಲಿದೆ.



ಆಟಗಾರರನ್ನು ಜವಾಬ್ದಾರಿಯುತ ಸ್ಥಾನದಲ್ಲಿರಿಸಲು ಇಂತಹ ಕಠಿಣ ಕ್ರಮಗಳನ್ನು ಕೈಗೊಳ್ಳಲು ಬಿಸಿಸಿಐ ಚರ್ಚೆ ನಡೆಸಿದ್ದು, ಈ ಮೂಲಕ ವಿಶ್ವ ಕ್ರಿಕೆಟ್‌ನಲ್ಲಿ ಭಾರತ ತಂಡದ ಪ್ರಾಬಲ್ಯವನ್ನು ಕಾಪಾಡಿಕೊಳ್ಳಲು ಚಿಂತಿಸಲಾಗಿದೆ.

**ಆಡಿ ದುಡ್ಡು ಮಾಡಿ:** ಪರಿಶೀಲನಾ ಸಭೆಯಲ್ಲಿ ನೀಡಿದ ಸಲಹೆಗಳ ಪ್ರಕಾರ,

| ಟೀಮ್ ಇಂಡಿಯಾ ಆಟಗಾರರ ಸಂಭಾವನೆ | |
|---|---|
| ಟೆಸ್ಟ್ ಸಂಭಾವನೆ | ಪಂದ್ಯಕ್ಕೆ 15 ಲಕ್ಷ ರೂ. |
| ಪ್ಲೇಯಿಂಗ್ ಇಲೆವೆನ್‌ನ ಭಾಗವಾಗದಿರುವ ಆಟಗಾರರಿಗೆ | 7.5 ಲಕ್ಷ ರೂ. |
| ಏಕದಿನ ಸಂಭಾವನೆ | ಪಂದ್ಯಕ್ಕೆ 6 ಲಕ್ಷ ರೂ. |
| ಪ್ಲೇಯಿಂಗ್ ಇಲೆವೆನ್‌ನ ಭಾಗವಾಗದಿರುವ ಆಟಗಾರರಿಗೆ | 3 ಲಕ್ಷ ರೂ. |
| ಟಿ20 ಸಂಭಾವನೆ: ಪಂದ್ಯಕ್ಕೆ | 3 ಲಕ್ಷ ರೂ. |
| ಪ್ಲೇಯಿಂಗ್ ಇಲೆವೆನ್‌ನ ಭಾಗವಾಗದಿರುವ ಆಟಗಾರರಿಗೆ | 1.5 ಲಕ್ಷ ರೂ. |

ಆಟಗಾರನ ಪ್ರದರ್ಶನವು ನಿರೀಕ್ಷೆಗೆ ತಕ್ಕಂತೆ ಇಲ್ಲದಿದ್ದರೆ, ಆತನ ಗಳಿಕೆಯ ಮೇಲೂ ಪರಿಣಾಮ ಬೀರುತ್ತದೆ. ಇದರಿಂದ ಆಟಗಾರರ ಜವಾಬ್ದಾರಿ ಹೆಚ್ಚಾಗಲಿದೆ. ಒಂದು ವೇಳೆ ಸತತ ವಿಫಲರಾದರೆ, ಹಣ ಕಡಿತದ ಜೊತೆಗೆ ತಂಡದಿಂದಲೂ ಹೊರಗಿಡಬಹುದು. ಇದರ ಹೊರತಾಗಿ ಸಂಪೂರ್ಣ ಸಂಭಾವನೆ ನೀಡಿ ವರ್ಷಪೂರ್ತಿ ಕಳಪೆ ಪ್ರದರ್ಶನ ನೀಡುವುದರಲ್ಲಿ ಅರ್ಥವಿಲ್ಲ ಎಂಬ ಅಭಿಪ್ರಾಯವನ್ನು ಬಿಸಿಸಿಐ ಅಧಿಕಾರಿಗಳು ಮುಂದಿಟ್ಟಿದ್ದಾರೆ.

ಇಲ್ಲಿ ಗಮನಿಸಬೇಕಾದ ಮುಖ್ಯ ಅಂಶವೆಂದರೆ ಒಂದು ವರ್ಷದಲ್ಲಿ 50% ಕ್ಕಿಂತ ಹೆಚ್ಚು ಟೆಸ್ಟ್ ಪಂದ್ಯಗಳಲ್ಲಿ ಕಣಕ್ಕಿಳಿಯುವ ಆಟಗಾರರಿಗೆ ಪ್ರತಿ ಪಂದ್ಯಕ್ಕೆ 30 ಲಕ್ಷ ರೂಪಾಯಿಗಳ ಆರ್ಥಿಕ ಪ್ರೋತ್ಸಾಹವನ್ನು ನೀಡಲಾಗುತ್ತದೆ. ಅಂದರೆ ಕಳೆದ ವರ್ಷ ನಡೆದ 16 ಟೆಸ್ಟ್ ಪಂದ್ಯಗಳಲ್ಲಿ ಎಂಟಕ್ಕಿಂತ ಹೆಚ್ಚು ಟೆಸ್ಟ್ ಮ್ಯಾಚ್ ಆಡಿರುವ ಆಟಗಾರರಿಗೆ ಪ್ರತಿ ಪಂದ್ಯಕ್ಕೆ 45 ಲಕ್ಷ ರೂ. ನೀಡಲಿದ್ದಾರೆ. ಇಷ್ಟೆಲ್ಲಾ ಪ್ರೋತ್ಸಾಹ ಮೊತ್ತವನ್ನು ನೀಡಿದರೂ ಆಟಗಾರರಿಂದ ನಿರೀಕ್ಷಿತ ಪ್ರದರ್ಶನ ಮೂಡಿಬಂದಿಲ್ಲ. ಹೀಗಾಗಿ ಟೀಮ್ ಇಂಡಿಯಾ ಆಟಗಾರರ ಅಸಡ್ಡೆಗೆ ಬ್ರೇಕ್ ಹಾಕಲು ಚರ್ಚೆ ನಡೆದಿದೆ. ಒಂದು ವೇಳೆ ಬಿಸಿಸಿಐ ಪ್ರದರ್ಶನಕ್ಕೆ ತಕ್ಕಂತೆ ಸಂಭಾವನೆ ನಿಯಮ ಜಾರಿಗೆ ತಂದರೆ, ಪ್ಲೇಯಿಂಗ್ ಇಲೆವೆನ್‌ನ ಭಾಗವಾಗಲಿರುವ ಆಟಗಾರರ ಸಂಭಾವನೆಯಲ್ಲಿ ಏರಿಳಿತವಾಗುವುದು ಖಚಿತ. ಈ ಮೂಲಕ ಕಳಪೆ ಪ್ರದರ್ಶನ ನೀಡುವ ಟೀಮ್ ಇಂಡಿಯಾ ಆಟಗಾರರಿಗೆ ಬಿಸಿಸಿಐ ಬಿಸಿ ಮುಟ್ಟಿಸಲಿದೆಯಾ ಕಾದು ನೋಡಬೇಕಿದೆ.

# 42ನೇ ವಯಸ್ಸಿನಲ್ಲಿ ಮತ್ತೆ ಕಣಕ್ಕಿಳಿಯಲು ಸಜ್ಜು

ಜೇಮ್ಸ್ ಅಯಂಡರ್ಸನ್ ಟೆಸ್ಟ್ ಕ್ರಿಕೆಟ್‌ನಲ್ಲಿ ಹಲವು ದಾಖಲೆಗಳನ್ನು ನಿರ್ಮಿಸಿದ್ದಾರೆ. ಅವುಗಳಲ್ಲೊಂದು 40 ಸಾವಿರ ಬಾಲ್‌ಗಳ ದಾಖಲೆ. ಅಯಂಡರ್ಸನ್ ತಮ್ಮ ಟೆಸ್ಟ್ ಕೆರಿಯರ್ ನಲ್ಲಿ ಒಟ್ಟು 40037 ಎಸೆತಗಳನ್ನು ಎಸೆಯುವ ಮೂಲಕ, ಟೆಸ್ಟ್‌ನಲ್ಲಿ 40 ಸಾವಿರಕ್ಕೂ ಅಧಿಕ ಎಸೆತಗಳನ್ನು ಎಸೆದ ವಿಶ್ವದ ಏಕೈಕ ವೇಗದ ಬೌಲರ್ ಎನಿಸಿಕೊಂಡಿದ್ದಾರೆ. ವಿಶ್ವ ಕ್ರಿಕೆಟ್ ಕಂಡಂತಹ ಅಪ್ರತಿಮ ವೇಗದ ಬೌಲರ್ ಜೇಮ್ಸ್ ಅಯಂಡರ್ಸನ್ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿ 7 ತಿಂಗಳುಗಳಾಗಿವೆ. ಈ ವಿದಾಯದ ಬೆನ್ನಲ್ಲೇ ಅವರು ಇಂಗ್ಲೆಂಡ್ ತಂಡದ ಬೌಲಿಂಗ್ ಕೋಚ್ ಆಗಿ ಹೊಸ ಇನಿಂಗ್ಸ್ ಆರಂಭಿಸಿದ್ದರು. ಆದರೀಗ ತಮ್ಮ 42ನೇ ವಯಸ್ಸಿನಲ್ಲಿ ಸ್ಪರ್ಧಾತ್ಮಕ ಕ್ರಿಕೆಟ್‌ಗೆ ಮರಳಲು ಮುಂದಾಗಿದ್ದಾರೆ. ಹೌದು, ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿರುವ ಜೇಮ್ಸ್ ಅಯಂಡರ್ಸನ್ ಮುಂಬರುವ ಕೌಂಟಿ ಚಾಂಪಿಯನ್‌ಶಿಪ್‌ನಲ್ಲಿ ಕಣಕ್ಕಿಳಿಯಲಿದ್ದಾರೆ. ಇದಕ್ಕಾಗಿ ಲಂಕಾಶೈರ್ ತಂಡದ ಜೊತೆ ಒಂದು ವರ್ಷದ ಒಪ್ಪಂದವನ್ನು ಸಹ ಮಾಡಿಕೊಂಡಿದ್ದಾರೆ.



ಈ ಒಪ್ಪಂದದ ಪ್ರಕಾರ, ಜೇಮ್ಸ್ ಅಯಂಡರ್ಸನ್ ಮುಂಬರುವ ಕೌಂಟಿ ಚಾಂಪಿಯನ್‌ಶಿಪ್‌ನಲ್ಲಿ ಪ್ರಥಮ ದರ್ಜೆ ಪಂದ್ಯಗಳನ್ನಾಡಲಿದ್ದಾರೆ.

ಅಲ್ಲದೆ ವಿಟಾಲ್ಟಿ ಟಿ20 ಬ್ಲಾಸ್ಟ್ ಟೂರ್ನಿಯಲ್ಲೂ ಲಂಕಾಶೈರ್ ಪರ ಕಣಕ್ಕಿಳಿಯಲಿದ್ದಾರೆ. ಈ ಮೂಲಕ ಸ್ಪರ್ಧಾತ್ಮಕ ಕ್ರಿಕೆಟ್‌ನಲ್ಲಿ ಮುಂದುವರೆಯಲು ಜಿಮ್ಮಿ ಅಯಡರ್ಸನ್ ನಿರ್ಧರಿಸಿದ್ದಾರೆ.

ಜೇಮ್ಸ್ ಅಯಂಡರ್ಸನ್ 2001 ರಲ್ಲಿ ಲಂಕಾಶೈರ್‌ಪರ ಪ್ರಥಮ ದರ್ಜೆ ಪಂದ್ಯವಾಡುವ ಮೂಲಕ ಕೆರಿಯರ್ ಆರಂಭಿಸಿದ್ದರು.


# ಮೊಣಕಾಲಿನಲ್ಲೇ ತಿಮ್ಮಪ್ಪನ ಮೆಟ್ಟಿಲು ಹತ್ತಿದ ಆಟಗಾರ

ನಿತೀಶ್ ಕುಮಾರ್ ರೆಡ್ಡಿ ಭಾರತದ ಪರ 5 ಟೆಸ್ಟ್ ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 1 ಶತಕದೊಂದಿಗೆ ಒಟ್ಟು 298 ರನ್ ಕಲೆಹಾಕಿದ್ದಾರೆ. ಹಾಗೆಯೇ 5 ವಿಕೆಟ್ ಕಬಳಿಸುವಲ್ಲಿ ಯಶಸ್ವಿಯಾಗಿದ್ದಾರೆ. ಇನ್ನು 3 ಟಿ20 ಪಂದ್ಯಗಳಲ್ಲಿ ಟೀಮ್ ಇಂಡಿಯಾವನ್ನು ಪ್ರತಿನಿಧಿಸಿರುವ ಅವರು 74 ರನ್ ಕಲೆಹಾಕಿದ್ದಲ್ಲದೆ, 3 ವಿಕೆಟ್ ಕಬಳಿಸಿ ಮಿಂಚಿದ್ದಾರೆ. ಟೀಮ್ ಇಂಡಿಯಾ ಆಟಗಾರ ನಿತೀಶ್ ಕುಮಾರ್ ರೆಡ್ಡಿ ಅವರ ವಿಡಿಯೋವೊಂದು ವೈರಲ್ ಆಗಿದೆ. ಈ ವಿಡಿಯೋದಲ್ಲಿ ನಿತೀಶ್ ಕುಮಾರ್ ಮೊಣಕಾಲಿನಲ್ಲೇ ತಿರುಪತಿ ತಿರುಮಲ ದೇವಸ್ಥಾನದ ಮೆಟ್ಟಿಲು ಹತ್ತುತ್ತಿರುವುದನ್ನು ಕಾಣಬಹುದು. ಆಸ್ಟ್ರೇಲಿಯಾ ವಿರುದ್ಧದ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿ ಮುಗಿಸಿ ಬಂದಿರುವ ನಿತೀಶ್ ಕುಮಾರ್ ರೆಡ್ಡಿ ಕುಟುಂಬ ಸದಸ್ಯರೊಂದಿಗೆ ತಿರುಮಲ ಶ್ರೀ ವೆಂಕಟೇಶ್ವರನ ದರ್ಶನಕ್ಕೆ ತೆರಳಿದ್ದರು. ಈ ವೇಳೆ ನಿತೀಶ್ ಕುಮಾರ್ ರೆಡ್ಡಿ ಮೊಣಕಾಲೂರಿ ಮೆಟ್ಟಿಲು ಹತ್ತಿದರು.




# ಸಂಕ್ರಾಂತಿ ಹಬ್ಬದ ಶುಭಾಶಯ ತಿಳಿಸಿದ ಡೇವಿಡ್ ವಾರ್ನರ್

ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿರುವ ಡೇವಿಡ್ ವಾರ್ನರ್ ಸದ್ಯ ಫ್ರಾಂಚೈಸಿ ಲೀಗ್‌ನಲ್ಲಿ ಮುಂದುವರೆದಿದ್ದಾರೆ. ಅದರಂತೆ ಇದೀಗ ಬಿಗ್ ಬ್ಯಾಷ್ ಲೀಗ್‌ನಲ್ಲಿ ಸಿಡ್ನಿ ಥಂಡರ್ ಪರ ಕಣಕ್ಕಿಳಿಯುತ್ತಿದ್ದಾರೆ. ಹಾಗೆಯೇ ಪಾಕಿಸ್ತಾನ್ ಸೂಪರ್ ಲೀಗ್‌ನಲ್ಲಿ ಕರಾಚಿ ಕಿಂಗ್ಸ್ ಪರ ಕಣಕ್ಕಿಳಿಯಲು ವಾರ್ನರ್ ಒಪ್ಪಂದ ಮಾಡಿಕೊಂಡಿದ್ದಾರೆ. ದೇಶದೆಲ್ಲೆಡೆ ಮಕರ ಸಂಕ್ರಾಂತಿ ಹಬ್ಬವನ್ನು ಸಂಭ್ರಮ ಸಡಗರದಿಂದ ಆಚರಿಸಲಾಗುತ್ತಿದೆ. ಈ ಸಂಭ್ರಮಕ್ಕೆ ಆಸ್ಟ್ರೇಲಿಯಾದ ಮಾಜಿ ಆಟಗಾರ ಡೇವಿಡ್ ವಾರ್ನರ್ ಶುಭಾಶಯ ತಿಳಿಸಿರುವುದು ವಿಶೇಷ. ತಮ್ಮ ಇನ್‌ಸ್ಟಾಗ್ರಾಮ್ ಖಾತೆಯ ಮೂಲಕ ವಾರ್ನರ್ ಸಂಕ್ರಾಂತಿ ಹಬ್ಬಕ್ಕೆ ವಿಶಸ್ ತಿಳಿಸಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ಸಂಕ್ರಾಂತಿ ಹಬ್ಬದ ಶುಭಾಯಶದ ಫೋಟೋ ಹಂಚಿಕೊಂಡಿರುವ ವಾರ್ನರ್, ಸೂರ್ಯನ ಬೆಳಕು ದಾರಿದೀಪವಾಗಲಿ. ಈ ಹಬ್ಬದ ದಿನವು ನಿಮಗೆ ಶಾಂತಿ, ಸಂತೋಷ ಮತ್ತು ಮೆರಗನ್ನು ಎಂದು ಬರೆದುಕೊಂಡಿದ್ದಾರೆ. ಅಲ್ಲದೆ ಈ ಪೋಸ್ಟ್ ಅನ್ನು ಸ್ಪೋರ್ಟ್ಸ್ ಹೆಚ್‌ಒ ವಿಕಾಶ್ ಕುಮಾರ್ ಹಾಗೂ ನಿರಂಜನ್ ಸರೀನ್ ಎಂಬುವರಿಗೆ ಟ್ಯಾಗ್ ಮಾಡಿದ್ದಾರೆ. ಅಂದಹಾಗೆ ಡೇವಿಡ್ ವಾರ್ನರ್ ಭಾರತೀಯರ ಹಬ್ಬಗಳಿಗೆ ಶುಭಾಶಯ ತಿಳಿಸುತ್ತಿರುವುದು ಇದೇ ಮೊದಲೇನಲ್ಲ. ಈ ಹಿಂದೆ ಗಣೇಶ ಚತುರ್ಥಿ ಸಂದರ್ಭದಲ್ಲಿ, ಘ್ನನಿವಾರಕ ಗಣಪನ ಫೋಟೋವನ್ನು ಹಂಚಿಕೊಂಡು ಸರ್ವರಿಗೂ ಶುಭಾಶಯ ತಿಳಿಸಿದ್ದರು. ಅಷ್ಟೇ ಅಲ್ಲದೆ ಅಯೋಧ್ಯೆ ರಾಮಮಂದಿರದಲ್ಲಿ ರಾಮ ಲಲ್ಲಾ ವಿಗ್ರಹದ ಪ್ರಾಣ ಪ್ರತಿಷ್ಠಾಪನಾ ಸಂದರ್ಭದಲ್ಲಿ ಭಗವಾನ್ ಶ್ರೀರಾಮನ ಅವತಾರದ ಫೋಟೋವೊಂದನ್ನು ಹಂಚಿಕೊಂಡು ಅಭಿನಂದನಾ ಸಂದೇಶವನ್ನು ತಿಳಿಸಿದ್ದರು. ಇದೀಗ ಮಕರ ಸಂಕ್ರಾಂತಿಗೆ ವಿಶಸ್ ತಿಳಿಸಿ ಎಲ್ಲಾರ ಮೆಚ್ಚುಗೆಗೆ ಪಾತ್ರವಾಗಿದ್ದಾರೆ. ಅಂದಹಾಗೆ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತರಾಗಿರುವ ಡೇವಿಡ್ ವಾರ್ನರ್ ಈ ಬಾರಿಯ ಐಪಿಎಲ್‌ನಲ್ಲಿ ಕಾಣಿಸಿಕೊಳ್ಳುವುದಿಲ್ಲ. ಮೆಗಾ ಹರಾಜಿನಲ್ಲಿ 2 ಕೋಟಿ ರೂ. ಮೂಲ ಬೆಲೆಯೊಂದಿಗೆ ಕಾಣಿಸಿಕೊಂಡಿದ್ದ ವಾರ್ನರ್ ಅವರನ್ನು ಈ ಬಾರಿ ಯಾವುದೇ ಫ್ರಾಂಚೈಸಿ ಖರೀದಿಸಿಲ್ಲ. ಹೀಗಾಗಿ ಡೇವಿಡ್ ವಾರ್ನರ್ ಪಾಕಿಸ್ತಾನ್ ಸೂಪರ್ ಲೀಗ್‌ನತ್ತ ಮುಖ ಮಾಡಿದ್ದಾರೆ.



# ಚಾಂಪಿಯನ್ಸ್ ಟ್ರೋಫಿಗೆ ಭಾರತ ತಂಡದ ಆಯ್ಕೆ

ಚಾಂಪಿಯನ್ಸ್ ಟ್ರೋಫಿಯು ಫೆಬ್ರವರಿ ತಿಂಗಳಿಂದ ಶುರುವಾಗಲಿದೆ. ಈ ಬಾರಿ ಟೂರ್ನಿಯಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿದೆ. ಈ ತಂಡಗಳನ್ನು ಎರಡು ಗ್ರೂಪ್‌ಗಳಾಗಿ ವಿಂಗಡಿಸಲಾಗಿದ್ದು, ಅದರಂತೆ ಮೊದಲ ಸುತ್ತಿನಲ್ಲಿ ಆಯಾ ಗ್ರೂಪ್‌ಗಳಲ್ಲಿನ ತಂಡಗಳ ನಡುವೆ ಪಂದ್ಯಗಳು ನಡೆಯಲಿದೆ. ಇದಾದ ಬಳಿಕ ಸೆಮಿಫೈನಲ್ ಮತ್ತು ಫೈನಲ್ ಪಂದ್ಯ ಜರುಗಲಿದೆ. ಬಹುನಿರೀಕ್ಷಿತ ಚಾಂಪಿಯನ್ಸ್ ಟ್ರೋಫಿ ಫೆಬ್ರವರಿ 19 ರಿಂದ ಶುರುವಾಗಲಿದೆ. ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಆಯೋಜಿಸಲಿರುವ ಈ ಟೂರ್ನಿಯಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿವೆ. ಈ ಎಂಟು ತಂಡಗಳಲ್ಲಿ ಈಗಾಗಲೇ 6 ತಂಡಗಳ ಘೋಷಣೆಯಾಗಿದೆ. ಇದಾಗ್ಯೂ ಆತಿಥೇಯ ಪಾಕಿಸ್ತಾನ್ ಹಾಗೂ ಭಾರತ ಚಾಂಪಿಯನ್ಸ್ ಟ್ರೋಫಿಗಾಗಿ ತಮ್ಮ ತಂಡಗಳನ್ನು ಪ್ರಕಟಿಸಿಲ್ಲ.



ಬಿಸಿಸಿಐ ಆಯ್ಕೆ ಸಮಿತಿ ಭಾರತ ತಂಡವನ್ನು ಘೋಷಿಸದಿರಲು ಮುಖ್ಯ ಕಾರಣ ವಿಜಯ ಹರ್ಝಾರೆ ಟೂರ್ನಿ ಎನ್ನಲಾಗಿದೆ. ಈ ಬಾರಿಯ ವಿಜಯ ಹರ್ಝಾರೆ ಟೂರ್ನಿಯಲ್ಲಿ ಕೆಲ ಆಟಗಾರರು ಅತ್ಯುತ್ತಮ ಪ್ರದರ್ಶನ ನೀಡಿದ್ದಾರೆ. ಆ ಆಟಗಾರರ ಪ್ರದರ್ಶನವನ್ನು ಪರಿಗಣಿಸಲು ಅಂತಿಮ ಪಂದ್ಯದವರೆಗೆ ಕಾಯಲು ನಿರ್ಧರಿಸಲಾಗಿದೆ. ವಿಜಯ ಹರ್ಝಾರೆ ಟೂರ್ನಿ ಫೈನಲ್ ಪಂದ್ಯವು ಜನವರಿ 18 ರಂದು ನಡೆಯಲಿದೆ. ಈ ಪಂದ್ಯದ ಬಳಿಕ ಆಯ್ಕೆ ಸಮಿತಿಯು ಅಂತಿಮ ಸಭೆ ನಡೆಸಲಿದ್ದು, ಆ ಬಳಿಕ ಚಾಂಪಿಯನ್ಸ್ ಟ್ರೋಫಿಗೆ ಟೀಮ್ ಇಂಡಿಯಾದ ಘೋಷಣೆಯಾಗಲಿದೆ. ಅಂದರೆ ಜನವರಿ 19 ರಂದು, ಭಾನುವಾರ ಭಾರತ ತಂಡದ ಘೋಷಣೆಯಾಗುವ ಸಾಧ್ಯತೆಯಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**